ಸಂಪುಟ: 04 ಸಂಚಿಕೆ: 353 ಪುಟಗಳು: 08 ಗುರುವಾರ 06 ಮಾರ್ಚ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833

₹5

**ಮುಂಜಾನೆ ಮಾತು**

ಧ್ಯಾನದಿಂದ ಮನಸ್ಸು ನಿರ್ಮಲವಾಗುವುದಲ್ಲದೆ, ಒಂದು ನಿರಂತರ ಜ್ಯೋತಿಯಂತೆ ಆಗುತ್ತದೆ.


# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ




## ಐಪಿಎಸ್ ಅಧಿಕಾರಿ ರೂಪಾ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ

• ಉದಯವಾಹಿನಿ, ಕೊಪ್ಪಳ

ಬೆಂಗಳೂರು ಐಪಿಎಸ್ ಅಧಿಕಾರಿ ಡಿ. ರೂಪಾ ಮೌದ್ಗಿಲ್ ರನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ತಕ್ಷಣದಿಂದ ಮತ್ತು ಮುಂದಿನ ಆದೇಶದ ತನಕ ರೇಷ್ಮೆ ಮಾರಾಟ ಮಂಡಳಿ ನಿಯಮಿತ ಎಂಡಿಯಾಗಿ ಡಿ. ರೂಪಾ ಅವರನ್ನು ವರ್ಗಾವಣೆ ಮಾಡಲಾಗಿದೆ.ಡಿ ರೂಪಾ ಅವರು ಅಂತರಿಕ ಭದ್ರತಾ ದಳ (ಐಎಸ್ ಡಿ) ಐಜಿಪಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಇತ್ತೀಚೆಗೆ ಐಜಿಪಿ ಡಿ.ರೂಪಾ ವಿರುದ್ಧ ದಾಖಲೆ ಕಳುವು ಆರೋಪ ಮಾಡಿದ್ದ ಡಿಐಜಿ ವರ್ತಿಕಾ ಕಟಿಯಾರ್ ಅವರನ್ನು ದಿಢೀರ್ ವರ್ಗಾವಣೆ: ಮಾಡಿ ಆದೇಶ ಹೊರಡಿಸಲಾಗಿತ್ತು. ಐಜಿಪಿ ಡಿ.ರೂಪಾ ಕೆಳಹಂತದ ಅಧಿಕಾರಿಗಳನ್ನು ಬಳಸಿಕೊಂಡು ತನ್ನ ಕೊಠಡಿಯ ದಾಖಲೆಗಳನ್ನು ಕಳುವು ಮಾಡಿದ್ದು, ನನ್ನ ವಿರುದ್ಧ ಷಡ್ಯಂತ್ರ ನಡೆಯುವ ಸಾಧ್ಯತೆ ಇದೆ ಎಂದು ಡಿಐಜಿ ವರ್ತಿಕಾ ಕಟಿಯಾರ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ದೂರು ನೀಡಿದ್ದರು. ದೂರು ನೀಡಿದ್ದ ವರ್ತಿಕಾ ಕಟಿಯಾರ್ ಅವರನ್ನು ಸರ್ಕಾರ ವರ್ಗಾವಣೆ ಮಾಡಿ ಆದೇಶ ಹೊರಡಿಸಿತ್ತು. ಆಂತರಿಕ ಭದ್ರತಾ ವಿಭಾಗದ ಡಿಐಜಿಯಾಗಿದ್ದ ವರ್ತಿಕಾ ಕಟಿಯಾರ್ ಅವರನ್ನು ಸಿವಿಲ್ ಡಿಫೆನ್ಸ್ ಮತ್ತು ಹೋಮ್ ಗಾರ್ಡ್ಸ್ ವಿಭಾಗಕ್ಕೆ ಡಿಐಜಿ ಹಾಗೂ ಹೆಚ್ಚುವರಿ ಕಮಾಂಡೆಂಟ್ ಆಗಿ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿತ್ತು.


## ಸಿಎಂ ಕುರ್ಚಿ ಕಾಳಗಕ್ಕೆ ಸದನದಲ್ಲಿ ಸರ್ಕಾರವನ್ನು ಕುಟುಕಿದ ಬಿಜೆಪಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರ ಭಾರಿ ಚರ್ಚೆಗೆ ಗ್ರಾಸವಾಗಿದ್ದು ಅಧಿವೇಶನದಲ್ಲಿ ಪ್ರತಿಧ್ವನಿಸಿದೆ. ಈ ಬಗ್ಗೆ ವಿಧಾನಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಬಿಜೆಪಿ ಶಾಸಕ ಸುನೀಲ್ ಕುಮಾರ್ ಆಡಳಿತಾರೂಢ ಕಾಂಗ್ರೆಸ್ ನಾಯಕರನ್ನು ಕುಟುಕಿದ್ದಾರೆ. ವಿಧಾನಸಭೆಯಲ್ಲಿ ಮಾತನಾಡಿದ ಸುನೀಲ್ ಕುಮಾರ್, ಸರ್ಕಾರದ ಸಚಿವರಲ್ಲಿಯೇ ಸಿಎಂ ಕುರ್ಚಿಗಾಗಿ ಕಾದಾಟ ಆರಂಭವಾಗಿದೆ. ಗೃಹ ಸಚಿವ ಪರಮೇಶ್ವರ್ ಅವರು ದೆಹಲಿಗೆ ಹೋಗಿ ಬರ್ತಾರೆ, ನಾನು ಸಿಎಂ ಆಗುತ್ತೇನೆ ಎನ್ನುತ್ತಾರೆ, ಮತ್ತೊಂದೆಡೆ ಡಿಸಿಎಂ ಡಿ.ಕೆ. ಶಿವಕುಮಾರ್ ಸಿಎಂ ಆಗ್ತಾರೆ ಅಂತಾರೆ. ಒಟ್ಟಾರೆ ಸರ್ಕಾರದಲ್ಲಿ ಸಿಎಂ ಬದಲಾವಣೆಯ ಚರ್ಚೆ ನಡೆಯುತ್ತಿದೆ. ಇದರಿಂದ ಜನರಿಗೆ ತಪ್ಪು ಸಂದೇಶ ರವಾನೆಯಾಗುತ್ತಿದೆ ಎಂದು ಕಿಡಿಕಾರಿದರು.

## ಈ ಕೆಲಸ ಮಾಡದಿದ್ರೆ ರದ್ದಾಗುತ್ತೆ ನಿಮ್ಮ ರೇಷನ್ ಕಾರ್ಡ್.!

• ಉದಯವಾಹಿನಿ, ಬೆಂಗಳೂರು



ಸರ್ಕಾರದ ಯೋಜನೆಗಳನ್ನು ಪಡೆಯಲು ರೇಷನ್ ಕಾರ್ಡ್ ಮುಖ್ಯವಾಗಿ ಬೇಕಾಗುತ್ತದೆ. ರೇಷನ್ ಕಾರ್ಡ್ ಸಂಬಂಧ ಕೆಲವು ಕೆಲಸ ಮಾಡದಿದ್ರೆ ರೇಷನ್ ಕಾರ್ಡ್ ರದ್ದಾಗುವ ಸಾಧ್ಯತೆಯಿದೆ.

ರೇಷನ್ ಕಾರ್ಡ್ ಗೆ ಆಧಾರ್ ಲಿಂಕ್ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಗ್ರಾಹಕರ ಪಡಿತರ ಚೀಟಿಗಳ ಜೊತೆ ಆಧಾರ್ ಕಾರ್ಡ್ ಜೋಡಣೆ ಕಡ್ಡಾಯಗೊಳಿಸಿದೆ.ಪಡಿತರ ಪಡೆಯದೆ ಇದ್ರೆ ಬಿಪಿಎಲ್ ಕಾರ್ಡ್ ರದ್ದು ಆಹಾರ ಇಲಾಖೆಯು ಆರು ತಿಂಗಳಿನಿಂದ ಪಡಿತರ ಪಡೆಯದ ಬಿಪಿಎಲ್ ಕಾರ್ಡ್ ಗಳನ್ನು ರದ್ದು ಮಾಡಲು ಮುಂದಾಗಿದೆ. 6 ತಿಂಗಳಿನಿಂದ ಪಡಿತರ ಪಡೆಯದವರ ರೇಷನ್ ಕಾರ್ಡ್ ರದ್ದು ಮಾಡುತ್ತಿದ್ದು, ಯಾರು ಪಡಿತರವನ್ನು ಪಡೆದುಕೊಳ್ಳುತ್ತಿಲ್ಲವೋ ಅಂಥವರ ಬಿಪಿಎಲ್ ಕಾರ್ಡ್ ರದ್ದುಪಡಿಸಲಾಗುತ್ತದೆ ಎನ್ನಲಾಗಿದೆ ರೇಷನ್ ಕಾರ್ಡ್ ಗೆ ಇಕೆವೈಸಿ ಮಾಡಿಸುವುದು ಕಡ್ಡಾಯ ಈಗಾಗಲೇ ಜಾರಿಗೆ ತಂದಿರುವ ಸರ್ಕಾರ ಎಲ್ಲಾ ಯೋಜನೆಗಳಿಗೆ ರೇಷನ್ ಕಾರ್ಡ್ ಕಡ್ಡಾಯವಾಗಿದೆ.

## ಮೊಟ್ಟೆ -ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಬೇಯಿಸಿ

• ಉದಯವಾಹಿನಿ, ಬೆಂಗಳೂರು

ಮೊಟ್ಟೆ ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಬೇಯಿಸಿ ಸೇವಿಸಿ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಲಹೆ ನೀಡಿದ್ದಾರೆ. ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿದ ಸಚಿವರು ಹಕ್ಕಿ ಜ್ವರದ ಪ್ರಕರಣಗಳು ರಾಜ್ಯದ ಅಲ್ಲಲ್ಲಿ ವರದಿಯಾಗುತ್ತಿದೆ ಹಕ್ಕಿಜ್ವರ ಸಾಂಕ್ರಾಮಿಕ ರೋಗವಾದರೂ, ಅದು ಹಕ್ಕಿಗಳಿಂದ ಮನುಷ್ಯರಿಗೆ ಹರಡುವುದು ಅಪರೂಪ. ಹಾಗಾಗಿ ಅನಗತ್ಯ ಆತಂಕ ಪಡುವ ಅಗತ್ಯವಿಲ್ಲ. ಆದರೂ ಮೊಟ್ಟೆ ಮತ್ತು ಮಾಂಸವನ್ನು ಸೇವಿಸುವಾಗ ಕೆಲ ಎಚ್ಚರಿಕೆಗಳನ್ನು ಪಾಲಿಸಬೇಕು. ಮೊಟ್ಟೆ ಮತ್ತು ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಅರ್ಧಗಂಟೆಗೂ ಹೆಚ್ಚು ಕಾಲ ಬೇಯಿಸಿ ಸೇವಿಸಬೇಕು. ಸೋಂಕು ಪೀಡಿತ ಕೋಳಿ ಫಾರಂ, ಮೃತ ಹಕ್ಕಿ ಅಥವಾ ಕೋಳಿಗಳ ಸಮೀಪಕ್ಕೆ ಹೋಗದೆ ಎಚ್ಚರಿಕೆ ವಹಿಸಬೇಕು ಎಂದಿದ್ದಾರೆ.ಕಾರ್ಡ್ ಕಡ್ಡಾಯವಾಗಿದೆ.

**ಡೊನಾಲ್ಡ್ ಟ್ರಂಪ್ ಅವರ ವ್ಯಾಪಾರ ಮತ್ತು ವಿದೇಶಾಂಗ ನೀತಿ ನೇರಾ ನೇರ ತೋರುತ್ತದೆ. 'ನಮ್ಮ ಸರಕುಗಳಿಗೆ ಅವರೆಷ್ಟು ಟ್ಯಾಕ್ಸ್ ಹಾಕುತ್ತಾರೋ, ನಾವೂ ಕೂಡ ಅಷ್ಟೇ ಟ್ಯಾಕ್ಸ್ ಅನ್ನು ಅವರ ಸರಕುಗಳಿಗೆ ಹಾಕುತ್ತೇವೆ' ಎಂದು ಡೊನಾಲ್ಡ್ ಟ್ರಂಪ್ ಏಪ್ರಿಲ್ 2ರಿಂದ ಜಾರಿಗೆ ಬರುವ ಹೊಸ ಟ್ಯಾರಿಫ್ ಕ್ರಮದ ಬಗ್ಗೆ ನೀಡಿದ ಚುಟುಕು ವಿವರಣೆ. 'ಟ್ರಂಪ್ ಆಡಳಿತದಲ್ಲಿ ನಿಮ್ಮ ಉತ್ಪನ್ನವನ್ನು ಅಮೆರಿಕದಲ್ಲಿ ತಯಾರಿಸದೇ ಹೋದಲ್ಲಿ ಸುಂಕ ತೆರಬೇಕಾಗುತ್ತದೆ. ಕೆಲ ಪ್ರಕರಣಗಳಲ್ಲಿ ಹೆಚ್ಚು ಸುಂಕ ಕಟ್ಟಬೇಕಾಗುತ್ತದೆ. ದಶಕಗಳ ಕಾಲ ಬೇರೆ ದೇಶಗಳು ನಮ್ಮ ಮೇಲೆ ಸುಂಕ ಹೇರಿವೆ. ಅಂಥ ದೇಶಗಳ ವಿರುದ್ಧ ಸುಂಕ ವಿಧಿಸುವ ಸರದಿ ಈಗ ನಮ್ಮದು' ಎಂದು ಡೊನಾಲ್ಡ್ ಟ್ರಂಪ್ ಸ್ಪಷ್ಟಪಡಿಸಿದ್ದಾರೆ.**

# ಸುಂಕ ಸಮರಕ್ಕೆ ದೊಡ್ಡ(ಣ್ಣ) ಹೆಜ್ಜೆ




ಏ.2ರಿಂದ ಭಾರತ, ಚೀನಾ ಮೇಲೆ ಪ್ರತಿಸುಂಕ

ಅಮೆರಿಕ ಅಧ್ಯಕ್ಷ ಘೋಷಣೆ!

• ಉದಯವಾಹಿನಿ, ದೆಹಲಿ

ಭಾರತ, ಚೀನಾ ಸೇರಿದಂತೆ ಇತರೆ ದೇಶಗಳು ನಮ್ಮ ಉತ್ಪನ್ನಗಳಿಗೆ ಹೆಚ್ಚು ಸುಂಕ ವಿಧಿಸುತ್ತಿರುವುದು ನ್ಯಾಯವಲ್ಲ ಎಂದು ಟೀಕಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇದೀಗ ಇದಕ್ಕೆ ಪ್ರತಿ ಸುಂಕ ವಿಧಿಸುವ ಕುರಿತು ಮಹತ್ವದ ಘೋಷಣೆ ಮಾಡಿದ್ದಾರೆ. ಈ ಸುಂಕಗಳು ಏಪ್ರಿಲ್ 2ರಿಂದ ಜಾರಿಗೆ ಬರಲಿವೆ ಎಂದು ತಿಳಿಸಿದ್ದಾರೆ. ಅಮೆರಿಕದ ಕಾಂಗ್ರೆಸ್‌ನ ಜಂಟಿ ಅಧಿವೇಶನ ಉದ್ದೇಶಿಸಿ ಅವರು ಮಾತನಾಡಿದರು.

ನಮ್ಮಿಂದ ಆಮದು ಮಾಡಿಕೊಳ್ಳುತ್ತಿರುವ ಸರಕುಗಳಿಗೆ ವಿದೇಶಗಳು ಹಾಕುತ್ತಿರುವ ಸುಂಕಗಳಿಗೆ ಅನುಗುಣವಾಗಿ ನಾವು ಅವರಿಂದ ಆಮದು ಮಾಡಿಕೊಳ್ಳುವ ಸರಕುಗಳಿಗೆ ಪ್ರತಿ ಸುಂಕು ವಿಧಿಸುತ್ತೇವೆ ಎಂದು ಅವರು ಹೇಳಿದ್ದಾರೆ. ಇತರೆ ದೇಶಗಳು ನಮ್ಮ ಮೇಲೆ ದಶಕಗಳಿಂದ ಸುಂಕ ಹಾಕುತ್ತಿವೆ. ಈಗ ನಾವು ಅವರ ಮೇಲೆ ಸುಂಕು ಹಾಕುವ ಸರದಿ ಬಂದಿದೆ. ಯುರೋಪಿಯನ್ ಯೂನಿಯನ್, ಚೀನಾ, ಬ್ರೆಜಿಲ್, ಭಾರತ, ಮಕ್ಸಿಕೋ ಮತ್ತು ಕೆನಡಾ ಸೇರಿದಂತೆ ಹಲವು ದೇಶಗಳು ನಾವು ಅವರಿಗೆ ವಿಧಿಸುವ ತೆರಿಗೆಗಿಂತಲೂ ಅದೆಷ್ಟೋ ಹೆಚ್ಚಿನ ಪ್ರಮಾಣದಲ್ಲಿ ಸುಂಕ ಹಾಕುತ್ತಿದ್ದಾರೆ. ಇದು ನ್ಯಾಯವಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಭಾರತ ನಮ್ಮ ವಾಹನಗಳಿಗೆ ಶೇ.100ಕ್ಕೂ ಹೆಚ್ಚು ಸುಂಕ ವಿಧಿಸುತ್ತದೆ ಎಂದು ಅವರು ಇದೇ ವೇಳೆ ತಿಳಿಸಿದರು. ಕಳೆದ ಫೆಬ್ರವರಿಯಲ್ಲಿ, ಅಧ್ಯಕ್ಷ ಟ್ರಂಪ್ ಮಾತನಾಡುತ್ತಾ, ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣವೇ ಭಾರತ ಮತ್ತು ಚೀನಾ ವಿರುದ್ಧ ಪ್ರತಿ ಸುಂಕ ಹೇರಲಿದೆ ಎಂದಿದ್ದರು.

ಪ್ರಧಾನಿ ಮೋದಿ ಅವರು ಅಮೆರಿಕ ಪ್ರವಾಸ ಕೈಗೊಂಡ ವೇಳೆಯಲ್ಲೂ ಟ್ರಂಪ್ ಈ ವಿಚಾರವನ್ನು ಸ್ಪಷ್ಟಪಡಿಸಿದ್ದರು ವಾಷಿಂಗ್ಟನ್‌ನ ಪ್ರತಿ ತೆರಿಗೆಯಿಂದ ಭಾರತವೂ ಹೊರತಾಗಿರಲಿಲ್ಲ. ಸುಂಕದ ವಿಚಾರವಾಗಿ ನನ್ನೊಂದಿಗೆ ಯಾರೂ ವಾದ ಮಾಡಲು ಸಾಧ್ಯವಿಲ್ಲ ಎಂದಿದ್ದರು.

ನಮ್ಮ ಉತ್ಪನ್ನಗಳ ಮೇಲೆ ಚೀನಾ ದುಪ್ಪಟ್ಟು ಸಂಕು ಹಾಕುತ್ತಿದೆ. ದಕ್ಷಿಣ ಕೊರಿಯಾ ಸರಾಸರಿ ನಾಲ್ಕು ಪಟ್ಟು ಸುಂಕ ಹಾಕುತ್ತಿದೆ. ನಾವು ದಕ್ಷಿಣ ಕೊರಿಯಾಗೆ ಮಿಲಿಟರಿ ಮತ್ತು ಇತರೆ ಹಲವು ರೀತಿಯಲ್ಲಿ ಸಹಕಾರ ನೀಡುತ್ತಿದ್ದೇವೆ. ಆದರೆ ಆಗುತ್ತಿರುವುದೇನು... ಈ ವ್ಯವಸ್ಥೆ ಅಮೆರಿಕಕ್ಕೆ ನ್ಯಾಯಯುವತವಾಗಿಲ್ಲ ಎಂದು ಹೇಳಿದ್ದಾರೆ. ಹೀಗಾಗಿ ಏಪ್ರಿಲ್ 2ರಿಂದ ಪ್ರತಿ ಸುಂಕ ಜಾರಿಗೆ ಬರಲಿದೆ. ಅವರು ನಮ್ಮ ಮೇಲೆ ಹೇಗೆ ಸುಂಕ ಹಾಕುತ್ತಾರೋ ಅದರಂತೆ ನಾವೂ ಹಾಕಲಿದ್ದೇವೆ. ಅವರ ತೆರಿಗೆಗೆ ಪ್ರತಿಯಾಗಿ ನಮ್ಮ ತೆರಿಗೆ ಇರುತ್ತದೆ. ಒಂದು ವೇಳೆ ಅವರು ನಮ್ಮನ್ನು ಅವರ ಮಾರುಕಟ್ಟೆಯಿಂದ ಹೊರಗಿಡಲು ಹಣಕಾಸೇತರ ಸುಂಕ ಪದ್ಧತಿ ಬಳಸಿದರೆ, ನಾವೂ ನಮ್ಮ ಮಾರುಕಟ್ಟೆಯಿಂದ ಅವರನ್ನು ಹೊರಡಗಿಡಲು ಅದೇ ವಿಧಾನವನ್ನು ಬಳಸುತ್ತೇವೆ ಎಂದು ಟ್ರಂಪ್ ಎಚ್ಚರಿಸಿದ್ದಾರೆ.

### ಟ್ವೀಟ್‌ನಲ್ಲೇನಿದೆ

ಅಮೆರಿಕ ಯುದ್ಧವನ್ನೇ ಬಯಸುವುದಾದರೆ, ಅದು ಸುಂಕದ ಯುದ್ಧ, ವ್ಯಾಪಾರ ಯುದ್ಧ ಅಥವಾ ಬೇರೆ ಯಾವುದೇ ರೀತಿಯ ಯುದ್ಧವಾಗಿರಲಿ, ನಾವು ಕೊನೆಯವರೆಗೂ ಹೋರಾಡಲು ಸಿದ್ಧರಿದ್ದೇವೆ.. ಎಂದು ಅಮೆರಿಕಕ್ಕೆ ಚೀನಾದ ರಾಯಭಾರ ಕಚೇರಿ ಟ್ವೀಟ್ ಮಾಡಿದೆ.

1 ಟ್ರೇಡ್ ವಾರ್ ಸೇರಿದಂತೆ ಎಲ್ಲಾ ರೀತಿಯ ಯುದ್ಧಕ್ಕೆ ಸಿದ್ಧ ಎಂದ ಚೀನಾ

2 ಟ್ರಂಪ್ ಸುಂಕ ನೀತಿಗೆ ಚೀನಾ ದಿಂದ ತೀಕ್ಷ್ಣ ಪ್ರತಿಕ್ರಿಯೆ

3 ವಾಣಿಜ್ಯ ಯುದ್ಧಕ್ಕೆ ಸಿದ್ಧ ಎಂದು ಸಂದೇಶ ರವಾನಿಸಿದ ಚೀನಾ

4 ಯುಎಸ್-ಚೀನಾ ವಾಣಿಜ್ಯ ಯುದ್ಧದಿಂದ ಜಾಗತಿಕ ಪರಿಣಾಮವೇನು

### ಚೀನಾ ಆಕ್ರೋಶ


ಏಷ್ಯಾದ ದೈತ್ಯ ರಾಷ್ಟ್ರ ಚೀನಾ ವಿರುದ್ಧ ಪರಸ್ಪರ ಸುಂಕ ವಿಧಿಸುವುದಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಜ್ಞೆ ಮಾಡಿದ ಬೆನ್ನಲ್ಲೇ, ಅಮೆರಿಕ ವ್ಯಾಪಾರ ಯುದ್ಧ ನಡೆಸಲು ದೃಢನಿಶ್ಚಯ ಹೊಂದಿದ್ದರೆ ಕೊನೆಯವರೆಗೂ ಹೋರಾಡಲು ಸಿದ್ಧ ಎಂದು ಚೀನಾ ಆಕ್ರೋಶ ಹೊರ ಹಾಕಿದೆ. ಚೀನಾದ ವಿದೇಶಾಂಗ ಸಚಿವಾಲಯ ಎಕ್ಸ್ ಪೋಸ್ಟ್ ನಲ್ಲಿ ಕಟುವಾದ ಪೋಸ್ಟ್ ಮಾಡಿದ್ದು, ಚೀನಾದ ಆಮದುಗಳ ಮೇಲಿನ ಸುಂಕವನ್ನು ಹೆಚ್ಚಿಸಲು ಅಮೆರಿಕವು ಕ್ಷುಲ್ಲಕ ನೆಪವಾಗಿ ಬಳಸುತ್ತಿದೆ ಎಂದು ಆಕ್ರೋಶ ಹೊರ ಹಾಕಿದೆ. ಯುದ್ಧವನ್ನು ಅಮೆರಿಕ ಬಯಸಿದರೆ, ಅದು ಸುಂಕ ಯುದ್ಧವಾಗಿರಬಹುದು, ವ್ಯಾಪಾರ ಯುದ್ಧವಾಗಿರಬಹುದು ಅಥವಾ ಯಾವುದೇ ರೀತಿಯ ಯುದ್ಧವಾಗಿರಬಹುದು, ನಾವು ಕೊನೆಯವರೆಗೂ ಹೋರಾಡಲು ಸಿದ್ಧರಿದ್ದೇವೆ ಎಂದು ಅಮೆರಿಕದಲ್ಲಿರುವ ಚೀನಾ ರಾಯಭಾರ ಕಚೇರಿ ಟ್ವಿಟ್ ಮಾಡಿದೆ. ಅಮೆರಿಕನ್ನರಿಗೆ ಅನ್ಯಾಯವಾದ ವ್ಯಾಪಾರ ನೀತಿಗಳನ್ನು ಹೊಂದಿರುವುದರಿಂದ ಭಾರತ ಸೇರಿದಂತೆ ಅಮೆರಿಕದ ಹೆಚ್ಚಿನ ವ್ಯಾಪಾರ ಪಾಲುದಾರರ ಮೇಲೆ ಏಪ್ರಿಲ್ 2ರಿಂದ ಪರಸ್ಪರ ಸುಂಕವನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ನೀಡಿ ಭಾರೀ ಸಂಚಲನ ಮೂಡಿಸಿದ್ದಾರೆ. ಕೆನಡಾ ಮತ್ತು ಮೆಕ್ಸಿಕನ್ ಆಮದುಗಳ ಮೇಲಿನ ಹೊಸ 25% ಸುಂಕ ಜಾರಿಗೆ ಬಂದ ಒಂದು ದಿನದ ನಂತರ ಟ್ರಂಪ್ ಈ ಘೋಷಣೆ ಮಾಡಿದ್ದಾರೆ.

### ಟ್ರಂಪ್ ಜತೆಗಿನ ಸಂಘರ್ಷ

'ಕಳೆದ ಶುಕ್ರವಾರ ಶ್ವೇತಭವನದಲ್ಲಿ ಏನು ನಡೆದಿದೆಯೋ ಅದಕ್ಕೆ ನಾವು ವಿಷಾದಿಸುತ್ತೇವೆ' ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಹೇಳಿದ್ದಾರೆ. ಉಕ್ರೇನ್‌ಗೆ ಸೇನಾ ನೆರವು ಸ್ಥಗಿತಗೊಳಿಸುವ ಟ್ರಂಪ್ ಸರ್ಕಾರದ ನಿರ್ಧಾರದ ಬೆನ್ನಲ್ಲೇ ಉಕ್ರೇನ್ ಅಧ್ಯಕ್ಷರಿಂದ ಈ ಹೇಳಿಕೆ ಹೊರ ಬಿದ್ದಿದೆ. ಉಕ್ರೇನ್‌ನಲ್ಲಿ ಶಾಶ್ವತ ಶಾಂತಿ ನೆಲೆಗೊಳಿಸಲು ಟ್ರಂಪ್ ಅವರ ನಾಯಕತ್ವದಲ್ಲಿ ಕೆಲಸ ಮಾಡಲು ನಾವು ಸಿದ್ಧ' ಎಂದಿದ್ದಾರೆ.'ಯುದ್ಧವನ್ನು ಮುಂದುವರಿಸಬೇಕೆಂದು ನಾವು ಬಯಸುತ್ತಿಲ್ಲ. ಈ ವಿಚಾರವಾಗಿ ಅಮೆರಿಕದೊಂದಿಗೆ ಮಾತುಕತೆ ನಡೆಸಲು ಉಕ್ರೇನ್ ಸಿದ್ಧವಿದೆ. ಉಕ್ರೇನಿಯನ್ನರಿಗಿಂತ ಶಾಂತಿ ಬಯಸುವವರು ಯಾರೂ ಇಲ್ಲ' ಎಂದು ಎಕ್ಸ್‌ನಲ್ಲಿ ಝುಲೆನ್‌ಸ್ಕಿ ಹೇಳಿದ್ದಾರೆ. 'ಉಕ್ರೇನ್ ತನ್ನ ಸಾರ್ವಭೌಮತ್ತ ಮತ್ತು ಸ್ವಾತಂತ್ರ್ಯವನ್ನು ಕಾಪಾಡಿಕೊಳ್ಳಲು ಅಮೆರಿಕವು ಎಷ್ಟು ಸಹಾಯ ಮಾಡಿದೆ ಎಂಬುದನ್ನು ನಾವು ನಿಜವಾಗಿಯೂ ಸ್ಮರಿಸುತ್ತೇವೆ. ಅಧ್ಯಕ್ಷ ಟ್ರಂಪ್ ಅವರು ಉಕ್ರೇನ್‌ಗೆ ಜಾವೆಲಿನ್ ಕ್ಷಿಪಣಿಗಳನ್ನು ಒದಗಿಸಿರುವುದನ್ನೂ ಮರೆಯುವುದಿಲ್ಲ.

### ವಿಶ್ವ ವ್ಯಾಪಾರ ಸಂಸ್ಥೆಗೆ ದೂರು

ಡೊನಾಲ್ಡ್ ಟ್ರಂಪ್ ಅವರು ಈ ಹಿಂದೆ ಚೀನಾದಿಂದ ಆಮದಾಗುತ್ತಿದ್ದ ಸರಕುಗಳ ಮೇಲೆ ವಿಧಿಸಲಾಗುತ್ತಿದ್ದ ಶೇ. 10ರಷ್ಟು ಸುಂಕವನ್ನು, ಇದೀಗ ಶೇ.20ಕ್ಕೆ ಹೆಚ್ಚಿಸಿದ್ದಾರೆ. ನ್ಯಾಯಸಮ್ಮತ ಮತ್ತು ಸಮಾನ ವಾಣಿಜ್ಯ ಸಂಬಂಧಕ್ಕೆ ಇದು ಅನಿವಾರ್ಯ ಎಂದು ಡೊನಾಲ್ಡ್ ಟ್ರಂಪ್ ತಮ್ಮ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ. ಡೊನಾಲ್ಡ್ ಟ್ರಂಪ್ ಅವರ ಈ ಸುಂಕ ನೀತಿಯನ್ನು ಖಂಡಿಸಿ, ಚೀನಾ ವಿಶ್ವ ವ್ಯಾಪಾರ ಸಂಸ್ಥೆಗೆ ಈಗಾಗಲೇ ದೂರು ನೀಡಿದೆ. ಯುನೈಟೆಡ್ ಸ್ಟೇಟ್ಸ್‌ನ ಏಕಪಕ್ಷೀಯ ತೆರಿಗೆ ಕ್ರಮಗಳು, ನಿಯಮಗಳನ್ನು ಗಂಭೀರವಾಗಿ ಉಲ್ಲಂಘಿಸುತ್ತದೆ.. ಎಂದು ಚೀನಾ ಆರೋಪ ಮಾಡಿದೆ.



## ಪ್ರಯಾಣಿಕರಿಗೆ ಮತ್ತೊಂದು ಶಾಕ್

### ಶೀಘ್ರದಲ್ಲೇ ಏರಿಕೆಯಾಗಲಿದೆ ಆಟೋ ಪ್ರಯಾಣ ದರ!


• ಉದಯವಾಹಿನಿ, ಬೆಂಗಳೂರು

ದುಬಾರಿ ದುನಿಯಾದಲ್ಲಿ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಜನಸಾಮಾನ್ಯರು ಬದುಕು ದಿನದಿಂದ ದಿನಕ್ಕೆ ದುಸ್ತರವಾಗುತ್ತಿದೆ. ಬೆಲೆ ಏರಿಕೆಯ ಬಿಸಿ ಜನರ ಜೀವನದ ಮೇಲೆ ಬರೆ ಎಳೆದಂತಾಗಿದೆ. ಕೆಲ ದಿನಗಳ ಹಿಂದೆ ಬಿಎಂಟಿಸಿ ಬಸ್ ಪ್ರಯಾಣ ದರ, ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆಯಾಗಿತ್ತು.

ಇದೀಗ ಆಟೋ ಪ್ರಯಾಣ ದರ ಕೂಡ ಹೆಚ್ಚಳವಾಗುವುದು ಫಿಕ್ಸ್ ಆಗಿದೆ. ಆಟೋ ಪ್ರಯಾಣ ದರ ಹೆಚ್ಚಳ ಮಾಡುವಂತೆ ಆಟೋ ಚಾಲಕರು ಪಟ್ಟು ಹಿಡಿದಿದ್ದಾರೆ. ಕಿ.ಮೀಗೆ 5 ರೂಪಾಯಿ, 2 ಕಿ.ಮೀ ಗೆ 10 ರೂಪಾಯಿಯಂತೆ ದರ ಏರಿಕೆ ಮಾಡುವಂತೆ ಒತ್ತಾಯಿಸಿದ್ದಾರೆ. ಈ ನಿಟ್ಟಿನಲ್ಲಿ ಇದೇ ತಿಂಗಳಲ್ಲಿ ಆಟೋ ಮೀಟರ್ ದರ ಹೆಚ್ಚಳವಾಗಿವ ಸಾಧ್ಯತೆ ಇದೆ. ಆಟೋ ಪ್ರಯಾಣ ದರ ಪರೀಷ್ಕರಣೆಗೆ ಮಾರ್ಚ್ 12ರಂದು ಬೆಳಿಗ್ಗೆ ಸಂಚಾರ ಪೂರ್ವ ವಿಭಾಗದ ಡಿಸಿಪಿ ಕಚೇರಿಯಲ್ಲಿ ಸಭೆ ಕರೆಯಲಾಗಿದ್ದು, ಸಭೆ ಬಳಿಕ ದರ ಏರಿಕೆ ಬಗ್ಗೆ, ಮಾಹಿತಿ ಲಭ್ಯವಾಗಲಿದೆ. ಒಟ್ಟಾರೆ ಆಟೋ ಪ್ರಯಾಣ ದರವೂ ಶೀಘ್ರದಲ್ಲಿ ಹೆಚ್ಚಳವಾಗುವ ಸಾಧ್ಯತೆ ದಟ್ಟವಾಗಿದೆ.

## ಖಜಾನೆಗೆ ಬಿಲ್ಲುಗಳನ್ನು ಸಲ್ಲಿಸುವ ಬಗ್ಗೆ ಮಹತ್ವದ ಆದೇಶ.!

• ಉದಯವಾಹಿನಿ, ಬೆಂಗಳೂರು



07 ದಿನದೊಳಗೆ ಸಲ್ಲಿಸಲು ಸೂಚನೆ

ಖಜಾನೆಗಳಿಗೆ ಬಿಲ್ಲುಗಳನ್ನು ಸಲ್ಲಿಸುವ ಬಗ್ಗೆ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ. ಆರ್ಥಿಕ ಇಲಾಖೆಯ ಎಲ್ಲಾ ಶಾಖೆಗಳು ದಿನಾಂಕ:15.03.2025 ರೊಳಗಾಗಿ ಹೊರಡಿಸುವ ಹೆಚ್ಚುವರಿ/ಪುನರ್ವಿನಿಯೋಗ ಆದೇಶಗಳನ್ನು ಒಳಗೊಂಡಂತೆ ಯಾವುದೇ ಹಣ ಬಿಡುಗಡೆಗೆ ಅನುಮತಿಸುವ ಸಂಧರ್ಭಗಳಲ್ಲಿ ತತ್ಸಂಬಂಧ ಬಿಲ್ಲುಗಳನ್ನು ಆರ್ಥಿಕ ಇಲಾಖೆಯಿಂದ ಹೊರಡಿಸಲಾಗುವ ಹಿಂಬರಹದ ದಿನಾಂಕದಿಂದ 10 ದಿನಗಳೊಳಗಾಗಿ ಖಜಾನೆಗೆ ಸಲ್ಲಿಸುವಂತೆ ಹಿಂಬರಹದಲ್ಲಿ ನಮೂದಿಸುವುದು. ಅದೇ ರೀತಿ, ದಿನಾಂಕ: 15.03.2025 ರ ನಂತರ ಹೊರಡಿಸಲಾಗುವ ಇಂತಹ ಹಿಂಬರಹಗಳಲ್ಲಿ, ಹಿಂಬರಹದ ದಿನಾಂಕದಿಂದ 07 ದಿನಗಳೊಳಗಾಗಿ ಖಜಾನೆಗೆ ಬಿಲ್ಲುಗಳನ್ನು ಸಲ್ಲಿಸಲು ಸೂಚಿಸುವಂತೆ ತಿಳಿಸಿದೆ.

(ಉದಾ: ಹಿಂಬರಹ ದಿನಾಂಕ:16.03.2025 ಬಿಲ್ಲು ಸಲ್ಲಿಕೆ ದಿ.23.03.2025 ರೊಳಗೆ) ಇದರಿಂದ ಖಜಾನೆಯಲ್ಲಿ ಬಿಲ್ಲನ್ನು ಸ್ವೀಕರಿಸಲು ಯಾವುದೇ ಗೊಂದಲವಾಗುವುದಿಲ್ಲವಾದ್ದರಿಂದ ಈ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೋರಲಾಗಿದೆ..

## ಧಾರವಾಡ-ಬೆಳಗಾವಿ ನೇರ ರೈಲು ಮಾರ್ಗ: ರೈತರ ಒಪ್ಪಿಸಿ ಭೂಸ್ವಾಧೀನಕ್ಕೆ ಸೂಚನೆ

■ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ■ ಏಪ್ರಿಲ್ ಮೊದಲ ವಾರದಲ್ಲಿ ಕಾಮಗಾರಿ ಆರಂಭಿಸಲು ಸಂಸದ ಶೆಟ್ಟರ್ ಸೂಚನೆ

• ಉದಯವಾಹಿನಿ, ಬೆಳಗಾವಿ

ಬೆಳಗಾವಿ ಜಿಲ್ಲೆ ವ್ಯಾಪ್ತಿಯಲ್ಲಿ ಭೂಸ್ವಾಧೀನ ಪ್ರಕ್ರಿಯೆ, ಸಮೀಕ್ಷೆ ಪೂರ್ಣಗೊಳ್ಳದ ಕಾರಣ ಬೆಳಗಾವಿ - ಧಾರವಾಡ ರೈಲು ಮಾರ್ಗ ಕಾಮಗಾರಿ ವಿಳಂಬವಾಗುತ್ತಿದೆ. ಮಾರ್ಚ್ ಅಂತ್ಯದೊಳಗೆ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಬೇಕು ಎಂದು ಸಂಸದ ಜಗದೀಶ ಶೆಟ್ಟರ್ ಸೂಚಿಸಿದ್ದಾರೆ. ಬೆಳಗಾವಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಏಪ್ರಿಲ್ ಮೊದಲ ವಾರದಲ್ಲಿ ಕಾಮಗಾರಿ ಆರಂಭಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯ ನಿರ್ವಹಿಸಬೇಕು, ಎಂದು ತಿಳಿಸಿದರು.

ಹಲಗಾ-ಮಚ್ಚೆ ವ್ಯಾಪ್ತಿಯಲ್ಲಿ ರಸ್ತೆ ನಿರ್ಮಿಸುವ ನಿಟ್ಟಿನಲ್ಲಿ ರೈತರನ್ನು ವಿಶ್ವಾಸಕ್ಕೆ ಪಡೆದು ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ. ಬಾಕಿ ಇರುವ ಕಡೆ ಭೂಸ್ವಾಧೀನ ಪ್ರಕ್ರಿಯೆ ಶೀಘ್ರ ಪೂರ್ಣಗೊಳಿಸಬೇಕು, ಎಂದು ಅವರು ಸೂಚಿಸಿದರು. ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಖಾನಾಪುರ ತಾಲೂಕಿನ ಕುಸುಮಳ್ಳಿ ಬಳಿ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪ್ರಾರಂಭಿಸಲಾಗಿದೆ, ಎಂದು ಮಾಹಿತಿ ನೀಡಿದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಬೆಳಗಾವಿ ವಿಶೇಷ ಭೂಸ್ವಾಧೀನಾಧಿಕಾರಿ ಬಲರಾಮ ಚವ್ಹಾಣ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಬಾಗಲಕೋಟೆ ವಿಶೇಷ ಭೂಸ್ವಾಧೀನಾಧಿಕಾರಿ ರಾಜಶ್ರೀ ಜೈನಾಪುರ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಲೋಕೋಪಯೋಗಿ ಇಲಾಖೆ, ರೈಲ್ವೆ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. **927 ಕೋಟಿ ರೂ ವೆಚ್ಚ:** ಒಟ್ಟು 927.47 ಕೋಟಿ ರೂ. ಯೋಜನಾ ವೆಚ್ಚವಾಗಿದ್ದು, ರಾಜ್ಯ ಸರಕಾರ ಉಚಿತ ಭೂಮಿ ಒದಗಿಸುವುದರ ಜತೆಗೆ ಕಾಮಗಾರಿಯ ಒಟ್ಟು ವೆಚ್ಚದ ಅರ್ಧದಷ್ಟನ್ನು ಒದಗಿಸಬೇಕಾಗುತ್ತದೆ. ಇನ್ನರ್ಧ ವೆಚ್ಚವನ್ನು ನೈರುತ್ಯ ರೈಲ್ವೆ ಭರಿಸಲಿದೆ.

**ವಿವಿಧ ರೈಲುಗಳು ರದ್ದು:** ಪೆಟ್ರೋಲಿಯಂ ಉತ್ಪನ್ನ ಸಾಗಿಸುವ ಸರಕು ಸಾಗಣೆ ರೈಲಿನ 18ನೇ ಬಿಟಿಪಿಎನ್ (ಬೋಗಿ ಟ್ಯಾಂಕ್ ವ್ಯಾಗನ್) ಹೊಸೂರು ಬಳಿ ಹಳಿ ತಪ್ಪಿದ ಘಟನೆ ಮಂಗಳವಾರ ಮಧ್ಯಾಹ್ನ ನಡೆದಿತ್ತು. ಇದರಿಂದ ಹೊಸೂರು ಯಶವಂತಪುರ ನಡುವಿನ ಮೂರು ಮೆಮು ರೈಲುಗಳ ಸಂಚಾರ ರದ್ದಾಗಿ ಪ್ರಯಾಣಿಕರು ಪರದಾಡಿದರು. ಹೊಸೂರು - ಯಶವಂತಪುರ ಮೆಮು ರೈಲು (66564), ಯಶವಂತಪುರ- ಹೊಸೂರು ಮೆಮು (66585) ಹಾಗೂ ಹೊಸೂರು -ಯಶವಂತಪುರ (66586) ರೈಲುಗಳ ಸಂಚಾರವನ್ನು ರದ್ದುಗೊಳಿಸಲಾಯಿತು. ಅಧಿಲ್ಲದೆ, ಹೊಸೂರಿಗೆ ತೆರಳಬೇಕಿದ್ದ ಯಶವಂತಪುರ- ಹೊಸೂರು ಮೆಮು ರೈಲಿನ (66563) ಸಂಚಾರವನ್ನು ಮಾರನಾಯಕನಹಳ್ಳಿ ನಿಲ್ದಾಣದಲ್ಲಿ ನಿಲ್ಲಿಸಲಾಯಿತು ಎಂದು ನೈರುತ್ಯ ರೈಲ್ವೆ ತಿಳಿಸಿದೆ.

### ನೋಟಿಸ್ ಸ್ವೀಕರಿಸದ ರೈತರನ್ನು ಭೇಟಿ ಮಾಡಿ ಚರ್ಚಿಸಬೇಕು

ಬೆಳಗಾವಿ ಧಾರವಾಡ ರೈಲ್ವೆ ಮಾರ್ಗ ನಿರ್ಮಾಣಕ್ಕೆ ಬೆಳಗಾವಿ ವ್ಯಾಪ್ತಿಯಲ್ಲಿ ಬರುವ ಜಮೀನುಗಳ ಸಮೀಕ್ಷೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅಧಿಕಾರಿಗಳಿಗೆ ಸೂಚಿಸಿದರು. ಕೆಲವು ರೈತರು ನೋಟಿಸ್ ಜಾರಿ ಮಾಡಿದರೂ ಸ್ವೀಕರಿಸುತ್ತಿಲ್ಲ. ಹಾಗಾಗಿ ಸಮೀಕ್ಷೆಗೆ ಅಡತಡೆಗಳು ಬರುತ್ತಿವೆ, ಎಂದು ರೈಲ್ವೆ ಇಲಾಖೆ ಅಧಿಕಾರಿ ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ನೋಟಿಸ್ ಸ್ವೀಕರಿಸದ ರೈತರನ್ನು ಭೇಟಿ ಮಾಡಿ ಚರ್ಚಿಸಬೇಕು. ಸರಕಾರದ ಮಾರ್ಗಸೂಚಿ ಅನ್ವಯ ಕಡ್ಡಾಯವಾಗಿ ಸಮೀಕ್ಷೆ ಪೂರ್ಣಗೊಳಿಸಬೇಕು. ಈ ನಿಟ್ಟಿನಲ್ಲಿ ಉಪ ವಿಭಾಗಾಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ರೈತರಿಗೆ ತಿಳಿವಳಿಕೆ ನೀಡಬೇಕು, ಎಂದರು.




ರೈತರಿಗೆ ನೋಟಿಸ್ ಜಾರಿ



ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ನೈತ್ರೈರಪೂತ್ರೈರ್ವಿಧಿವತ್

ಮನುಸ್ಮೃತಿಯ ಎರಡನೇ ಅಧ್ಯಾಯದ ಮಾತು. ಬ್ರಾಹ್ಮಣ ಕ್ಷತ್ರಿಯ ವೈಶ್ಯನು ನಿಯಮಾನುಸಾರ ಉಪನಯನ ಸಂಸ್ಕಾರಕ್ಕೆ ಒಳಗಾಗದಿದ್ದಲ್ಲಿ ಅಂಥವರು ವ್ರಾತ್ಯರು = ಪತಿತರು. ಇಂಥ ಪತಿತರೊಂದಿಗೆ ದ್ವಿಜನಾದವನು ಎಂಥದ್ದೇ ಆಪತ್ಕಾಲವೊದಗಿದರೂ ವಿದ್ಯಾಧ್ಯಯನ = ಉಪನಯನ ಹಾಗೂ ವಿವಾಹಕ್ಕೆ ಸಂಬಂಧಿಸಿದ ಯಾವುದೇ ವ್ಯವಹಾರಗಳನ್ನು ಮಾಡಕೂಡದು. ಸಂಸ್ಕಾರಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕೆಂಬ ಸದಾಶಯ ಈ ಕಠೋರ ನಿಯಮದ ಹಿಂದಿನ ಸದಾಶಯ. ಇಂಥ ನಿಯಮವಿರುವುದರಿಂದಾಗಿ ಪತಿತನು ಅಗೌರವಕ್ಕೆ ತುತ್ತಾಗಬೇಕಾದ್ದರಿಂದ ಅಗೌರವಕ್ಕೆ ಒಳಗಾಗುವುದು ಬೇಡ ಎಂಬುದಾಗಿ ವ್ಯಕ್ತಿಯು ಅನಿವಾರ್ಯವಾಗಿ ಪತನಕ್ಕೊಳಪಡದೇ ಉಪನಯನಾದಿ ಸಂಸ್ಕಾರಗಳನ್ನು ಅವಶ್ಯವಾಗಿ ಪಾಲಿಸುವನು. ಒಂದು ವೇಳೆ ಇಂಥ ಅಂಕುಶವನ್ನು ಹಾಕದಿದ್ದಲ್ಲಿ ಮನುಷ್ಯ ಸ್ವೇಚ್ಛಾಚಾರಿಯಾಗುವನು. ಇದರ ದುಷ್ಪರಿಣಾಮ ಇಂದು ಸಮಾಜದಲ್ಲಿ ಎಲ್ಲೆಂದರಲ್ಲಿ ಕಾಣಸಿಗುತ್ತವೆ. ಯಾರು ಯಾರನ್ನು ಸಲಹಬೇಕೋ ಪೂಜಿಸಬೇಕೋ ಅವರೇ ತಮ್ಮ ಕೈಯಾರೆ ಹತ್ಯೆಗೈಯ್ಯುತ್ತಿದ್ದಾರೆ!

## ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ಬೈಕ್ ಸವಾರರಿಗೆ ನೋ ಎಂಟ್ರಿ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ದ್ವಿಚಕ್ರ ವಾಹನಗಳ ಪ್ರವೇಶವನ್ನು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ನಿಷೇಧಿಸಿದೆ. ಮಾ.2ರಂದು ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕಿನಲ್ಲಿ ಸಂಭವಿಸಿದ ಮೊದಲ ಅಪಘಾತದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ಪ್ರವೇಶ ಮತ್ತು ನಿರ್ಗಮನ ದ್ವಾರಗಳ ಬಳಿ ಬೈಕ್‌ಗಳ ಪ್ರವೇಶವನ್ನು ನಿಷೇಧಿಸಲು ಗಸ್ತು ವಾಹನಗಳಿಗೆ ಸೂಚನೆ ನೀಡಲಾಗಿದೆ. ಎಕ್ಸ್‌ಪ್ರೆಸ್‌ವೇನಲ್ಲಿ ಬೈಕ್‌ಗಳ ಬಳಕೆಯನ್ನು ನಿಷೇಧಿಸಲು ಸೈನ್‌ಬೋರ್ಡ್‌ಗಳ ಅಳವಡಿಕೆ ಕಾರ್ಯ ಶೀಘ್ರ ಆರಂಭವಾಗಲಿದೆ.



ದೇಶದ ಯಾವುದೇ ಎಕ್ಸ್‌ಪ್ರೆಸ್‌ವೇಗಳಲ್ಲೂ ಬೈಕ್ ಪ್ರವೇಶಕ್ಕೆ ಅವಕಾಶ ನೀಡಿಲ್ಲ. ದ್ವಿಚಕ್ರ ವಾಹನ ಸವಾರರು ಈ ಎಕ್ಸ್‌ಪ್ರೆಸ್‌ವೇ ಬಳಸದಂತೆ ನಾವು ಒತ್ತಾಯಿಸುತ್ತೇವೆ. ಎಕ್ಸ್‌ಪ್ರೆಸ್‌ವೇಗಳನ್ನು ಗರಿಷ್ಠ 120 ಕಿ.ಮೀ ವೇಗದಲ್ಲಿ ಚಾಲನೆ ಮಾಡಲು ವಿನ್ಯಾಸಗೊಳಿಸಲಾಗಿದೆ. ಇತರ ವಾಹನಗಳು ಹೆಚ್ಚಿನ ವೇಗದಲ್ಲಿ ಚಲಿಸುವಾಗ ಬೈಕ್ ಸವಾರರು ಈ ಮಾರ್ಗವನ್ನು ಬಳಸುವುದು ಸುರಕ್ಷಿತವಲ್ಲ. ಬೈಕ್ ಸವಾರರು ತಮ್ಮ ಜೀವ ಮತ್ತು ಇತರ ವಾಹನ ಸವಾರರನ್ನೂ ಅಪಾಯಕ್ಕೆ ಸಿಲುಕಿಸುತ್ತಾರೆ. ಈ ರಸ್ತೆ ಪೂರ್ಣಗೊಂಡಾಗ ವಾಹನ ಚಾಲಕರಿಗೆ ಸಂಚಾರಕ್ಕೆ ಅನುಕೂಲ ಮಾಡಿಕೊಟ್ಟಿದ್ದೆವು. ಅನೇಕ ಬೈಕ್ ಸವಾರರು ಹೊಸ ಅನುಭವಕ್ಕಾಗಿ ಈ ಹೈವೇಗೆ ಬಂದಿದ್ದರು. ಜೀವಗಳು ಅಮೂಲ್ಯವಾಗಿರುವುದರಿಂದ ಬೈಕ್ ಸವಾರರು ಈ ರಸ್ತೆಯಲ್ಲಿ ಸಂಚಾರ ಮಾಡಬಾರದು ಎಂದು ಎನ್‌ಹೆಚ್‌ಎಐ ತಿಳಿಸಿದೆ. ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ 68 ಕಿ.ಮೀ. ಮಾರ್ಗವನ್ನು ಕಳೆದ ತಿಂಗಳು ತಾತ್ಕಾಲಿಕವಾಗಿ ವಾಹನ ಸಂಚಾರಕ್ಕಾಗಿ ತೆರೆಯಲಾಯಿತು. ಕರ್ನಾಟಕದಲ್ಲಿ 71 ಕಿ.ಮೀ. ಎಕ್ಸ್‌ಪ್ರೆಸ್‌ವೇ ಮಾರ್ಗದ ನಿರ್ಮಾಣವನ್ನು ಎನ್‌ಹೆಚ್‌ಎಐ ಪೂರ್ಣಗೊಳಿಸಿದೆ. ಹೊಸಕೋಟೆಯಿಂದ ಚೆನ್ನೈ ಬಳಿಯ ಶ್ರೀಪೆರಂಬುದೂರಿನವರೆಗಿನ 260 ಕಿ.ಮೀ. ಭಾಗವು ಆಂಧ್ರಪ್ರದೇಶ ಮತ್ತು ತಮಿಳುನಾಡಿನ ವ್ಯಾಪ್ತಿಗೆ ಬರುತ್ತದೆ. ಅದು ಈ ವರ್ಷಾಂತ್ಯದ ವೇಳೆಗೆ ತೆರೆಯುವ ಸಾಧ್ಯತೆಯಿದೆ. ಕರ್ನಾಟಕದ ಮಿತಿಯೊಳಗೆ, ಈ ಎಕ್ಸ್‌ಪ್ರೆಸ್‌ವೇ ಮೂಲಕ ಜನರು ಹೊಸಕೋಟೆ, ಮಾಲೂರು, ಕೆಜಿಎಫ್ ಮತ್ತು ಇತರ ಸ್ಥಳಗಳನ್ನು ತಲುಪಲು ಸಹಾಯ ಮಾಡುತ್ತದೆ.

## ಸದ್ಯದಲ್ಲೇ ಹಾಲಿನ ದರ ಏರಿಕೆ

### ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಲು ಮಹಾಮಂಡಳದ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರ ಜೊತೆ ಒಂದು ಸುತ್ತಿನ ಸಭೆ

• ಉದಯವಾಹಿನಿ, ಬೆಂಗಳೂರು

ಹಾಲು ಉತ್ಪಾದಕ ರೈತರ ಬೇಡಿಕೆ ಹಾಗೂ ಗ್ರಾಹಕರ ಹಿತ ರಕ್ಷಣೆಯನ್ನು ಗಮನಕ್ಕೆ ತೆಗೆದುಕೊಂಡು ಹಾಲಿನ ದರವನ್ನು ಹೆಚ್ಚಳ ಮಾಡಲಾಗುವುದು ಎಂದು ಪಶುಸಂಗೋಪನೆ ಸಚಿವ ಕೆ.ವೆಂಕಟೇಶ್ ವಿಧಾನಪರಿಷತ್‌ಗೆ ತಿಳಿಸಿದ್ದಾರೆ.

ರಾಜ್ಯದಲ್ಲಿ ಸದ್ಯದಲ್ಲಿಯೇ ಹಾಲಿನ ದರ ಹೆಚ್ಚಳ ಮಾಡಲಾಗುವುದು, ಹೆಚ್ಚಳದ ಹಿನ್ನೆಲೆಯಲ್ಲಿ ಹಾಲು ಉತ್ಪಾದಕ ರೈತರ ಬೇಡಿಕೆ ಹಾಗೂ ಗ್ರಾಹಕರ ಹಿತವನ್ನು ಗಮನದಲ್ಲಿಟ್ಟುಕೊಳ್ಳಲಾಗುವುದು ಎಂದು ಕಾಂಗ್ರೆಸ್‌ನ ಉಮಾಶ್ರೀ ಅವರ ಪ್ರಶ್ನೆಗೆ ಪ್ರಶ್ನೋತ್ತರ ವೇಳೆಯಲ್ಲಿ ಉತ್ತರಿಸಿದರು. ಹಾಲಿನ ಖರೀದಿ ದರ ಹೆಚ್ಚಿಸುವ ಸಂಬಂಧ ಇರುವ ಸಾಧಕ-ಭಾದಕಗಳ ಎಲ್ಲಾ ಒಕ್ಕೂಟಗಳ ಅಧ್ಯಕ್ಷರುಗಳು, ವ್ಯವಸ್ಥಾಪಕ ನಿರ್ದೇಶಕರುಗಳು, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಹಾಲು ಮಹಾಮಂಡಳದ ಅಧ್ಯಕ್ಷರು ಮತ್ತು ವ್ಯವಸ್ಥಾಪಕ ನಿರ್ದೇಶಕರ ಜೊತೆ ಒಂದು ಸುತ್ತಿನ ಸಭೆ ನಡೆಸಿ ಚರ್ಚಿಸಲಾಗಿದೆ ಎಂದು ಹೇಳಿದರು. ಹಾಲಿನ ದರ, ಹಾಲಿನ ಖರೀದಿದರವನ್ನು ಹೆಚ್ಚಿಸುವ ಸಂಬಂಧ ಮತ್ತೊಂದು ಸುತ್ತಿನ ಸಭೆ ನಡೆಸಿ ಅಂತಿಮವಾಗಿ ಮುಖ್ಯಮಂತ್ರಿ ಜೊತೆಗೆ ಚರ್ಚೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು.






ಪ್ರಸ್ತುತ ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತವು ಮಾಹೆಯಾನ ಸರಾಸರಿ 72000 ಮೆ.ಟನ್ ಪಶು ಆಹಾರವನ್ನು ಉತ್ಪಾದಿಸಿ ರಾಜ್ಯದ ಹೈನುಗಾರರಿಗೆ ಒಕ್ಕೂಟಗಳ ಮೂಲಕ ಸರಬರಾಜು ಮಾಡುತ್ತಿದ್ದು, ಕಹಾಮದ 05 ಸಂಖ್ಯೆ ಪಶು ಆಹಾರ ಘಟಕಗಳು ಹಾಗೂ ಪಿಪಿಪಿ ಮಾದರಿಯ ಕಹಾಮ ಪಶು ಆಹಾರ ಘಟಕಗಳಿಂದ ಒಟ್ಟಾರೆ ವಾರ್ಷಿಕವಾಗಿ ಅಂದಾಜು 8.65 ಲಕ್ಷ ಮೆ.ಟನ್ ಪಶು ಆಹಾರವನ್ನು ರಾಜ್ಯದ ಹೈನುಗಾರರಿಗೆ ಸರಬರಾಜು ಮಾಡುತ್ತಿದ್ದು, ಕಹಾಮದ ಪಶು ಆಹಾರ ಘಟಕಗಳಿಗೆ ಮಾತ್ರ ವಾರ್ಷಿಕವಾಗಿ ಅಂದಾಜು 1.6 ಲಕ್ಷ ಮೆ.ಟನ್‌ಗಳಷ್ಟು ಮೆಕ್ಕೆಜೋಳದ ಅವಶ್ಯವಿರುತ್ತದೆ ಎಂದು ವಿವರಿಸಿದರು. ಕಳೆದ 2019-202 ಸಾಲಿನಿಂದಲೂ ಪಶು ಆಹಾರ ಉತ್ಪಾದನೆಗೆ ಅವಶ್ಯವಿರುವ ಮೆಕ್ಕೆಜೋಳವನ್ನು ರೈತರ ಮುಖಾಂತರ 4ಜಿ ವಿನಾಯಿತಿ ಪಡೆದು ನೇರವಾಗಿ ಖರೀದಿಸಲಾಗುತ್ತಿದೆ.

ರೈತರ ಮುಖಾಂತರ ನೇರವಾಗಿ ಮೆಕ್ಕೆಜೋಳ ಖರೀದಿ ಸಂಬಂಧ 2023-24ನೇ ಸಾಲಿನ ಅಂತ್ಯಕ್ಕೆ 1.08 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಖರೀದಿಸಲಾಗಿದ್ದು, ಇದರ ಮೊತ್ತ ಅಂದಾಜು ರೂ.183.18 ಕೋಟಿಗಳನ್ನು ಸಂಬಂಧಪಟ್ಟ ರೈತರ 200 ನೇರವಾಗಿ ಡಿಬಿಟಿ ಮುಖಾಂತರ ಪಾವತಿಸಲಾಗಿರುತ್ತದೆ ಎಂದರು. ಪ್ರಸಕ್ತ ಸಾಲಿಗೆ ಮೆಕ್ಕೆಜೋಳವನ್ನು ಎಂಎಸ್ ಪಿ ದರದಂತೆ ರೂ.2,225/- ಹಾಗೂ ರೂ.175/-ಗಳ ಪ್ರೋತ್ಸಾಹ ಧನದೊಂದಿಗೆ ಒಟ್ಟು ರೂ.2,400/- ಪ್ರತಿ ಕ್ವಿಂಟಾಲ್‌ಗೆ ರೈತರಿಂದ ನೇರವಾಗಿ ಖರೀದಿಸಲು ಕಹಾಮ ಆಡಳಿತ ಮಂಡಳಿಯಲ್ಲಿ ತೀರ್ಮಾನಿಸಲಾಗಿದೆ. ಅದರಂತೆ ಯಥೇಚ್ಛವಾಗಿ ಮೆಕ್ಕೆಜೋಳ ಬೆಳೆಯುವ ರಾಜ್ಯದ ವಿವಿಧ ಭಾಗಗಳಲ್ಲಿ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಕೇಂದ್ರಗಳನ್ನು ತೆರೆದು ರೈತರಿಂದ ನೇರವಾಗಿ ಖರೀದಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿರುತ್ತದೆ. ಪ್ರಸ್ತುತ 4ಜಿ ವಿನಾಯಿತಿ ದೊರೆತ್ತಿದ್ದು, ಭಾರತ ಸರ್ಕಾರದ ನಿರ್ದೇಶನದಂತೆ 2024-25ನೇ ಸಾಲಿಗೆ ಮೆಕ್ಕೆಜೋಳ ಖರೀದಿಯ ಬಯೋಮೆಟ್ರಿಕ್ ಕಡ್ಡಾಯಗೊಳಿಸಲಾಗಿರುತ್ತದೆ.

> **904547 ಫಲಾನುಭವಿಗಳಿಗೆ ಪ್ರೋತ್ಸಾಹ ಧನ ಪಾವತಿಸಲು ಬಾಕಿ ಇರುತ್ತದೆ. ಸಾಮಾನ್ಯ ವರ್ಗದ 817074 ಹಾಲು ಉತ್ಪಾದಕರಿಗೆ 5 ತಿಂಗಳು ಪರಿಶಿಷ್ಟ ಜಾತಿಯ 52467 ಹಾಲು ಉತ್ಪಾದಕರಿಗೆ 2 ತಿಂಗಳು ಮತ್ತು ಪರಿಶಿಷ್ಟ ಪಂಗಡದ 35006 ಹಾಲು ಉತ್ಪಾದಕರಿಗೆ 4 ತಿಂಗಳುಗಳಿಗೆ ಬಾಕಿ ಇರುತ್ತದೆ. ರಾಜ್ಯದ ರೈತರಿಗೆ ಪ್ರೋತ್ಸಾಹಧನ ಪಾವತಿಸುವಲ್ಲಿ ವಿಳಂಬವಾಗಿರುವುದರಿಂದ ರೈತರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಹೇಳಿದರು.**

> **ಪ್ರೋತ್ಸಾಹಧನ ನೀಡಲು ಹೆಚ್ಚುವರಿ ಅನುದಾನ ಅವಶ್ಯವಿದ್ದು ಅನುದಾನ ಬಿಡುಗಡೆಗಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಅನುದಾನ ಬಿಡುಗಡೆಯಾದ ಕೂಡಲೇ ಬಾಕಿ ಬಿಡುಗಡೆ ಮಾಡಲಾಗುವುದು ಎಂದರು.**

## ಹಕ್ಕಿಜ್ವರ ಆತಂಕ ಬೇಡ, ಎಚ್ಚರಿಕೆ ವಹಿಸಿ

• ಉದಯವಾಹಿನಿ, ಬೆಂಗಳೂರು

ಹಕ್ಕಿಜ್ವರ ಸಾಂಕ್ರಾಮಿಕ ರೋಗವಾಗಿದ್ದರೂ ಅದು ಹಕ್ಕಿಗಳಿಂದ ಮನುಷ್ಯರಿಗೆ ಹರಡುವುದು ಅಪರೂಪ,ಆದ್ದರಿಂದ ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಅಭಯ ನೀಡಿದ್ದಾರೆ. ಹಕ್ಕಿಜ್ವರದ ಬಗ್ಗೆ ಆತಂಕಪಡದೆ ಎಚ್ಚರಿಕೆ ವಹಿಸಬೇಕೆಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಕೋಳಿಮೊಟ್ಟೆ ಹಾಗೂ ಮಾಂಸ ಸೇವಿಸುವಾಗ ಕೆಲವು ಎಚ್ಚರಿಕೆಯನ್ನು ಅನುಸರಿಸಬೇಕು. ಮೊಟ್ಟೆ ಮತ್ತು ಮಾಂಸವನ್ನು 70 ಡಿಗ್ರಿ ಉಷ್ಣಾಂಶದಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ಬೇಯಿಸಬೇಕು. ಸೋಂಕು ಪೀಡಿತ ಕೋಳಿ ಫಾರಂ, ಮೃತ ಹಕ್ಕಿ ಅಥವಾ ಕೋಳಿಗಳ ಸಮೀಪಕ್ಕೆ ಹೋಗದಂತೆ ಎಚ್ಚರಿಕೆ ವಹಿಸುವಂತೆ ಅವರು ಸಲಹೆ ಮಾಡಿದ್ದಾರೆ. ಇತ್ತೀಚಿಗೆ ಚಿಕ್ಕಬಳ್ಳಾಪುರದಲ್ಲಿ 36 ಹಾಗೂ ಬಳ್ಳಾರಿಯಲ್ಲಿ 8 ಸಾವಿರ ಕೋಳಿಗಳು ಹಕ್ಕಿಜ್ವರದಿಂದ ಸಾವನ್ನಪ್ಪಿದ್ದವು. ಇದರ ಬೆನ್ನಲ್ಲೆ ಆರೋಗ್ಯ ಇಲಾಖೆ ಎಚ್ಚರಿಕೆ ವಹಿಸುವಂತೆ ಸಾರ್ವಜನಿಕರಿಗೆ ಸಲಹೆ ನೀಡಿದೆ.

## ರೌಡಿ ಜಯರಾಮ್ ಹತ್ಯೆ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಬಾರ್‌ನಲ್ಲಿ ಕುಳಿತಿದ್ದ ರೌಡಿ ಜಯರಾಮ್‌ನನ್ನು ಕೊಲೆ ಮಾಡಿ ಪರಾರಿಯಾಗಿರುವ ಆರೋಪಿಗಳ ಬಂಧನಕ್ಕೆ ಸೋಲದೇವನಹಳ್ಳಿ ಠಾಣೆ ಪೊಲೀಸರು ನಾಲ್ಕು ವಿಶೇಷ ತಂಡಗಳನ್ನು ರಚಿಸಿದ್ದಾರೆ. ಹಳೆ ದ್ವೇಷದಿಂದ ಈತನನ್ನು ಕೊಲೆಮಾಡಿರುವ ಶಂಕೆ ವ್ಯಕ್ತವಾಗಿದ್ದು, ಪರಾರಿಯಾಗಿರುವ ಆರೋಪಿಗಳಿಗಾಗಿ ಈ ತಂಡಗಳು ಹುಡುಕಾಟ ನಡೆಸುತ್ತಿದ್ದಾರೆ. ಯಲಹಂಕದ ಕೊಡತಿ ತಿರುಮಲಪುರ ನಿವಾಸಿಯಾದ ಈತ ಕೋಳಿ ಅಂಗಡಿ ಇಟ್ಟುಕೊಂಡಿದ್ದನು. ನಿನ್ನೆ ರಾತ್ರಿ ಮದ್ಯ ಸೇವಿಸಲು ಹೆಸರಘಟ್ಟ ರಸ್ತೆಯ ಬಾರ್‌ವೊಂದಕ್ಕೆ ಹೋಗಿದ್ದಾಗ ನಾಲ್ಕೈದು ಮಂದಿ ದುಷ್ಕರ್ಮಿಗಳು ಬಾರ್‌ಗೆ ನುಗ್ಗಿ ಮಾರಕಾಸ್ತ್ರಗಳಿಂದ ಮನ ಬಂದಂತೆ ಹಲ್ಲೆ ನಡೆಸಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ಈತ ಯಲಹಂಕ ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ರೌಡಿ ಶೀಟರ್ ಎಂದು ಪೊಲೀಸರು ತಿಳಿಸಿದ್ದಾರೆ.

## ವಾಯುಪಡೆ ಸ್ವಾಧೀನದ 444 ಎಕರೆ ಅರಣ್ಯ ಭೂಮಿ ಮರು ವಶಕ್ಕೆ ಈಶ್ವರ್ ಖಂಡ್ರೆ ಸೂಚನೆ

• ಉದಯವಾಹಿನಿ, ಬೆಂಗಳೂರು

ನಗರದ ಪೀಣ್ಯ ಪ್ಲಾಂಟೇಷನ್ ಮತ್ತು ಜಾರಕಬಂಡೆ ಕಾವಲು ಪ್ರದೇಶದಲ್ಲಿ ಪ್ರಸ್ತುತ ಭಾರತೀಯ ವಾಯುಪಡೆ ವಶದಲ್ಲಿರುವ 444.12 ಎಕರೆ ಅರಣ್ಯ ಭೂಮಿಯನ್ನು ನಿಯಮಾನುಸಾರ ಮರು ವಶಕ್ಕೆ ಪಡೆಯುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಾಯುಪಡೆಗೆ 1987ರಲ್ಲಿ 570 ಎಕರೆ ಭೂಮಿಯನ್ನು ಸರ್ಕಾರ ಮಂಜೂರು ಮಾಡಿತ್ತು. ಈ ಪೈಕಿ ಅರಣ್ಯ ಎಂದು ಅಧಿಸೂಚನೆ ಆಗಿರುವ 452 ಎಕರೆ ಮಂಜೂರಾತಿ ರದ್ದುಪಡಿಸಿ, 2017ರಲ್ಲಿ ಸರ್ಕಾರ ಆದೇಶ ಹೊರಡಿಸಿದೆ. ಆದರೂ ಭಾರತೀಯ ವಾಯು ಪಡೆ ಮಾ. 1ರಂದು ಎಫ್.ಸಿ. (ಅರಣ್ಯ ತೀರುವಳಿ) ಅನುಮತಿ ಪಡೆಯದೆ ಅಕ್ರಮವಾಗಿ ನಿರ್ಮಾಣ ಕಾಮಗಾರಿ ಆರಂಭಿಸಿತ್ತು ಎಂದು ಅರಣ್ಯ ಸಚಿವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. 2017ರ ಸರ್ಕಾರದ ಆದೇಶದನ್ವಯ ಮ್ಯುಟೇಷನ್ ಆಗಿದ್ದು, ಪ್ರಸ್ತುತ ಈ ಜಮೀನಿನ ಪಹಣಿಯಲ್ಲಿ ಮೀಸಲು ಅರಣ್ಯ ಎಂದು ನಮೂದಾಗಿದೆ. ಅರಣ್ಯ ಇಲಾಖೆ ಈ ವಿಷಯವನ್ನು ವಾಯುಪಡೆಯ ಅಧಿಕಾರಿಗಳ ಗಮನಕ್ಕೆ ತಂದಿದ್ದು, ಸದರಿ ಜಮೀನು, ಮೀಸಲು ಅರಣ್ಯ ಎಂಬ ಫಲಕವನ್ನೂ ಹಾಕಿದೆ. ಈ ಅರಣ್ಯ ಭೂಮಿ ತೆರವು ಮಾಡುವಂತೆ ರಕ್ಷಣಾ ಸಚಿವಾಲಯಕ್ಕೆ ಪತ್ರವನ್ನೂ ಬರೆಯಲಾಗಿದೆ ಎಂದು ಅವರು ಹೇಳಿದ್ದಾರೆ. ಸಂಪೂರ್ಣ ಮಾಹಿತಿ ಇದ್ದರೂ ವಾಯುಪಡೆ ನಿಯಮ ಮೀರಿ, ಅಕ್ರಮವಾಗಿ ನಿರ್ಮಾಣ ಕಾಮಗಾರಿ ನಡೆಸುತ್ತಿತ್ತು. ಪ್ರಸ್ತುತ ಕಾಮಗಾರಿ ನಿಲ್ಲಿಸಲಾಗಿದೆ. ಪ್ರಸ್ತುತ 444 ಎಕರೆ ಜಮೀನಿನ ಪೈಕಿ ಸುಮಾರು 15 ಎಕರೆ ಪ್ರದೇಶದಲ್ಲಿ ವಾಯುಪಡೆ ಶೂಟಿಂಗ್ ರೇಂಜ್ ನಿರ್ಮಿಸಿಕೊಂಡು ತರಬೇತಿ ನೀಡುತ್ತಿದೆ. ಸ್ವಲ್ಪ ಜಮೀನಿನಲ್ಲಿ ವಾಯುಪಡೆಯ ಕಚೇರಿ ಇತ್ಯಾದಿ ನಿರ್ಮಿಸಿದೆ. ಉಳಿದ ಭೂಮಿ ಅರಣ್ಯ ಸ್ವರೂಪದಲ್ಲೇ ಇದ್ದು, ಮರ, ಗಿಡಗಳಿಂದ ಸಮೃದ್ಧವಾಗಿದೆ ಎಂದು ಅಧಿಕಾರಿಗಳು ಸಚಿವರಿಗೆ ವಿವರಿಸಿದರು.



## ವಿಜಯೇಂದ್ರಗೆ ಏನು ಸಮಸ್ಯೆ ಇದು ಮುಸ್ಲಿಂ ಓಲೈಕೆ ಹೇಗಾಗುತ್ತೆ

• ಉದಯವಾಹಿನಿ, ಬೆಂಗಳೂರು

ವಿಜಯೇಂದ್ರಗೆ ಏನು ಸಮಸ್ಯೆ ಇದು ಮುಸ್ಲಿಂ ಓಲೈಕೆ ಹೇಗಾಗುತ್ತದೆ ಎಂದು ಶಾಸಕ ರಿಜ್ವಾನ್ ಅರ್ಷದ್ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು ಬಿವೈ ವಿಜಯೇಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿ, ನಿಮಗೇನು ಸಮಸ್ಯೆ ಇದು ಓಲೈಕೆ ಹೇಗಾಗುತ್ತದೆ.

ಅಲ್ಪಸಂಖ್ಯಾತರು ಈ ಸಮಾಜದಲ್ಲಿ ಬದುಕ್ತಿಲ್ಲವಾ ನಾವು ಮುಖ್ಯವಾಹಿನಿಗೆ ಬರೋದು ಬೇಡ್ವಾ ಎಂದು ಖಾರವಾಗಿ ಪ್ರಶ್ನಿಸಿದರು.

ಗುತ್ತಿಗೆಯಲ್ಲಿ ಮೀಸಲಾತಿ ತಂದಿದ್ದು ನಮ್ಮ ಪಕ್ಷ. ಎಸ್ಸಿ, ಎಸ್ಟಿ ಮತ್ತು ಹಿಂದುಳಿದವರಿಗೆ ಮೀಸಲಾತಿ ಕೊಟ್ಟಿದ್ದೀವಿ. ಅಲ್ಪಸಂಖ್ಯಾತ, ಸಣ್ಣ ಗುತ್ತಿಗೆದಾರರಿಗೆ ಮೀಸಲಾತಿ ಕೊಡಿ ಎಂದು ಕೇಳಿದ್ದೆವು. ಸರ್ಕಾರ ಕೊಟ್ಟರೆ ಸ್ವಾಗತ ಮಾಡುತ್ತೇವೆ.



ಅಭಿವೃದ್ಧಿ ಕಾಮಗಾರಿಗೆ ಚಾಲನೆ

ಇದು 1 ಕೋಟಿ ರೂ.ವರೆಗಿನ ಗುತ್ತಿಗೆ ಮಾತ್ರ ಎಂದು ಸ್ಪಷ್ಟಪಡಿಸಿದರು.

ಇದಕ್ಕೂ ಮುನ್ನ ಮಾತನಾಡಿದ್ದ ಬಿವೈ ವಿಜಯೇಂದ್ರ, ಕಾಂಗ್ರೆಸ್‌ನವರ ಯೋಗ್ಯತೆಗೆ ಕಳೆದ 20 ತಿಂಗಳಿಂದ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿಲ್ಲ. ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಮೀಸಲಾತಿ ಕೊಟ್ಟಿದ್ದಾರೆ. ಆದರೆ ಎಲ್ಲಿಯಾದರೂ ಕೆಲಸದ ಟೆಂಡರ್ ಕರೆದಿದ್ದಾರಾ ಶಾಸಕರಿಗೆ ಅನುದಾನ ಕೊಡುವ ಯೋಗ್ಯತೆ ಇಲ್ಲ, ಆದರೆ ಸರ್ಕಾರಿ ಗುತ್ತಿಗೆಯಲ್ಲಿ 4% ಮುಸ್ಲಿಂ ಮೀಸಲಾತಿ ನೀಡಲು ಹೊರಟಿದ್ದಾರೆ, ಬೇರೆಯವರಿಗೆ ಅನ್ಯಾಯ ಮಾಡುತ್ತಿದ್ದಾರೆ. ಅಲ್ಪಸಂಖ್ಯಾತರು ಎಂದರೆ ಮುಸ್ಲಿಮರು ಮಾತ್ರವೇ ಎಂದು ಕಿಡಿಕಾರಿದರು.

> **ಸಿಎಂ ನೀವೂ ಅಹಿಂದಾ ನಾಯಕರೇ ಆಗಿದ್ರೆ, ಸಮುದಾಯಕ್ಕೆ ಆರ್ಥಿಕ ಶಕ್ತಿ ನೀಡಲು ಪ್ರೋತ್ಸಾಹ ನೀಡಬೇಕಿತ್ತು. ಸವಿತಾ ಸಮಾಜ, ಗುಡಿಕೈಗಾರಿಕೆಗೆ ಆರ್ಥಿಕ ಬೆಂಬಲ ನೀಡಬೇಕಿತ್ತು. ಅದರ ಹೊರತಾಗಿ ಈಗ ಮುಸ್ಲಿಮರಿಗೆ ಕೊಡಲು ಹೊರಟಿದ್ದಾರೆ. ಇವರಿಗೆ ಜನರೇ ಉತ್ತರ ಕೊಡಬೇಕು. ಇವರು ಬಂಡರಿದ್ದಾರೆ, ದಪ್ಪ ಚರ್ಮದವರು. ಈ ವಿಚಾರವನ್ನು ಸದನದಲ್ಲಿ ಪ್ರಸ್ತಾಪ ಮಾಡ್ತೀವಿ, ಹೋರಾಟ ಮಾಡ್ತೀವಿ ಎಂದು ಆಕ್ರೋಶ ವ್ಯಕ್ತಪಡಿಸಿದರು.**

## ಗುತ್ತಿಗೆದಾರರಿಗೆ ಹಂತ ಹಂತವಾಗಿ ಹಣ ಬಿಡುಗಡೆ

• ಉದಯವಾಹಿನಿ, ಬೆಂಗಳೂರು

ಬಾಕಿ ಇರುವ ಗುತ್ತಿಗೆದಾರರ ಹಣವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ನಡೆಸಿ ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ವಿಧಾನ ಪರಿಷತ್ ನಲ್ಲಿ ಹೇಳಿದ್ದಾರೆ.



ಜೆಡಿಎಸ್‌ನ ಟಿ.ಎ ಶರವಣ ಪ್ರಶ್ನೆಗೆ ಉತ್ತರಿಸಿದ ಸಚಿವ ಸತೀಶ್ ಜಾರಕಿಹೊಳಿ, ಗುತ್ತಿಗೆದಾರರಿಗೆ ಒಟ್ಟು 9 ಸಾವಿರ ಕೋಟಿ ಹಣ ಬಾಕಿ ಕೊಡಬೇಕು. ಗುತ್ತಿಗೆದಾರರು ಹಣ ಬಿಡುಗಡೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿಯಾಗಿ ಚರ್ಚೆ ಮಾಡಿದ್ದಾರೆ.

ಏಕಕಾಲದಲ್ಲಿ ಇಷ್ಟು ದೊಡ್ಡ ಮೊತ್ತದ ಹಣವನ್ನು ಬಿಡುಗಡೆ ಮಾಡಲು ಸಾಧ್ಯವಿಲ್ಲ. ಹಂತ ಹಂತವಾಗಿ ಬಾಕಿ ಮೊತ್ತವನ್ನು ಬಿಡುಗಡೆ ಮಾಡುತ್ತೇವೆ ಎಂದು ಅಭಯ ನೀಡಿದರು.ಈಗಾಗಲೇ ಹಣಕಾಸು ಇಲಾಖೆಯ ಅಧಿಕಾರಿಗಳ ಜೊತೆಗೂ ಸಭೆ ನಡೆಸಿದ್ದೇವೆ.


ಹಿಂದಿನ ಸರ್ಕಾರದ ಅವಧಿಯಲ್ಲಿ ಹೆಚ್ಚಿನ ಮೊತ್ತದ ಬಾಕಿ ಇರುವ ಸಮಸ್ಯೆ ಎದುರಾಗಿದೆ. ಆದರೂ ನಮ ಸರ್ಕಾರ ಆದ್ಯತೆ ಮೇರೆಗೆ ಬಾಕಿ ಮೊತ್ತವನ್ನು ಬಡುಗಡೆ ಮಾಡಲಿದೆ ಎಂದು ಹೇಳಿದರು.

> **ಇದಕ್ಕೂ ಮುನ್ನ ಮಾತನಾಡಿದ ಸದಸ್ಯ ಶರವಣ ಅವರು, ಗುತ್ತಿಗೆದಾರರಿಗೆ ನಿಗಧಿತ ಸಮಯಕ್ಕೆ ಸರಿಯಾಗಿ ಹಣ ಬಡುಗಡೆ ಮಾಡದ ಕಾರಣ, ಗುತ್ತಿಗೆದಾರರು ಆತಹತ್ಯೆ, ಮಾಡಿಕೊಳ್ಳುವ ಹಂತಕ್ಕೆ ಬಂದಿದ್ದಾರೆ. ಜೊತೆಗೆ ವಿಷ ಕುಡಿಯುತ್ತೇವೆ ಎಂದು ಹೇಳಿದ್ದಾರೆ. ಸರ್ಕಾರಕ್ಕೂ ಮಾನವೀಯತೆ ಇದ್ದರೆ ಮೊದಲು ಹಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.**

## ವಿದೇಶಿ ಪ್ರಜೆಗಳ ಮಾಹಿತಿ ನೀಡಲು ವಿಫಲ

• ಉದಯವಾಹಿನಿ, ಬೆಂಗಳೂರು

ಬಾಡಿಗೆ ಮನೆಯಲ್ಲಿ ವಾಸಿಸುತ್ತಿರುವ ವಿದೇಶಿ ಪ್ರಜೆಗಳ ವಿವರಗಳನ್ನು ನೀಡಲು ವಿಫಲರಾದ ಕಾರಣ 70 ಮನೆ ಮಾಲೀಕರು ಸಂಕಷ್ಟಕ್ಕೆ ಸಿಲುಕಿದ್ದಾರೆ. ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ಮನೆ ಮಾಲೀಕರು ವಿದೇಶಿ ಪ್ರಜೆಗಳಿಗೆ ತಮ್ಮ ಆವರಣವನ್ನು ಬಾಡಿಗೆಗೆ ನೀಡಿದ 24 ಗಂಟೆಗಳ ಒಳಗೆ ತಮ್ಮ ಪೋರ್ಟಲ್‌ನಲ್ಲಿ ವಿವರಗಳನ್ನು ಒದಗಿಸಬೇಕೆಂದು ಆದೇಶಿಸಿದೆ. ವಿವರಗಳನ್ನು ನಮೂನೆ ಅ ಯಲ್ಲಿ ಸಲ್ಲಿಸಬೇಕು.




ದೇಶದಲ್ಲಿ ಅವಧಿ ಮೀರಿ ವಾಸಿಸಿದ್ದಕ್ಕಾಗಿ ಅರ್ಜೆಂಟೀನಾ ಮತ್ತು ಬ್ರೆಜಿಲ್‌ನ ಇಬ್ಬರ ಬಂಧನದ ಬಗ್ಗೆ ಮಾಹಿತಿ ನೀಡಿದರು. ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವವರ ಮಾಹಿತಿ ನೀಡಲು ವಿಫಲರಾದ ಮನೆ ಮಾಲೀಕರ ವಿರುದ್ಧ ಕಾನೂನಿನ ಪ್ರಕಾರ ಪ್ರಕರಣ ದಾಖಲಿಸಲಾಗುವುದು ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ ದಯಾನಂದ ಹೇಳಿದರು. ಬ್ರೆಜಿಲ್‌ನ 24 ವರ್ಷದ ಲುಕೋಸ್ ಹೆನ್ರಿಕ್ ಮತ್ತು 23 ವರ್ಷದ ಸ್ಯಾಮ್ಯುಯೆಲ್ ಡೈಜಿಯನ್ ಎಂದು ಗುರುತಿಸಲಾದ ಇಬ್ಬರನ್ನು ಸಿಸಿಬಿ ಅಧಿಕಾರಿಗಳು ಬಂಧಿಸಿದ್ದಾರೆ. ಗಡೀಪಾರು ವಿಧಿವಿಧಾನಗಳನ್ನು ಪೂರ್ಣಗೊಳಿಸಲು ಮುಂದೆ ಹಾಜರುಪಡಿಸಿದರು. ಇಬ್ಬರೂ ವ್ಯಾಪಾರ ವೀಸಾಗಳಲ್ಲಿ ಬಂದಿದ್ದರು ಮತ್ತು ಅವರ ವೀಸಾಗಳ ಅವಧಿ ಮುಗಿದ ನಂತರ ಕಳೆದ ಮೂರು ತಿಂಗಳಿನಿಂದ ಅವಧಿ ಮೀರಿ ವಾಸಿಸುತ್ತಿದ್ದರು.

## ಜೈವಿಕ ಉದ್ಯಾನವನದ ಮಾವುತ- ಕರಡಿ ಪಾಲಕ ಸೇರಿ 6 ಮಂದಿಗೆ ಸನ್ಮಾನ

• ಉದಯವಾಹಿನಿ, ಬೆಂಗಳೂರು

ಮಂಗಳವಾರ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ನಡೆದ ಮೃಗಾಲಯ ದಿನದ ಅಂಗವಾಗಿ ಆರು ಮಂದಿಗೆ ಸನ್ಮಾನ ಮಾಡಲಾಯಿತು. ರಕ್ಷಿಸಲ್ಪಟ್ಟ ಹಿಮಾಲಯನ್ ಕಪ್ಪು ಕರಡಿಯು ನಿರಾತಂಕವಾಗಿ ಒತ್ತಡರಹಿತ ಜೀವನ ನಡೆಸಲು ಸಹಾಯ ಮಾಡುವಲ್ಲಿ ನೀಡಿದ ಕೊಡುಗೆ ಮತ್ತು ಶ್ರಮಕ್ಕಾಗಿ ಸೋಮಶೇಖರ್ ಬಿ.ಎಸ್ (45) ಅವರನ್ನು ಸನ್ಮಾನಿಸಲಾಯಿತು. ಕರಡಿ ಪಾಲಕರ ಪ್ರಯತ್ನಗಳನ್ನು ಕರ್ನಾಟಕ ಮೃಗಾಲಯ ಪ್ರಾಧಿಕಾರ, ಅರಣ್ಯ ಇಲಾಖೆ ಮತ್ತು ಬಿಬಿಪಿ ಅಧಿಕಾರಿಗಳು ಗುರುತಿಸಿ ಗೌರವಿಸಿದರು. ಸೋಮಶೇಖರ್ ಕರಡಿಗೆ ಸಕಾರಾತ್ಮಕ ಬಲವರ್ಧನೆ ಮತ್ತು ಉಪಚಾರಗಳೊಂದಿಗೆ ತರಬೇತಿ ನೀಡಿದರು, ಅದು ಸೆರೆಯಲ್ಲಿರುವ ಪರಿಸರ ಮತ್ತು ಸಂಗಾತಿಗೆ ಒಗ್ಗಿಕೊಳ್ಳಲು ಸಹಾಯ ಮಾಡಿತು. ಇತ್ತೀಚೆಗೆ ಆ ಕರಡಿ ಒಂದು ಮರಿಗೆ ಜನ್ಮ ನೀಡಿದೆ.



ಅದೇ ರೀತಿ, 25 ವರ್ಷದ ಜೈನ ಕುರುಬ ಮತ್ತು ಆನೆ ಕಾವಾಡಿಗ ನವೀನ್ ಕುಮಾರ್ ಎಸ್ ಅವರ ಶ್ರಮವನ್ನು ಸಹ ಗುರುತಿಸಲಾಯಿತು. ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದಿಂದ ರಕ್ಷಿಸಲ್ಪಟ್ಟ ದಂತವಿಲ್ಲದ ಗಂಡು ಆನೆಗೆ ತರಬೇತಿ ನೀಡಲು ಅವರು ತೆಗೆದುಕೊಂಡ ವಿಶೇಷ ಆಸಕ್ತಿ ಮತ್ತು ಸಮಯಕ್ಕಾಗಿ ಸನ್ಮಾನಿಸಲಾಯಿಕು. ಆನೆಗೆ ತರಬೇತಿ ನೀಡಲು ಹಗಲು ರಾತ್ರಿ ಶ್ರಮವಹಿಸಿದರು.

ಈ ಆನೆ ತನ್ನ ಸುತ್ತಮುತ್ತಲಿನ ಪ್ರದೇಶಗಳಿಗೆ ಹೊಂದಿಕೊಳ್ಳಲು ಮತ್ತು ಕ್ರಾಲ್‌ನಿಂದ ಹೊರಬರಲು ಅವರು ಸಹಾಯ ಮಾಡಿದರು ಎಂದು ಸೇನ್ ವಿವರಿಸಿದರು.

> **ಹಿಮಾಲಯನ್ ಕರಡಿ ಯಾವಾಗಲೂ ಒತ್ತಡದಲ್ಲಿತ್ತು ಹಾಗೂ ಎಂದಿಗೂ ತನ್ನ ಆವರಣದಿಂದ ಹೊರಬಂದು ಇತರರೊಂದಿಗೆ ಬೆರೆಯುತ್ತಿರಲಿಲ್ಲ ಆವರಣದಿಂದ ಹೊರಗೆ ಬಂದು ನಿರಾಳವಾಗಿ ಓಡಾಡುವಂತೆ ಮಾಡಲು ಸೋಮಶೇಖರ್ ವೈಯಕ್ತಿಕ ಸಾಕಷ್ಟು ಅಪಾಯ ಹಾಗೂ ಆಸಕ್ತಿ ವಹಿಸಿದ್ದರು. ಆಕ್ರಮಣಕಾರಿ ಕರಡಿಯನ್ನು ತರಬೇತಿ ನೀಡಿ ಪಳಗಿಸಿದರು , ಬನ್ನೇರುಘಟ್ಟ ಜೈವಿಕ ಉದ್ಯಾನವನ ಮುಚ್ಚಿದ ದಿನಗಳಲ್ಲಿ (ಮಂಗಳವಾರ) ಅವರು ಕೆಲಸ ಮಾಡಬೇಕಾಗಿತ್ತು ಎಂದು ಬಿಬಿಪಿ ಕಾರ್ಯನಿರ್ವಾಹಕ ನಿರ್ದೇಶಕ ಸೂರ್ಯ ಸೇನ್ ಹೇಳಿದರು.**


## ಬೆಂಗಳೂರು ಅರಮನೆ ವಿಧೇಯಕ ಸೇರಿ 5 ಮಸೂದೆಗಳ ಮಂಡನೆ

### ಸುಪ್ರೀಂಕೋರ್ಟ್ ಆದೇಶ ಪಾಲೆ ಮಾಡಿದರೆ ಸರ್ಕಾರಕ್ಕೆ ಭಾರೀ ನಷ್ಟ ಉಂಟಾಗಲಿದೆ ಸರ್ಕಾರ ನಿರ್ಧರಿಸಿದ್ದು, ಹೀಗಾಗಿಯೇ ಸುಗ್ರೀವಾಜ್ಞೆ ಜಾರಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಅರಮನೆ ಮೈದಾನದ ಭೂಸ್ವಾಧೀನ ಪ್ರಕ್ರಿಯೆ ಕೈಬಿಡುವ ಉದ್ದೇಶದ ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ಮಸೂದೆ 2025 ಸೇರಿ ಒಟ್ಟು ಐದು ಮಸೂದೆಗಳನ್ನು ವಿಧಾನಸಭೆಯಲ್ಲಿ ಮಂಡಿಸಲಾಯಿತು.

ಬಳ್ಳಾರಿ ಮತ್ತು ಜಯಮಹಲ್ ರಸ್ತೆ ಅಗಲೀಕರಣಕ್ಕಾಗಿ ಬೆಂಗಳೂರು ಅರಮನೆ ಮೈದಾನದ 15.39 ಎಕರೆ ಜಾಗ ಸ್ವಾಧೀನಕ್ಕೆ ಬದಲಾಗಿ ಮೈಸೂರು ರಾಜ ಮನೆತದ ವಾರಸುದಾರರಿಗೆ ರೂ.3014 ಕೋಟಿ ವರ್ಗಾವಣೆ ಅಭಿವೃದ್ಧಿ ಹಕ್ಕುಗಳನ್ನು (ಟಿಡಿಆರ್) ಪರಿಹಾರ ನೀಡಬೇಕೆಂದು ಸುಪ್ರೀಂಕೋರ್ಟ್ ಆದೇಶ ನೀಡಿತ್ತು. ಈ ಹಿನ್ನೆಲೆಯಲ್ಲಿ ಸರ್ಕಾರದ ಈ ಮಸೂದೆ ಮಹತ್ವ ಪಡೆದುಕೊಂಡಿದೆ. ಸುಪ್ರೀಂಕೋರ್ಟ್ ಆದೇಶ ಪಾಲೆ ಮಾಡಿದರೆ ಸರ್ಕಾರಕ್ಕೆ ಭಾರೀ ನಷ್ಟ ಉಂಟಾಗಲಿದೆ ಎಂದು ಸರ್ಕಾರ ನಿರ್ಧರಿಸಿದ್ದು, ಹೀಗಾಗಿಯೇ ಸುಗ್ರೀವಾಜ್ಞೆ ಜಾರಿಗೊಳಿಸಿತ್ತು. ಆದರೆ, ಸುಪ್ರೀಂಕೋರ್ಟ್ ಅದನ್ನು ಒಪ್ಪದೆ ಟಿಡಿಆರ್ ಪರಿಹಾರ ನೀಡುವ ಆದೇಶ ಪಾಲಿಸುವಂತೆ ಸೂಚನೆ ನೀಡಿತ್ತು. ಅದರ ನಡುವೆಯೂ ಇದೀಗ ಸುಗ್ರೀವಾಜ್ಞೆಗೆ ಕಾನೂನು ರೂಪ ನೀಡಲು ಸರ್ಕಾರ ಮುಂದಾಗಿದ್ದು, ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ 2025 ಅನ್ನು ಮಂಡಿಸಿದೆ.




ವಿಧಾನಸಭೆ ಅಧಿವೇಶನ

ಮುಖ್ಯಮಂತ್ರಿ ಸಿದ್ದರಾಮಯ್ಯ ಪರವಾಗಿ ಸಚಿವ ಪ್ರಿಯಾಂಕ್ ಖರ್ಗೆಯವರು ನಿನ್ನೆ ವಿಧಾನಮಂಡಲದಲ್ಲಿ ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ 2025ವನ್ನು ಮಂಡನೆ ಮಾಡಿದ್ದಾರೆ. ಈ ವಿಧೇಯಕವು 1996ರ ಬೆಂಗಳೂರು ಅರಮನೆ (ಸ್ವಾಧೀನ ಮತ್ತು ವರ್ಗಾವಣೆ) ಕಾಯ್ದೆಗೆ ಪೂರಕವಾಗಿದೆ. ಹಿಂದಿನ ವಿಧೇಯಕವು ಬೆಂಗಳೂರು ಅರಮನೆಯ 472.16 ಎಕರೆ ಭೂಮಿಯನ್ನು ರೂ.11 ಕೋಟಿ ಎಂದು ನಿಗದಿ ಮಾಡಲಾಗಿದೆ. ಅದರಂತೆ ಪರಿಹಾರ ನೀಡಬಹುದಾಗಿದೆ. ಆದರೆ, ರಸ್ತೆ ಅಗಲೀಕರಣಕ್ಕಾಗಿ ಮಾಡಿಕೊಳ್ಳಲಾಗುವ 15.39 ಎಕರೆ ಅರಮನೆ ಮೈದಾನದ ಭೂಮಿಗೆ ಕರ್ನಾಟಕ ಸ್ಟಾಂಪು ಅಧಿನಿಯಮ 1957ರ 45ಬಿ ಪ್ರಕರಣದ ಪ್ರಕಾರ ಅಕ್ಕಪಕ್ಕದ ಪ್ರದೇಶಗಳಲ್ಲಿ ಚಾಲ್ತಿಯಲ್ಲಿರುವ ಮಾರ್ಗಸೂಚಿ ಮೌಲ್ಯದಂತೆ ಟಿಡಿಆರ್ ನೀಡಬೇಕು ಎಂದು ಆದೇಶಿಸಿದೆ. ಸರ್ವೋಚ್ಛ ನ್ಯಾಯಾಲಯದ ಆದೇಶದಿಂದ ಸಂಕೀರ್ಣ ಪರಿಣಾಮಗಳು ಬೀರಲಿವೆ. ಅದನ್ನು ತಪ್ಪಿಸುವ ಉದ್ದೇಶದೊಂದಿಗೆ ನೂತನ ವಿಧೇಯಕ ಜಾರಿಗೊಳಿಸಲು ಸರ್ಕಾರ ಮುಂದಾಗಿದೆ. ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ಮಸೂದೆ 2025 ಮಸೂದೆಯು ಆರ್ಥಿಕವಾಗಿ ದುರ್ಬಲವಾಗಿರುವವರನ್ನು ಹೆಚ್ಚಿನ ಬಡ್ಡಿ ಮತ್ತು ಬಲವಂತದ ವಸೂಲಾತಿ ವಿಧಾನಗಳಿಂದ ರಕ್ಷಿಸುವ ಉದ್ದೇಶವನ್ನು ಹೊಂದಿದೆ.

ಕರ್ನಾಟಕ ಗಿರವಿದಾರರ (ತಿದ್ದುಪಡಿ) ಮಸೂದೆ 2025, ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ಮಸೂದೆ 2025 ಕೂಡ ಇದೇ ಉದ್ದೇಶವನ್ನು ಹೊಂದಿದೆ. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ಮಸೂದೆ 2025ಯನ್ನು ಮಾರುಕಟ್ಟೆ ಸಮಿತಿಯ ಅಧಿಕಾರ ವ್ಯಾಪ್ತಿಯನ್ನು ಮಾರುಕಟ್ಟೆ, ಉಪ-ಮಾರುಕಟ್ಟೆ ಪ್ರದೇಶಕ್ಕೆ ವಿಸ್ತರಿಸಲು, ಗೋದಾಮಿನ ಸೇವಾ ಪೂರೈಕೆದಾರರ ಜವಾಬ್ದಾರಿಯನ್ನು ನಿಗದಿಪಡಿಸಲು ಮತ್ತು ಇ-ಕಾಮರ್ಸ್ ವೇದಿಕೆಗಳನ್ನು ಸ್ಥಾಪಿಸಲು ಪರಿಚಯಿಸಲಾಗಿದೆ.

> **ಬೆಂಗಳೂರು ಅರಮನೆ (ಭೂ ಬಳಕೆ ಮತ್ತು ನಿಯಂತ್ರಣ) ವಿಧೇಯಕ 2025ದ ಜೊತೆಗೆ ಸರ್ಕಾರ ಕರ್ನಾಟಕ ಲೇವಾದೇವಿದಾರರ (ತಿದ್ದುಪಡಿ) ಮಸೂದೆ 2025, ಕರ್ನಾಟಕ ಗಿರವಿದಾರರ (ತಿದ್ದುಪಡಿ) ಮಸೂದೆ 2025, ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆಯ ನಿಷೇಧ (ತಿದ್ದುಪಡಿ) ಮಸೂದೆ 2025, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ಮಸೂದೆ 2025ನ್ನು ಮಂಡಿಸಿದೆ.**

## ಬೆಂಗಳೂರು ಕುಡಿಯುವ ನೀರು ಅನ್ಯ ಕೆಲಸಗಳಿಗೆ ಬಳಕೆ

• ಉದಯವಾಹಿನಿ, ಬೆಂಗಳೂರು


ಸಿಲಿಕಾನ್ ಸಿಟಿ ಮಂದಿಗೆ ಜಲಮಂಡಳಿ ಬಿಸಿ ಮುಟ್ಟಿಸಿದೆ. ಕುಡಿಯುವ ನೀರನ್ನು ಅನ್ಯಬಳಕೆ ಮಾಡಿ ನಿಯಮ ಉಲ್ಲಂಘಿಸಿದವರಿಗೆ ದಂಡದ ಬರೆ ಎಳೆದಿದೆ.

ಕುಡಿಯುವ ನೀರನ್ನ ಅನ್ಯ ಕೆಲಸಗಳಿಗೆ ಬಳಸಬಾರದು. ಹಾಗೆ ಮಾಡಿದರೆ ದಂಡ ಹಾಕುತ್ತೇವೆ ಎಂದು ಆದೇಶ ಮಾಡಿತ್ತು. ಆದೇಶವನ್ನೂ ಲೆಕ್ಕಿಸದೇ ಕುಡಿಯುವ ನೀರನ್ನ ಅನ್ಯ ಕಾರ್ಯಗಳಿಗೆ ಬಳಿಸಿದವರಿಗೆ ದಂಡ ಹಾಕಲಾಗಿದೆ.ಬೆಂಗಳೂರಿನ 417 ಜನರಿಗೆ ನೋಟಿಸ್ ನೀಡಿ ಜಲಮಂಡಳಿ ದಂಡ ಹಾಕಿದೆ. 417 ಜನರಿಗೆ 20.85 ಲಕ್ಷ ದಂಡ ಹಾಕಲಾಗಿದೆ. ಬೆಂಗಳೂರು ಪೂರ್ವ ಭಾಗದ ಜನರು ಹೆಚ್ಚು ನಿಯಮ ಉಲ್ಲಂಘನೆ ಮಾಡಿದ್ದಾರೆ.

ಬೆಂಗಳೂರಿನ 417 ಜನರಿಗೆ ನೋಟಿಸ್

### ಎಲ್ಲೆಲ್ಲಿ ಎಷ್ಟು ಕೇಸ್?

- ಬೆಂಗಳೂರು ಪೂರ್ವ ವಲಯ ರೂ 105 ಕೇಸ್
- ದಂಡ ರೂ 4.25 ಲಕ್ಷ ರೂ.
- ಬೆಂಗಳೂರು ಪಶ್ಚಿಮ ವಲಯ ರೂ111 ಕೇಸ್
- ದಂಡ ರೂ 5.55 ಲಕ್ಷ ರೂ.
- ಬೆಂಗಳೂರು ಉತ್ತರ ವಲಯ ರೂ 84 ಕೇಸ್
- ದಂಡ ರೂ 3.20 ಲಕ್ಷ ರೂ.
- ಬೆಂಗಳೂರು ದಕ್ಷಿಣ ವಲಯ ರೂ 115 ಕೇಸ್
- ದಂಡ ರೂ 5.70 ಲಕ್ಷ ರೂ.



# ಬಂಡೀಪುರದಲ್ಲಿ ದಂಪತಿ ಅಪಹರಣ, 24 ತಾಸಲ್ಲೇ ನಾಲ್ವರು ಆರೋಪಿಗಳು ಅಂದರ್

• ಉದಯವಾಹಿನಿ, ಚಾಮರಾಜನಗರ,

ದೇಶದ ಪ್ರಮುಖ ಪ್ರವಾಸಿ ತಾಣವಾದ ಬಂಡೀಪುರಕ್ಕೆ ರಿಲ್ಯಾಕ್ಸ್ ಮಾಡಲು ಬಂದಿದ್ದ ಕುಟುಂಬವೊಂದು ಅಪಹರಣಕ್ಕೊಳಗಾದ ಪ್ರಕರಣವನ್ನು ಪೊಲೀಸರು 24 ಗಂಟೆಗಳಲ್ಲಿ ಭೇಧಿಸಿ ಸುಖಾಂತ್ಯಗೊಳಿಸಿದ್ದಾರೆ.

ಬೆಂಗಳೂರು ಮೂಲದ ನಿಶಾಂತ್ ತನ್ನ ಪತ್ನಿ ಚಂದನಾ ಮತ್ತು 7 ವರ್ಷದ ಮಗನ ಜೊತೆ ಭಾನುವಾರದಂದು ಬಂಡಿಪುರದ ಕಂಟ್ರಿ ಕ್ಲಬ್ ರೆಸಾರ್ಟ್‌ನಲ್ಲಿ ಚೆಕ್ ಇನ್ ಆಗಿದ್ದರು. ಮಂಗಳವಾರ ಈ ಕುಟುಂಬ ಚೆಕ್ ಔಟ್ ಆಗಬೇಕಿತ್ತು. ಆದರೆ ಮಧ್ಯಾಹ್ನ ರೆಸಾರ್ಟ್‌ನಿಂದ ಹೊರಹೋಗುತ್ತಿದ್ದಂತೆ ಅಟ್ಯಾಕ್ ಮಾಡಿದ ಕಿಡ್ನಾಪರ್ಸ್ ಮಗು ಸಮೇತ ದಂಪತಿಯನ್ನು ಅಪಹರಿಸಿದ್ದರು.



ಉದಯವಾಹಿನಿ ಚಿತ್ರ

ವಾಚ್ ಟವರ್‌ನಲ್ಲಿದ್ದ ರೆಸಾರ್ಟ್ ಮ್ಯಾನೇಜರ್ ಗುರುರಾಜ ಆಚಾರ್ಯ ಇದನ್ನು ಗಮನಿಸಿ ಕೂಡಲೇ ಮಾಹಿತಿ ಕೊಟ್ಟಿದ್ದರಿಂದ ಸ್ಥಳಕ್ಕೆ ಪೊಲೀಸರು ದೌಡಾಯಿಸಿ ಅಪಹರಣದ ಇಂಚಿಂಚು ಮಾಹಿತಿ ಪಡೆದುಕೊಂಡಿದ್ದರು.

ಅಪಹರಣದ ಬೆನ್ನತ್ತಿದ್ದ ಪೊಲೀ ಸರು ಸಿಸಿಟಿವಿ ಹಾಗೂ ಸಿಡಿಆರ್ ಮಾಹಿತಿ ಆಧರಿಸಿ ಕೇವಲ 24 ಗಂಟೆಯಲ್ಲೇ ದಂಪತಿ ಮತ್ತು ಮಗುವನ್ನು ಸುರಕ್ಷಿತವಾಗಿ ರಕ್ಷಣೆ ಮಾಡಿದ್ದಾರೆ.

ಎರಡು ಕಾರಲ್ಲಿ ಬಂದಿದ್ದ ಅಪಹರಣಕಾರರು ಮೂವರನ್ನು ಕಿಡ್ನಾಪ್ ಮಾಡಿ ವಿಜಯಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಹೊನ್ನಹಳ್ಳಿ ಗ್ರಾಮದ ತೋಟದ ಮನೆಯಲ್ಲಿ ಇರಿಸಿದ್ದನ್ನು ಪತ್ತೆ ಹಚ್ಚಿದ ಪೊಲೀಸರು ನಾಲ್ವರ ಹೆಡೆಮುರಿ ಕಟ್ಟಿದ್ದಾರೆ. ಪ್ರಕರಣ ಸಂಬಂಧ ಮಲ್ಲಿಕಾರ್ಜುನ್, ಈರಣ್ಣ, ಸಿದ್ದರಾಮಯ್ಯ ಹಾಗೂ ವಿಶ್ವನಾಥ್ ಎಂಬವರನ್ನು ಬಂಧಿಸಲಾಗಿದೆ.

ನಕಲಿ ಐಡಿ: ಕಿಡ್ನಾಪ್ ಆಗಿದ್ದ ನಿಶಾಂತ್ ಬಳಿ ನಕಲಿ ಬಿಬಿಎಂಪಿ ಐಡಿ ಪತ್ತೆಯಾಗಿದ್ದು, ಸಾಕಷ್ಟು ಅನುಮಾನ ಹುಟ್ಟುಹಾಕಿದೆ. ನಿಶಾಂತ್ ವಿರುದ್ಧವು ಕೇಸ್ ದಾಖಲು ಮಾಡಿ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ತಿಳಿಸಿದ್ದಾರೆ. ಪ್ರಕರಣದ ಮಾಸ್ಟರ್ ಮೈಂಡ್ ಆಗಿರುವ ಪುನೀತ್ ಹಾಗೂ ನಿಶಾಂತ್ ನಡುವೆ ಹಣಕಾಸಿನ ವಿಚಾರಕ್ಕೆ ಈ ಕಿಡ್ನಾಪ್ ಆಗಿದ್ದು ಮೇಲ್ನೋಟಕ್ಕೆ ದೃಢವಾಗಿದೆ. ಪುನೀತ್ ಸೇರಿದಂತೆ ಸ್ನೇಹಿತ್, ಭೀಮನಗೌಡ ತಲೆ ಮರೆಸಿಕೊಂಡಿದ್ದು, ಇವರ ಪತ್ತೆಗೆ ಬಲೆ ಬೀಸಿದ್ದಾರೆ.

ಒಟ್ಟಿನಲ್ಲಿ ನಕಲಿ ಬಿಬಿಎಂಪಿ ಐಡಿ ಕಾರ್ಡ್ ಇಟ್ಟುಕೊಂಡಿದ್ದ ನಿಶಾಂತ್ ವಿರುದ್ಧವೂ ಹಲವು ಅನುಮಾನ ಮೂಡಿದೆ. 24 ತಾಸಲ್ಲೇ ಪ್ರಕರಣ ಸುಖಾಂತ್ಯ ಮಾಡಿರುವ ಚಾಮರಾಜನಗರ ಪೊಲೀಸರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

# ಜನ-ಜಾನುವಾರುಗಳಿಗೆ ಕುಡಿಯುವ ನೀರು, ಮೇವು ಕೊರತೆಯಾಗದಂತೆ ಕ್ರಮ

## ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

• ಉದಯವಾಹಿನಿ, ಚಾಮರಾಜನಗರ,

ಬೇಸಿಗೆ ಸಮೀಪಿಸುತ್ತಿರುವುದರಿಂದ ಜಿಲ್ಲೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರು, ಮೇವಿನ ಲಭ್ಯತೆಗೆ ಕೊರತೆಯಾಗದಂತೆ ಸಮರ್ಪಕ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

**ಶಿಲ್ಪಾ ನಾಗ್ ಅಧಿಕಾರಿಗಳಿಗೆ ಸೂಚನೆ**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಬಾರಿ ಜನವರಿಯಿಂದ ಇದುವರೆಗೆ ವಾಡಿಕೆಗಿಂತ ಮಳೆ ಪ್ರಮಾಣ ಕಡಿಮೆಯಾಗಿದ್ದು, ಕುಡಿಯುವ ನೀರಿನ ಅಭಾವ ಉಂಟಾಗುವ ಸಂಭವವಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳನ್ನು ಪಟ್ಟಿ ಮಾಡಿ ಜನರಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಲಭ್ಯತೆ ಪರಿಶೀಲಿಸಿ ಬೋರೆವೆಲ್ ಕೊರೆಸುವ ವ್ಯವಸ್ಥೆ ಮಾಡಬೇಕು. ಅಗತ್ಯವಿದ್ದರೆ ಸ್ಥಳೀಯ ಪಂಚಾಯಿತಿ ವತಿಯಿಂದ ಟ್ಯಾಂಕರ್‌ಗಳಲ್ಲಿ ನೀರು ಪೂರೈಕೆಗೆ ಮುಂದಾಗುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು. ಜಿಲ್ಲೆಯ ನಗರ, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿರುವ ಎಲ್ಲಾ ವಾರ್ಡ್‌ಗಳಲ್ಲಿ ಶುದ್ಧ ಕುಡಿಯುವ ನೀರಿನ (ಆರ್.ಒ ಪ್ಲಾಂಟ್) ಕೇಂದ್ರಗಳ ನೀರಿನ ಶುದ್ದತೆಗಾಗಿ ನೀರಿನ ಮಾದರಿಯನ್ನು ಸಂಗ್ರಹಿಸಿ ಪರೀಕ್ಷೆಗೊಳಪಡಿಸಬೇಕು. ಅಂಗನವಾಡಿ, ಶಾಲೆ, ವಿದ್ಯಾರ್ಥಿನಿಲಯಗಳಲ್ಲಿ ಕುಡಿಯುವ ನೀರಿನ ಶುದ್ದತೆ ಬಗ್ಗೆ ಪರಿಶೀಲಿಸಬೇಕು. ಎಲ್ಲಾ ಗ್ರಾಮಗಳಲ್ಲಿರುವ ಓವರ್‌ಹೆಡ್ ಟ್ಯಾಂಕ್‌ಗಳ ಸ್ವಚ್ಚತೆಗೆ ಆದ್ಯತೆ ನೀಡಬೇಕು. ಈ ಬಗ್ಗೆ ಕಂದಾಯಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಂಬಂಧಿತ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು. ಜಾನುವಾರುಗಳಿಗೆ ಮೇವಿಗೆ ಕೊರತೆಯಾಗದಂತೆ ಪಶು ಪಾಲನಾ ಇಲಾಖೆ ಮೇವು ಬ್ಯಾಂಕ್ ತೆರೆಯಲು ಮುಂದಾಗಬೇಕು. ಗೋಶಾಲೆಗಳಿಗೆ ಸಮರ್ಪಕವಾಗಿ ಮೇವು ಪೂರೈಕೆ ಮಾಡಬೇಕು. ಹನೂರು ಭಾಗದ ಪಶುಪಾಲನಾ ಅಧಿಕಾರಿಗಳು ಟಾಸ್ಕ್ ಫೋರ್ಸ್ ಸಭೆ ನಡೆಸಿ ಮೇವಿನ ಕಿಟ್ ತಲುಪಿರುವ ಬಗ್ಗೆ ಅಧಿಕಾರಿಗಳು ಖಾತರಿಪಡಿಸಿಕೊಳ್ಳಬೇಕು.

ಅಗತ್ಯವಿರುವೆಡೆ ಮೇವಿನ ಕಿರುಪೊಟ್ಟಣಗಳನ್ನು ಪೂರೈಸಬೇಕು ಎಂದ ಜಿಲ್ಲಾಧಿಕಾರಿಯವರು ಕಳೆದ ಬಾರಿ ದನಗಳು ಪ್ಲಾಸ್ಟಿಕ್ ತಿಂದು ಸಾವಿಗೀಡಾದ ಪ್ರಕರಣಗಳು ಮರುಕಳಿಸದಂತೆ ಎಚ್ಚರ ವಹಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಚಾಮರಾಜನಗರ ಪಟ್ಟಣ ವ್ಯಾಪ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಪ್ಲಾಂಟ್‌ಗಳನ್ನು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಪಟ್ಟಣದ ಹಲವೆಡೆ ಚರಂಡಿಗಳಲ್ಲಿ ಕಟ್ಟಿಕೊಂಡಿರುವ ಕಸ ತೆರವುಗೊಳಿಸಬೇಕು. ಗುಂಡ್ಲುಪೇಟೆ ರಸ್ತೆ ಹಾಗೂ ಅಂಚೆಕಚೇರಿ ಮುಂಭಾಗ ರಸ್ತೆಬದಿಯಲ್ಲಿ ಕಸ ಸಂಗ್ರಹಣೆಯಾಗಿದ್ದು, 2 ರಿಂದ 3 ದಿನದೊಳಗೆ ಸ್ವಚ್ಚಗೊಳಿಸಬೇಕು.

**ಜಿಲ್ಲೆಯಲ್ಲಿ ಪ್ರಸ್ತುತ ಬಿಸಿಲಿನ ತಾಪ (ಹಿಟ್ ವೇವ್) ಹೆಚ್ಚಾಗಿರುವುದರಿಂದ ಮಕ್ಕಳು, ಹಿರಿಯ ನಾಗರಿಕರು, ಆರೋಗ್ಯ ತೊಂದರೆಯಿಂದ ಬಳಲುತ್ತಿರುವವರು ಮಧ್ಯಾಹ್ನದ ಸಮಯದಲ್ಲಿ ಹೊರಗೆ ಬರುವುದನ್ನು ಕಡಿಮೆ ಮಾಡಬೇಕು. ಬಾಯಾರಿಕೆ ಇರಲಿ, ಇಲ್ಲದಿರಲಿ ಪ್ರತಿದಿನ 3 ಲೀಟರ್ ನೀರು ಕುಡಿಯಬೇಕು. ಬಿಸಿಲಿನ ತಾಪದಿಂದ (ಹಿಟ್ ವೇವ್) ರಕ್ಷಣೆ ಪಡೆಯಲು ಜನರಿಗೆ ಸಲಹೆ ನೀಡಬೇಕು. ನರೇಗಾ ಯೋಜನೆಯಡಿ ಕೆಲಸ ಮಾಡುವವರಿಗೆ ನೆರಳಿನ ವ್ಯವಸ್ಥೆ ಕಲ್ಪಿಸಬೇಕು. ಕಟ್ಟಡ ಹಾಗೂ ಇಟ್ಟಿಗೆ ಕಾರ್ಮಿಕರು ಆದಷ್ಟೂ ಬಿಸಿಲಿನ ತಾಪದಿಂದ ರಕ್ಷಿಸಿಕೊಳ್ಳಬೇಕು. ಪಕ್ಷಿಗಳು ನೀರು ಕುಡಿಯಲು ಅನುಕೂಲವಾಗುವಂತೆ ಸಾರ್ವಜನಿಕರು ತಮ್ಮ ಮನೆಯ ಮೇಲ್ಭಾಗದಲ್ಲಿ ಹಾಗೂ ನೌಕರರು ಸರ್ಕಾರಿ ಕಟ್ಟಡಗಳ ಮೇಲೆ ಮಣ್ಣಿನ ಟಬ್, ಮಡಿಕೆ, ಪಾತ್ರೆಗಳಲ್ಲಿ ನೀರು ತುಂಬಿಸಿಡಬೇಕು ಎಂದು ತಿಳಿಸಿದರು.**

# ಪರಿಶಿಷ್ಟರ ಮೇಲಿನ ದೌರ್ಜನ್ಯ ತಡೆಗೆ ಜಾಗೃತಿ

• ಉದಯವಾಹಿನಿ, ರಾಮನಗರ

ಪರಿಶಿಷ್ಟ ಸಮುದಾಯದವರ ಮೇಲಿನ ದೌರ್ಜನ್ಯ ತಡೆಗೆ ಸಂಬಂಧಿಸಿದಂತೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ , ಸವಿ ಸಾಂಸ್ಕೃತಿಕ ಕಲಾ ಟ್ರಸ್ಟ್ ವತಿಯಿಂದ, ನಗರದಲ್ಲಿ ಇತ್ತೀಚೆಗೆ ನಾಗರಿಕ ಹಕ್ಕು ರಕ್ಷಣಾ ಕಾಯ್ದೆ-1955 ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ಹಳೆ ಬಸ್ ನಿಲ್ದಾಣ ವೃತ್ತದಲ್ಲಿ ಜರುಗಿತು.ದೌರ್ಜನ್ಯಕ್ಕೊಳಗಾದ ಪರಿಶಿಷ್ಟರಿಗೆ ಸರ್ಕಾರವು ನೀಡುವ ಸೌಲಭ್ಯಗಳು ಹಾಗೂ ಇತರ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರ, ವಿಚಾರಗೋಷ್ಠಿ ಹಾಗೂ ಬೀದಿ ನಾಟಕ ಪ್ರದರ್ಶನ ಸೇರಿದಂತೆ ಇತರ ಸಾಂಸ್ಕೃತಿಕ ಕಾರ್ಯಕ್ರಮ ಸಹ ಇದೇ ಸಂದರ್ಭದಲ್ಲಿ ಜರುಗಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ನಗರಸಭೆ ಅಧ್ಯಕ್ಷ ಕೆ. ಶೇಷಾದ್ರಿ ಶಶಿ, 'ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳಾಗಿದ್ದು, ದೇಶವು ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸುತ್ತಿದೆ. ಆದರೆ, ಇದರ ಜೊತೆಗೆ ಪರಿಶಿಷ್ಟರ ಮೇಲಿನ ದೌರ್ಜನ್ಯವೂ ಹೆಚ್ಚುತ್ತಿರುವುದು ಕಳವಳಕಾರಿ. ಜಾತಿ ಮತ್ತು ದೌರ್ಜನ್ಯ ನಿಂತಾಗ ಮಾತ್ರ ಸಮ


ಉದಯವಾಹಿನಿ ಚಿತ್ರ

ಸಮಾಜ ನಿರ್ಮಾಣ ಸಾಧ್ಯ ಎಂದರು.

ಜಿಲ್ಲಾ ದಲಿತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಶಿವಕುಮಾರಸ್ವಾಮಿ ಮಾತನಾಡಿ, 'ಪರಿಶಿಷ್ಟರ ಮೇಲಿನ ದೌರ್ಜನ್ಯ ಕಡಿಮೆಯಾಗಬೇಕಾದರೆ, ಕೇವಲ ಪರಿಶಿಷ್ಟರಿಗೆ ಮಾತ್ರವಲ್ಲದೆ ಮೇಲ್ವರ್ಗದವರಿಗೆ ಹೆಚ್ಚಿನ ಅರಿವು ಹಾಗೂ ಜಾಗೃತಿ ಮೂಡಿಸುವ ಅಗತ್ಯವಿದೆ. ಇಲಾಖೆಯು ಈ ನಿಟ್ಟಿನಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು' ಎಂದರು.

ಹಿಂದೆ ನಡೆಯುತ್ತಿದ್ದಂತಹ ಗಂಭೀರ ದೌರ್ಜನ್ಯಗಳು ಈಗ ಸ್ವಲ್ಪ ಮಟ್ಟಿಗೆ ಕಡಿಮೆಯಾಗಿವೆ. ಇತ್ತೀಚೆಗೆ ಕ್ಷುಲ್ಲಕ ಕಾರಣಕ್ಕೆ ನಡೆಯುವ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿವೆ.

ಪರಿ ಶಿಷ್ಟರು ಇತರರಿಗೆ ಸರಿಸಮಾನವಾಗಿ ಶಿಕ್ಷಣ ಪಡೆದಿದ್ದರೆ, ಆಸ್ತಿ ಹೊಂದಿದ್ದರೆ, ಕಾರು-ಬೈಕ್‌ನಲ್ಲಿ ಓಡಾಡುತ್ತಿದ್ದರೂ ಸಹಿಸದೆ ದೌರ್ಜನ್ಯ ನಡೆಯುವುದುಂಟು. ಹಾಗಾಗಿ, ದೌರ್ಜನ್ಯ ತಡೆ ಕಾಯ್ದೆ ಕುರಿತು ಪರಿಶಿಷ್ಟರಿಗಿಂತ ಹೆಚ್ಚಾಗಿ ಮೇಲ್ವರ್ಗದವರಿಗೆ ಜಾಗೃತಿ ಮೂಡಿಸಬೇಕಿದೆ'

**'ಕಾಲ ಬದಲಾದಂತೆ ಪರಿಶಿಷ್ಟರ ಮೇಲಾಗುತ್ತಿರುವ ದೌರ್ಜನ್ಯಗಳ ಸ್ವರೂಪವೂ ಬದಲಾಗುತ್ತಿದೆ. ಸಮುದಾಯಗಳು ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಸ್ವಾವಲಂಬನೆಯತ್ತ ಸಾಗುತ್ತಿದ್ದರೂ ದೌರ್ಜನ್ಯಗಳು ಮಾತ್ರ ನಿಂತಿಲ್ಲ. ಇಂದಿಗೂ ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆ ಪ್ರಮಾಣ ತೀರಾ ಕಡಿಮೆ ಇದೆ. ದೌರ್ಜನ್ಯ ತಡೆಗೆ ಕಾನೂನಿನ ರಕ್ಷಣೆಯಷ್ಟೇ ಸಾಲದು. ಬದಲಿಗೆ, ನಮ್ಮೆಲ್ಲರ ಮನಸ್ಥಿತಿಯೂ ಬದಲಾಗಬೇಕು' ಎಂದು ಹೇಳಿದರು.**

ಎಂದು ಅಭಿಪ್ರಾಯಪಟ್ಟರು. ಉಪ ವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯ ಹರೀಶ್ ಬಾಲು, ನಗರಸಭೆ ಸದಸ್ಯೆ ಮಂಜುಳಾ ವೆಂಕಟೇಶ್, ಮುಖಂಡರಾದ ಗವಿಯಯ್ಯ, ಶಿವಲಿಂಗಯ್ಯ, ಅಪ್ಪಗೆರೆ ಶ್ರೀನಿವಾಸ್ ಹಾಗೂ ಇತರರು ಇದ್ದರು. ಜೂನಿಯರ್ ಮಳವಳ್ಳಿ ಮಹಾದೇವಸ್ವಾಮಿ ತಂಡದವರು ಅರಿವು ಮೂಡಿಸುವ ಜನಪದ ಗೀತೆಗಳನ್ನು ಹಾಡಿದರು. ಶ್ರೀನಿವಾಸ್ ಮತ್ತು ತಂಡ ಬೀದಿ ನಾಟಕ ಪ್ರದರ್ಶಿಸಿತು.

# ಕೆಎಂಎಫ್ ಕಾರ್ಮಿಕರ ಪ್ರತಿಭಟನೆ ಅಂತ್ಯ

• ಉದಯವಾಹಿನಿ, ಚನ್ನಪಟ್ಟಣ

ತಾಲ್ಲೂಕಿನ ಕಣ್ವ ರಸ್ತೆಯಲ್ಲಿರುವ ಕೆಎಂಎಫ್‌ನ ನಂದಿನಿ ಹೈಟೆಕ್ ಮೆಗಾ ಪೌಡರ್ ಘಟಕದಲ್ಲಿ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿ, ದಿನಗೂಲಿ ಕಾರ್ಮಿಕರು ಘಟಕದ ಎದುರು ನಡೆಸುತ್ತಿದ್ದ ಪ್ರತಿಭಟನೆ ಅಂತ್ಯಗೊಂಡಿತು.

ಪ್ರತಿಭಟನಾ ಸ್ಥಳಕ್ಕೆ ಯುವ ಕಾಂಗ್ರೆಸ್ ಘಟಕದ ಪದಾಧಿಕಾರಿಗಳು ತೆರಳಿ ತಮ್ಮ ಬೆಂಬಲ ಸೂಚಿಸಿದ್ದರು. ಕಾರ್ಮಿಕರ ನಿಯೋಗದೊಂದಿಗೆ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ವಿ. ಚಂದ್ರಸಾಗರ್, ಪ್ರಧಾನ ಕಾರ್ಯದರ್ಶಿ ಎಸ್. ವಂಕಟೇಶ್ ಹಾಗೂ ಪದಾಧಿಕಾರಿಗಳು ಕೆಎಂಎಫ್ ಅಧಿಕಾರಿಗಳನ್ನು ಭೇಟಿ ಮಾಡಿದರು. ಕೆಲಸದ ಸ್ಥಳದಲ್ಲಿ ಕಿರುಕುಳ ನೀಡದೆ, ಪ್ರತಿಭಟನಾನಿರತರ ಬೇಡಿಕೆಗೆ ಸ್ಪಂದಿಸುವಂತೆ ಆಗ್ರಹಿಸಿದರು. ನಂತರ ಅಧಿಕಾರಿಗಳು ಪ್ರತಿಭಟನಾ ನಿರತರನ್ನು ಭೇಟಿ ಮಾಡಿ ಬೇಡಿಕೆಗೆ ಸ್ಪಂದಿಸುವ ಭರವಸೆ ನೀಡಿ. ಕೆಲಸಕ್ಕೆ ಮರಳುವಂತೆ ಮನವಿ ಮಾಡಿದರು. ಬಳಿಕ ಕಾರ್ಮಿಕರು ಪ್ರತಿಭಟನೆ ಕೈಬಿಟ್ಟರು. ಘಟಕದಲ್ಲಿ ಕೆಲಸ ಮಾಡುವ ಕಾರ್ಮಿಕರು ಕೆಲ ಬೇಡಿಕೆಗಳನ್ನು ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದರು. ಅವರ ಪರವಾಗಿ ಯುವ ಕಾಂಗ್ರೆಸ್‌ನವರು ಸಹ ನನ್ನನ್ನು ಭೇಟಿ ಮಾಡಿದ್ದರು. ಕಾರ್ಮಿಕರ ಮನವಿಗೆ ಸ್ಪಂದಿಸುವುದಾಗಿ ಭರವಸೆ ನೀಡಲಾಗಿದ್ದು, ಸದ್ಯ ಪ್ರತಿಭಟನೆ ಹಿಂಪಡೆದಿದ್ದಾರೆ ಎಂದು ಘಟಕದ ಅಧಿಕಾರಿ ಗೋವಿಂದೇಗೌಡ ತಿಳಿಸಿದರು.


ಉದಯವಾಹಿನಿ ಚಿತ್ರ

**ಅಧಿಕಾರಿ ಗೋವಿಂದೇಗೌಡ ಹೇಳಿಕೆ**

**ಕಾರ್ಮಿಕರ ಕೆಲಸಕ್ಕೆ ತಕ್ಕಂತೆ ವೇತನ ನೀಡುತ್ತಿಲ್ಲ. ರಾತ್ರಿ ಕರ್ತವ್ಯ ಮಾಡುವವರಿಗೆ ಊಟ ಹಾಗೂ ಉಪಾಹಾರ ವ್ಯವಸ್ಥೆ ಇಲ್ಲ. ಅಧಿಕಾರಿಗಳು ಮನಸ್ಸಿಗೆ ಬಂದಾಗ ಕೆಲಸ ಕೊಡುತ್ತಾರೆ. ಈ ಕುರಿತು ಪ್ರಶ್ನಿಸಿದರೆ, ಕೆಲಸ ಇದ್ದಾಗ ಮಾಡಿ. ಇಲ್ಲದಿದ್ದರೆ ಬರಬೇಡಿ ಎಂದು ದರ್ಪದಿಂದ ಹೇಳುತ್ತಿದ್ದಾರೆ. ಗುತ್ತಿಗೆ ನೌಕರರನ್ನು ಗುಲಾಮರಂತೆ ಕಾಣುತ್ತಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.**

# ಶಾಲೆಗಳಲ್ಲಿ ಸ್ಪೋಕನ್ ಇಂಗ್ಲೀಷ್ ತರಗತಿ: ಅಧಿಕಾರಿ ಉಮಾ

• ಉದಯವಾಹಿನಿ, ಹಲಗೂರು

'ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ತಾಲ್ಲೂಕಿನ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಆನ್‌ಲೈನ್ ಮೂಲಕ 'ಸ್ಪೋಕನ್ ಇಂಗ್ಲಿಷ್' ತರಗತಿಗಳನ್ನು ಆಯೋಜಿಸಲು ಯೋಜನೆ ರೂಪಿಸಿದ್ದು. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಜಾರಿಗೊಳಿಸಲು ಕ್ರಮ ವಹಿಸಲಾಗುವುದು' ಎಂದು ಕ್ಷೇತ್ರ ಶಿಕ್ಷಣ ಅಧಿಕಾರಿ ವಿ.ಈ.ಉಮಾ ಹೇಳಿದರು.

ಹಲಗೂರು ಸಮೀಪದ ಹುಲ್ಲಾಗಾಲ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು. 'ಸರ್ಕಾರಿ ಶಾಲೆಯಲ್ಲಿ ಗುಣಾತ್ಮಕ ಶಿಕ್ಷಣ ನೀಡಲು ನುರಿತ ಶಿಕ್ಷಕರ ತಂಡವಿದ್ದು, ವಿದ್ಯಾರ್ಥಿಗಳ ಪ್ರತಿಭೆ ಹೊರತರಲು ಶ್ರಮಿಸುತ್ತಿದ್ದಾರೆ. ಗ್ರಾಮೀಣ ಭಾಗದ ಪೋಷಕರು ಮನಸ್ಸು ಮಾಡಿದರೆ ಮಕ್ಕಳ ದಾಖಲಾತಿ ಹೆಚ್ಚಿಸಬಹುದು. ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹ ತ್ಯಜಿಸಿ, ನೀತಿ ಮತ್ತು ಮಾನವೀಯ ಮೌಲ್ಯಗಳನ್ನು ತುಂಬುವ ಸರ್ಕಾರಿ ಶಾಲೆಗಳಿಗೆ ದಾಖಲಿಸಿ' ಎಂದು ಮನವಿ ಮಾಡಿದರು. ಗ್ರಾಮದ ದಾನಿಗಳಾದ ಅಕ್ಕೂರು ಚಿಕ್ಕತಮ್ಮಯ್ಯ ಅವರ ಮಗ ಗ್ಯಾಸ್ ನಾಗರಾಜು ಅವರು ಸುಮಾರು ಎಂಟು ವರ್ಷಗಳಿಂದ ಶಾಲಾಭಿವೃದ್ಧಿಗೆ ಕೈಜೋಡಿಸಿರುವುದು ಶ್ಲಾಘನೀಯ. ಶಾಲೆಗೆ ಅಗತ್ಯವಿರುವ ಆಟೋಪಕರಣ, ಕಲಿಕೋಪಕರಣ ಮತ್ತು ಮೂಲಸೌಕರ್ಯಕ್ಕೆ ರೂ. 6 ಲಕ್ಷಕ್ಕೂ ಹೆಚ್ಚು ಖರ್ಚು ಮಾಡಿದ್ದು, ಸರ್ಕಾರಿ ಶಾಲೆಯ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವ ನಾಗರಾಜು ಮಾದರಿಯಾಗಿದ್ದಾರೆ.

ಶಾಲೆಗಳ ಅಭಿವೃದ್ಧಿಗೆ ಸಮಾಜ ಕೈ ಜೋಡಿಸಿದಾಗ ಮತ್ತಷ್ಟು ಸಾಧಿಸಲು ಸಾಧ್ಯವಿದೆ' ಎಂದರು.


ಉದಯವಾಹಿನಿ ಚಿತ್ರ

# ಕುಣಿಗಲ್: ಪ್ರಯಾಣಿಕರ ತಂಗುದಾಣ ಅವ್ಯವಸ್ಥೆ

• ಉದಯವಾಹಿನಿ, ಕುಣಿಗಲ

ಬೇಸಿಗೆಯ ಬಿಸಿಲು ಏರುತ್ತಿದ್ದು, ಪಟ್ಟಣದಲ್ಲಿರುವ ಪ್ರಯಾಣಿಕರ ತಂಗುದಾಣಗಳ ಸುಸ್ಥಿತಿಗೆ ಪುರಸಭೆ ಅಧಿಕಾರಿ ಗಮನಹರಿಸುವಂತೆ ನಾಗರಿಕರು ಮನವಿ ಮಾಡಿದ್ದಾರೆ.

ಜನಪ್ರತಿನಿಧಿಗಳ ಮತ್ತು ಅಧಿಕಾರಿಗಳ ಇಚ್ಛಾಶಕ್ತಿ ಕೊರತೆಯಿಂದಾಗಿ ಪುರಸಭೆ ವ್ಯಾಪ್ತಿಯಲ್ಲಿರುವ ಪ್ರಯಾಣಿಕರ ತಂಗುದಾಣಗಳು ಅವ್ಯವಸ್ಥೆಯ ಆಗರವಾಗಿವೆ. ಪುರಸಭೆ ಬಸ್ ನಿಲ್ದಾಣದಲ್ಲಿ 40 ವರ್ಷಗಳ ಹಿಂದೆ ರೋಟರಿ ಕ್ಲಬ್ ವತಿಯಿಂದ ಪ್ರಯಾಣಿಕರ ತಂಗುದಾಣ ನಿರ್ಮಾಣವಾಗಿದೆ. ನಂತರ ವರ್ತಕರ ಸಂಘದಿಂದಲೂ ಮತ್ತೊಂದು ತಂಗುದಾಣ ನಿರ್ಮಾಣವಾಗಿದೆ. ಎರಡೂ ಶಿಥಿಲವಾಗಿದ್ದು ಬಳಕೆಗೆ ಯೋಗ್ಯವಾಗಿಲ್ಲದಿದ್ದರೂ ಪ್ರಯಾಣಿಕರು ಬಳಕೆ ಮಾಡುತ್ತಿದ್ದಾರೆ. ತುಮಕೂರು ರಸ್ತೆ ಮತ್ತು




ಮದ್ದೂರು ರಸ್ತೆಯಲ್ಲಿ ತಂಗುದಾಣಗಳ ನಿರ್ಮಾಣದ ಬಗ್ಗೆ 25 ವರ್ಷಗಳಿಂದಲೂ ಚರ್ಚೆಗಳು ಮಾತ್ರ ನಡೆಯುತ್ತಿದೆ. ಯಾರು ಗಮನ ಹರಿಸುತ್ತಿಲ್ಲ ಎಂದು ವಿಶ್ವಕರ್ಮ ಸಮಾಜದ ಮುಖ್ಯಸ್ಥ ಕುಮಾರ್ ದೂರಿದ್ದಾರೆ. ಕಳೆದ ಹತ್ತು ವರ್ಷಗಳ ಹಿಂದೆ ಡಿ.ನಾಗರಾಜಯ್ಯ ಶಾಸಕರಾಗಿದ್ದ ಸಮಯದಲ್ಲಿ ಹುಚ್ಚಮಾಸ್ತಿಗೌಡ ವೃತ್ತ ಮತ್ತು ಕೆನರಾ ಬ್ಯಾಂಕ್ ಬಸ್ ನಿಲ್ದಾಣದ ಬಳಿ ಸುಸಜ್ಜಿತ ತಂಗುದಾಣ ನಿರ್ಮಾಣವಾಗಿತ್ತು. ಪುನಶ್ಚೇತನಕ್ಕೆ ಯಾರು ಗಮನ ಹರಿಸಿಲ್ಲ. ಕಳೆದ ವರ್ಷ ಪುರಸಭೆಯಿಂದ ಪಟ್ಟಣದ ಕುವೆಂಪು ನಗರದ ಬಿಜಿಎಸ್ ಶಾಲೆ ಬಳಿ 17 ಲಕ್ಷ ವೆಚ್ಚದಲ್ಲಿ ಪ್ರಯಾಣಿಕರ ತಂಗುದಾಣ ನಿರ್ಮಾಣವಾಗಿದ್ದರೂ, ಕಾಮಗಾರಿ ಪೂರ್ಣಗೊಂಡಿಲ್ಲ. ಸಾರ್ವಜನಿಕರ ಬಳಕೆಗೆ ನೀಡುವ ಮುನ್ನವೆ ಅವ್ಯವಸ್ಥೆಯಾಗಿದೆ.

**ಬೇಗೂರು ಗೇಟ್ ಬಳಿ ಸಂಸದ ಡಿ.ಕೆ.ಸುರೇಶ್ ಅನುದಾನದಲ್ಲಿ ಹೈಟೆಕ್ ಪ್ರಯಾಣಿಕರ ತಂಗುದಾಣದ ಕಾಮಗಾರಿ ಪೂರ್ಣಗೊಂಡಿಲ್ಲ. ಈ ಪ್ರದೇಶದಲ್ಲಿ ಕಸದ ರಾಶಿಗಳು ಹೆಚ್ಚಾಗಿದೆ. ತಂಗುದಾಣಗಳ ಸುಸ್ಥಿತಿಗೆ ಪುರಸಭೆ ಅಧಿಕಾರಿಗಳು ಗಮನ ಹರಿಸುವಂತೆ ಕರವೇ ಅಧ್ಯಕ್ಷ ಮಂಜುನಾಥ್, ಕನ್ನಡ ಸೇನೆ ಅಧ್ಯಕ್ಷ ಶ್ರೀನಿವಾಸ್, ಟೌನ್ ಬಳಕೆದಾರರ ಸಂಘದ ನಿರ್ದೇಶಕ ಮಾರುತಿ ಸೇವಾ ಭಾಗ್ಯ ಸಂಸ್ಥೆಯ ವಿನೋದ್, ಪದ್ಮನಾಭ ಮನವಿ ಮಾಡಿದ್ದಾರೆ.**

# ಮುಡಾ ಕೇಸ್‌ನಲ್ಲಿ ಸಿಎಂ ವಿರುದ್ಧ ಅತೀ ಹೆಚ್ಚು ದಾಖಲೆ

## ಸಿದ್ದರಾಮಯ್ಯ ಅವರ ಭ್ರಷ್ಟಾಚಾರದ ಬಗ್ಗೆ ಕಾಂಗ್ರೆಸ್ ನಾಯಕರಲ್ಲಿ ಅಸಮಾಧಾನ ಇದೆ

• ಉದಯವಾಹಿನಿ, ಮೈಸೂರು



ಸಿದ್ದರಾಮಯ್ಯ ಅವರ ಭ್ರಷ್ಟಾಚಾರದ ಬಗ್ಗೆ ಅಸಮಾಧಾನ ಇರುವ ಜನ ಕಾಂಗ್ರೆಸ್‌ನಲ್ಲಿದ್ದಾರೆ. ಎದುರಿಗೆ ಮಾತನಾಡುವುದಿಲ್ಲ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಅತೀ ಹೆಚ್ಚು ದಾಖಲೆ ಕೊಟ್ಟಿದ್ದೇ ಕಾಂಗ್ರೆಸ್ ನಾಯಕರು ಎಂದು ಮುಡಾ ಹಗರಣದ ದೂರುದಾರ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೇಳಿದ್ದಾರೆ.

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಜನವರಿ ತಿಂಗಳಿಂದ ನನಗೆ ಅತಿ ಹೆಚ್ಚಿನ ದಾಖಲೆಗಳು ಕಾಂಗ್ರೆಸ್ ನಾಯಕರಿಂದಲೇ ಬಂದಿವೆ. ಕಾಂಗ್ರೆಸ್ ನಾಯಕರು ಕೊಟ್ಟಿರುವ ದಾಖಲೆಗಳು ನನ್ನ ಹೋರಾಟದ ವೇಗ ಹೆಚ್ಚಿಸಿವೆ ಎಂದು ಪ್ರತಿಕ್ರಿಯಿಸಿದ್ದಾರೆ. ಕಾಂಗ್ರೆಸ್‌ನ ಬಣ ಬಡಿದಾಟ, ಸಿಎಂ ಬದಲಾವಣೆ ವಿಚಾರದ ಚರ್ಚೆಯ ನಡುವೆ ಸ್ನೇಹಮಯಿ ಕೃಷ್ಣ ಅವರ ಈ ಹೇಳಿಕೆ ಇನ್ನಷ್ಟು ಕುತೂಹಲ ಮೂಡಿಸಿವೆ. ಕಾಂಗ್ರೆಸ್‌ನಲ್ಲಿ ಒಳಗೊಳಗೆ ಎಲ್ಲವೂ ಸರಿಯಿಲ್ಲ, ಸಿಎಂ ಬಗ್ಗೆ ಅಸಮಾಧಾನ ಇರುವವರು ಇದ್ದಾರೆ ಎನ್ನುವ ಚರ್ಚೆಗೆ ಇದು ಇನ್ನಷ್ಟು ಪುಷ್ಟಿ ನೀಡಿದೆ.

**ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ದೂರುದಾರ ಸ್ನೇಹಮಯಿ ಕೃಷ್ಣ ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ. ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಅತೀ ಹೆಚ್ಚು ದಾಖಲೆ ಕೊಟ್ಟಿದ್ದೇ ಕಾಂಗ್ರೆಸ್ ನಾಯಕರು ಎಂದಿದ್ದಾರೆ. ಸಿಎಂ ಭ್ರಷ್ಟಾಚಾರದ ಬಗ್ಗೆ ಕಾಂಗ್ರೆಸ್ ನಾಯಕರಲ್ಲಿ ಅಸಮಾಧಾನ ಇದೆ. ಕೊಟ್ಟಿರುವ ದಾಖಲೆಗಳು ನನ್ನ ಹೋರಾಟದ ವೇಗ ಹೆಚ್ಚಿಸಿವೆ ಎಂದಿದ್ದಾರೆ.**

- ಸಿದ್ದರಾಮಯ್ಯ ಅವರ ಭ್ರಷ್ಟಾಚಾರದ ಬಗ್ಗೆ ಕಾಂಗ್ರೆಸ್ ನಾಯಕರಲ್ಲಿ ಅಸಮಾಧಾನ ಇದೆ'
- ' ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಅತೀ ಹೆಚ್ಚು ದಾಖಲೆ ಕೊಟ್ಟಿದ್ದೇ ಕಾಂಗ್ರೆಸ್ ನಾಯಕರು'
- ಅವರು ಕೊಟ್ಟಿರುವ ದಾಖಲೆಗಳು ನನ್ನ ಹೋರಾಟದ ವೇಗ ಹೆಚ್ಚಿಸಿವೆ : ಸ್ನೇಹಮಯಿ ಕೃಷ್ಣ
- ಮುಡಾ ಪ್ರಕರಣದ ಮೂಲ ದೂರುದಾರ ಸ್ನೇಹಮಯಿ ಕೃಷ್ಣ ಹಾಗೂ ಸಿಎಂ ಸಿದ್ದರಾಮಯ್ಯ




### ಸಿಎಂಗೆ ಮತ್ತೆ ಸಂಕಷ್ಟ

**ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮತ್ತೆ ಸಂಕಷ್ಟ ಎದುರಾಗಿದೆ. ಮುಡಾ ಪ್ರಕರಣದ ತನಿಖೆಯನ್ನು ಕೇಂದ್ರೀಯ ತನಿಖಾ ದಳಕ್ಕೆ (ಸಿಬಿಐ) ವಹಿಸಲು ನಿರಾಕರಿಸಿ ಹೈಕೋರ್ಟ್‌ನ ಏಕಸದಸ್ಯ ಪೀಠವು ನೀಡಿರುವ ತೀರ್ಪು ಪ್ರಶ್ನಿಸಿ ಮೂಲ ದೂರುದಾರ ಮೈಸೂರಿನ ಸ್ನೇಹಮಯಿ ಕೃಷ್ಣ ಮೇಲ್ಮನವಿ ಸಲ್ಲಿಸಿದ್ದಾರೆ.**

ಮೇಲ್ಮನವಿ ಸಲ್ಲಿಸಿದ್ದು, ಅದಿನ್ನೂ ವಿಚಾರಣೆಗೆ ನಿಗದಿಯಾಗಬೇಕಿದೆ. ಸಿಬಿಐ ತನಿಖೆಗೆ ವಹಿಸುವಂತೆ ಕೋರಿ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು ಫೆ.7 ರಂದು ವಜಾ ಮಾಡಿತ್ತು.

ವಿಚಾರಣಾಧೀನ ನ್ಯಾಯಾಲಯಕ್ಕೆ ಸಿಆರ್‌ಪಿಸಿ ಸೆಕ್ಷನ್ 156(3) ಅಡಿ ಪ್ರಕರಣವನ್ನು ಸಿಬಿಐಗೆ ವಹಿಸುವ ಅಧಿಕಾರವಿಲ್ಲ. ಈ ಅಧಿಕಾರ ಹೈಕೋರ್ಟ್‌ಗೆ ಸಂವಿಧಾನದ 226ನೇ ವಿಧಿ ಮತ್ತು ಸುಪ್ರೀಂಕೋರ್ಟ್‌ಗೆ ಸಂವಿಧಾನದ 32 ಅಥವಾ 142 ನೇ ವಿಧಿಯಡಿ ಮಾತ್ರ ಇದೆ ಎಂಬುದನ್ನು ಅರ್ಥೈಸಿಕೊಳ್ಳುವಲ್ಲಿ ಕೋರ್ಟ್ ವಿಫಲವಾಗಿದೆ. ಅಲ್ಲದೆ, ಪ್ರಕರಣವನ್ನು ಸಿಬಿಐ ಅಥವಾ ಬೇರಾವುದಾದರೂ ಸ್ವತಂತ್ರ ತನಿಖಾ ಸಂಸ್ಥೆ ನಡೆಸಬೇಕು ಎಂದು ಆರಂಭದಿಂದಲೂ ಕೋರುತ್ತಿರುವುದಾಗಿ ಸ್ನೇಹಮಯಿ ಕೃಷ್ಣ ವಿವರಿಸಿದ್ದಾರೆ. ಕಳೆದ ತಿಂಗಳು ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಪೊಲೀಸರು ವಿಚಾರಣಾಧೀನ ನ್ಯಾಯಾಲಯಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಇದನ್ನು ಪ್ರಶ್ನಿಸಿ ಪ್ರತಿಭಟನಾ ಅರ್ಜಿ ಸಲ್ಲಿಸುವುದಾಗಿ ಸ್ನೇಹಮಯಿ ಕೃಷ್ಣ ವಿಚಾರಣೆ ನ್ಯಾಯಾಲಯದಲ್ಲಿ ವಾದಿಸಿದ್ದರು.

## ಮಿನಿ ನ್ಯೂಸ್

### ಸಮಸ್ಯೆಗೆ ಆತ್ಮಹತ್ಯೆ ಪರಿಹಾರವಲ್ಲ

• ಉದಯವಾಹಿನಿ, ಚನ್ನಪಟ್ಟಣ

ಸಮಸ್ಯೆ ಬಂದಾಗ ಮನಸ್ಸು ಚಂಚಲವಾಗುವುದು ಸಹಜ. ಆದರೆ, ಎಲ್ಲಾ ಸಮಸ್ಯೆಗಳಿಗೂ ಆತ್ಮಹತ್ಯೆ ಒಂದೇ ಪರಿಹಾರವಲ್ಲ. ದೃಢ ಮನೋಭಾವ ಹಾಗೂ ಸದೃಢ ವ್ಯಕ್ತಿತ್ವ ಬೆಳೆಸಿಕೊಂಡಲ್ಲಿ ಪ್ರತಿಯೊಬ್ಬರು ನೆಮ್ಮದಿಯುತ ಜೀವನ ನಡೆಸಬಹುದು ಎಂದು ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆ ಮನೋವೈದ್ಯಕೀಯ ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕ ಡಾ.ಅನಿಶ್ ವಿ.ಚೆರಿಯನ್ ಅಭಿಪ್ರಾಯಪಟ್ಟರು. ತಾಲ್ಲೂಕಿನ ನಾಗವಾರ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಹಾಗೂ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ಸಹಯೋಗದೊಂದಿಗೆ ನಿಮ್ಹಾನ್ಸ್ ಸುರಕ್ಷಾ ಯೋಜನೆ ವತಿಯಿಂದ ಮಂಗಳವಾರ ನಡೆದ ಆತ್ಮಹತ್ಯೆ ತಡೆಗಟ್ಟುವ ವಿಷಯ ಕುರಿತು ಮಾನಸಿಕ ಆರೋಗ್ಯ ಅರಿವು ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು. ಆತ್ಮಹತ್ಯೆ ಘೋರ ಅಪರಾಧ. ಎಂತಹುದೇ ಸಂದರ್ಭ ಬಂದರೂ ಯಾರೂ ಆತ್ಮಹತ್ಯೆ ಮಾಡಿಕೊಳ್ಳಬಾರದು. ಆತ್ಮಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕವಾಗಿ ಜಾಗೃತಿ ಮೂಡಿಸುವ ಸಲುವಾಗಿ ನಿಮ್ಹಾನ್ಸ್ ಸುರಕ್ಷಾ ಯೋಜನೆಯಡಿ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದೆ. ಇದಕ್ಕೆ ಸಮಾಜದ ಸರ್ವರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

### ನಾಲೆಯಲ್ಲಿ ಸತ್ತ ಕೋಳಿಗಳು: ಆತಂಕ

• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಪಿ. ಹೊಸಹಳ್ಳಿ ಮಾರ್ಗವಾಗಿ ಹರಿಯುವ ದೇವರಾಯ ನಾಲೆಯಲ್ಲಿ ಸತ್ತ ಕೋಳಿಗಳು ತೇಲಿ ಬಂದಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಹಕ್ಕಿ ಜ್ವರ ಪ್ರಕರಣಗಳು ಬೆಳಕಿಗೆ ಬರುತ್ತಿರುವ ಸಂದರ್ಭದಲ್ಲಿ ಫಾರಂ ಕೋಳಿಗಳ ಕಳೇಬರಗಳು ನಾಲೆಯಲ್ಲಿ ತೇಲಿ ಬಂದುದು ಜನರಲ್ಲಿ ಭೀತಿ ಹುಟ್ಟಿಸಿದೆ. ದೇವರಾಯ ನಾಲೆಯ ನೀರನ್ನು ಕೃಷಿಗೆ ಮಾತ್ರವಲ್ಲದೆ ಕುಡಿಯುವ ಉದ್ದೇಶಕ್ಕೂ ಬಳಸಲಾಗುತ್ತಿದೆ. ಸತ್ತ ಕೋಳಿಗಳನ್ನು ನಾಲೆಗೆ ಯಾರು ಎಸೆದಿದ್ದಾರೆ ಎಂಬುದು ಖಚಿತವಾಗಿಲ್ಲ. 'ದೇವರಾಯ ನಾಲೆಯಲ್ಲಿ ಸುಮಾರು 30ಕ್ಕೂ ಹೆಚ್ಚು ಕೋಳಿಗಳ ಕಳೇಬರ ತೇಲಿಕೊಂಡು ಬಂದಿವೆ. ಆಸುಪಾಸಿನ ಕೋಳಿ ಫಾರಂಗಳಲ್ಲಿ ಪರಿಶೀಲನೆ ನಡೆಸಲಾಗಿದೆ. ಸ್ಥಳೀಯರು ಯಾರೂ ಕೋಳಿಗಳನ್ನು ಹಾಕಿಲ್ಲ. ಬೇರೆ ಕಡೆಯಿಂದ ತಂದು ನಾಲೆಗೆ ಬಿಸಾಡಿರುವ ಸಾಧ್ಯತೆ ಇದೆ. ಆದರೆ ಈ ಕೋಳಿಗಳು ಹಕ್ಕಿ ಜ್ವರದಿಂದ ಮೃತಪಟ್ಟಿರುವ ಲಕ್ಷಣಗಳಿಲ್ಲ' ಎಂದು ಪಶು ವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ಡಾ.ಜಿ.ಜೆ. ಸುರೇಶ್ ತಿಳಿಸಿದ್ದಾರೆ


### ವೈಟ್‌ಬೋರ್ಡ್ ಟ್ಯಾಕ್ಸಿಗಳ ವಿರುದ್ಧ ರ‍್ಯಾಲಿ

• ಉದಯವಾಹಿನಿ, ಮೈಸೂರು

ವೈಟ್ ಬೋರ್ಡ್ ಬೈಕ್‌ಗಳನ್ನು ಅನಧಿಕೃತ ಟ್ಯಾಕ್ಸಿಯಾಗಿ ಉಪಯೋಗಿಸುತ್ತಿರುವುದನ್ನು ಖಂಡಿಸಿ ನಮ್ಮ ಕರ್ನಾಟಕ ಸೇನೆ ವತಿಯಿಂದ ಆಟೋ ರ‍್ಯಾಲಿ ನಡೆಸಲಾಯಿತು.

ನಗರದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಸಮಾವೇಶಗೊಂಡ ಆಟೋ ಚಾಲಕರು ಜಿಲ್ಲಾಧಿಕಾರಿ ಕಚೇರಿವರೆಗೆ ರ‍್ಯಾಲಿ ನಡೆಸಿ ಬೈಕ್‌ಗಳನ್ನು ಟ್ಯಾಕ್ಸಿಯಾಗಿ ಬಳಸುತ್ತಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು. ವೈಟ್ ಬೋರ್ಡ್ ಎಲೆಕ್ಟ್ರಿಕ್ ಬೈಕ್ ಹಾಗೂ ಕಾರುಗಳನ್ನು ಟ್ಯಾಕ್ಸಿಯಾಗಿ ಬಳಸಲಾಗುತ್ತಿದೆ ಇದರಿಂದ ಆಟೋ ಚಾಲಕರಿಗೆ ತೊಂದರೆಯಾಗುತ್ತಿದೆ ಎಂದು ಕಿಡಿ ಕಾರಿದರು. ಆಟೋರಿಕ್ಷಾ ಚಲಾಯಿಸಲು ಅಥವಾ ಕೊಂಡುಕೊಳ್ಳಲು ಚಾಲನಾ ಪರವಾನಗಿ ಜೊತೆ ಬ್ಯಾಡ್ಜ್ ಖಡ್ಡಾಯವಾಗಬೇಕು. ಬೇರೆ ರಾಜ್ಯ ಹಾಗೂ ಬೇರೆ ಜಿಲ್ಲೆಯ ಪರ್ಮಿಟ್ ಹೊಂದಿರುವ ವಾಹನಗಳನ್ನು ನಿಲ್ಲಿಸಬೇಕು. ಮೈಸೂರು ನಗರದಲ್ಲಿ ಈಗಾಗಲೇ ವಾಹನಗಳ ಸಂಖ್ಯೆ ಮಿತಿ ಮೀರಿರುವುದರಿಂದ ಆಟೋಗಳಿಗೆ ಹೊಸದಾಗಿ ಪರ್ಮಿಟ್ ನೀಡಬಾರದು. ಮೈಸೂರು ನಗರ ಆಟೋರಿಕ್ಷಾ ಹಾಗೂ ಕ್ಯಾಬ್‌ಗಳ ಆನ್‌ಲೈನ್ ದರವನ್ನು ಸರ್ಕಾರದ ಮಾರ್ಗಸೂಚಿಯ ಅನ್ವಯ ಪರಿಷ್ಕೃತಗೊಳಿಸಬೇಕು. ಸರ್ಕಾರವೇ ಆಟೋ ಮತ್ತು ಕ್ಯಾಬ್ ಚಾಲಕರುಗಳಿಗಾಗಿ ಒಂದು ಪ್ರತ್ಯೇಕ ಆಪ್ ಅಭಿವೃದ್ಧಿಪಡಿಸಬೇಕು ಎಂದು ಆಗ್ರಹಿಸಿದರು.

### ವಿಜಯಲಕ್ಷ್ಮಿ ದೇಶಮನೆ ದೊಡ್ಡ ಸಾಧನೆ ಮಾಡಿದ್ದಾರೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮೈಸೂರು

ಇತ್ತೀಚಿನ ದಿನಗಳಲ್ಲಿ ನಾವುಗಳು ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುತ್ತಿದ್ದೇವೆ. ಡಾ.ವಿಜಯಲಕ್ಷ್ಮಿ ದೇಶಮನೆ ಅವರು ಅಂದಿನ ಕಾಲದಲ್ಲೇ ವೈದ್ಯಕೀಯ ಶಿಕ್ಷಣ ಪಡೆದು ಕಿದ್ವಾಯಿ ಸಂಸ್ಥೆಯಲ್ಲಿ ಕೆಲಸ ಮಾಡಿರುವುದು ದೊಡ್ಡ ಸಾಧನೆ. ನಾವೆಲ್ಲ ಯೋಚಿಸಬೇಕಾಗಿರುವುದು ಮನಸ್ಸಿದ್ದರೆ ಏನನ್ನಾದರೂ ಸಾಧಿಸಬಹುದು ಎಂಬುದಕ್ಕೆ ಇವರೇ ಸಾಕ್ಷಿ. ಅವರಿಗೆ ನೀಡಿರುವ ಪದ್ಮಶ್ರೀಗಿಂತ ಇನ್ನು ಉನ್ನತ ಮಟ್ಟದ ಪ್ರಶಸ್ತಿ ದೊರೆಯಬೇಕು ಎಂದು ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ ಲೋಕನಾಥ್ ಆಶಿಸಿದರು.

ನಗರದ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಸ್ವಸ್ಥವೃತ್ತ ಮತ್ತು ಯೋಗ ವಿಭಾಗ, ಸರ್ಕಾರಿ ಆಯುರ್ವೇದ ಸಂಶೋಧನ ಕೇಂದ್ರ, ಮೈಸೂರು ವಿಶ್ವವಿದ್ಯಾನಿಲಯ ಸಸ್ಯಶಾಸ್ತ್ರ ವಿಭಾಗದ ಸಂಯುಕ್ತಾಶ್ರಯದಲ್ಲಿ ನಡೆದ ಕ್ಷಯ ಮುಕ್ತ ಭಾರತ 2025 ಸಂವಾದ ರಾಷ್ಟ್ರೀಯ ಕಾರ್ಯಾಗಾರ ಹಾಗೂ ಆಯುಷ್ ಫಾರ್ ಯೂತ್ ನಿಯತಕಾಲಿಕೆ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ರೀತಿಯ ಕಾರ್ಯಕ್ರಮಗಳು ನಮ್ಮ ವಿದ್ಯಾರ್ಥಿಗಳೊಂದಿಗೆ ಹೆಚ್ಚು ಹೆಚ್ಚು ಆಯೋಜನೆಯಾಗಬೇಕು. ಏಕೆಂದರೆ ಕೋವಿಡ್ ಬರುವುದಕ್ಕಿಂತ ಮುಂಚಿತವಾಗಿ ವೈರಸ್‌ಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿದೆ ಇರಲಿಲ್ಲ. ಅದು ಎಷ್ಟು ಆಕ್ರಮಣಕಾರಿ ಎಂಬುದರ ಬಗ್ಗೆಯೂ ಗೊತ್ತಿರಲಿಲ್ಲ. ಆದರೆ ಪ್ರಸ್ತುತ ಹೆಚ್ಚಿನ ಜಾಗೃತಿ ಎಲ್ಲರಲ್ಲೂ ಮೂಡಿದೆ ಎಂದು ತಿಳಿಸಿದರು.

ಅಂತರಾಳದಿಂದ..
EDITORIAL

# ಉರಿವ ಗಾಯಕ್ಕೆ ಉಪ್ಪು ಸವರಿದ ಮೊಯ್ಲಿ

ರಾಜ್ಯ ಕಾಂಗ್ರೆಸ್‌ನ ಉರಿಯುವ ಗಾಯಕ್ಕೆ ಉಪ್ಪು ಸವರಿದ್ದಾರೆ ಮಾಜಿ ಮುಖ್ಯಮಂತ್ರಿ, ಹಿರಿಯ ಕಾಂಗ್ರೆಸ್ ನಾಯಕ ವೀರಪ್ಪ ಮೊಯ್ಲಿಯವರು. ಸದ್ಯಕ್ಕೆ ಕಾಂಗ್ರೆಸ್‌ನಲ್ಲಿ ನಿರುದ್ಯೋಗಿಯಾಗಿರುವ ಈ ಹಿರಿಯ ನಾಯಕ, ತನ್ನ ಅಸ್ತಿತ್ವವನ್ನು ಪ್ರದರ್ಶಿಸುವ ಒಂದೇ ಉದ್ದೇಶದಿಂದ, ಕದಡಿರುವ ರಾಜ್ಯ ಕಾಂಗ್ರೆಸ್‌ನ ನೀರಿನಲ್ಲಿ ಮೀನು ಹಿಡಿಯಲು ಹೊರಟಿದ್ದಾರೆ. ಈಗಾಗಲೇ ತಣ್ಣಗಾಗಿದ್ದ ಪೂರ್ಣಾವಧಿ ಮುಖ್ಯಮಂತ್ರಿ ಚರ್ಚೆಯನ್ನು ಮತ್ತೆ ಮುನ್ನೆಲೆಗೆ ತಂದಿದ್ದಾರೆ. ಉಡುಪಿ ಜಿಲ್ಲೆಯ ಕಾರ್ಕಳದಲ್ಲಿ ನಡೆದ ಸಮಾವೇಶವೊಂದರಲ್ಲಿ ಮಾತನಾಡುತ್ತಾ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಗುವುದು ಈಗಾಗಲೇ ತೀರ್ಮಾನವಾಗಿರುವ ವಿಷಯ. ಅವರು ರಾಜ್ಯದ ಮುಖ್ಯಮಂತ್ರಿಯಾಗುವುದು ಯಾರಿಂದಲೂ ತಡೆಯಲು ಸಾಧ್ಯವಿಲ್ಲ ಎಂದು ಡಿಕೆಶಿ ಬಣವನ್ನು ಅವರು ಹುರಿದುಂಬಿಸಿದ್ದಾರೆ. ಆ ಮೂಲಕ, ಸರಕಾರ ರಚನೆಯಾಗುವ ಸಂದರ್ಭದಲ್ಲೇ ಮುಖ್ಯಮಂತ್ರಿ ಹುದ್ದೆ ಹಂಚಿಕೆಯ ಬಗ್ಗೆ ನಿರ್ಧಾರವಾಗಿದೆ ಎನ್ನುವ ವದಂತಿಗೆ ಜೀವ ತುಂಬಿದ್ದಾರೆ. ಜೊತೆಗೆ ಕಾಂಗ್ರೆಸ್‌ನಲ್ಲಿ ನಡೆಯುವ ಸಿಎಂ ಚರ್ಚೆಗೆ ನೀವು ಯಾವತ್ತೂ ಪ್ರತಿಕ್ರಿಯೆ ನೀಡಬೇಡಿ.

**ನಿಮ್ಮ ವಿರುದ್ಧ ಹೇಳಿಕೆಗಳು ಬರುತ್ತೆ ಹೋಗುತ್ತೆ. ಅದರ ಬಗ್ಗೆ ತಲೆಕೆಡಿಸಿಕೊಳ್ಳಬೇಡಿ ಎಂದು ಡಿಕೆಶಿಯವರಿಗೆ ಕಿವಿಮಾತನ್ನೂ ನುಡಿದಿದ್ದಾರೆ. ಸದ್ಯಕ್ಕೆ ಮುಖ್ಯಮಂತ್ರಿ ಹುದ್ದೆಯ ಚರ್ಚೆ ರಾಜ್ಯಕ್ಕಷ್ಟೇ ಸೀಮಿತವಾಗಿತ್ತು. ದಿಲ್ಲಿಯಲ್ಲಿ ಕುಳಿತ ನಾಯಕರಾರೂ ಈ ಬಗ್ಗೆ ಅಧಿಕೃತ ಹೇಳಿಕೆಗಳನ್ನು ನೀಡಿರಲಿಲ್ಲ. ಕಾಂಗ್ರೆಸ್‌ನೊಳಗೆ ನಡೆಯುತ್ತಿರುವ ಶೀತಲ ಸಮರದ ಹಿನ್ನೆಲೆಯಲ್ಲಿ ದಿಲ್ಲಿಯಿಂದ ಮಧ್ಯಸ್ಥಿಕೆಗೆ ಬಂದ ವರಿಷ್ಠರೂ, ಮುಖ್ಯಮಂತ್ರಿ ಹುದ್ದೆಯ ಹಂಚಿಕೆಯ ಬಗ್ಗೆ ಯಾವುದೇ ಹೇಳಿಕೆಯನ್ನು ನೀಡಿರಲಿಲ್ಲ ಮಾತ್ರವಲ್ಲ, 'ಮುಖ್ಯಮಂತ್ರಿ ಹುದ್ದೆ ಖಾಲಿಯಿಲ್ಲ'' ಎಂದು ಎಲ್ಲರೂ ಸ್ಪಷ್ಟಪಡಿಸಿದ್ದರು.**

ಸಾರ್ವಜನಿಕವಾಗಿ ಹೇಳಿಕೆ ನೀಡುವವರಿಗೆ ಮಲ್ಲಿಕಾರ್ಜುನ ಖರ್ಗೆಯವರು ಕಟುವಾದ ಎಚ್ಚರಿಕೆಯನ್ನು ಕೂಡ ನೀಡಿದ್ದರು. ಮುಖ್ಯಮಂತ್ರಿ ಹುದ್ದೆಯ ಬಗ್ಗೆ ಡಿಕೆಶಿ ವರಿಷ್ಠರ ಬಳಿ ಚರ್ಚಿಸಿರಬಹುದಾದರೂ ಸಾರ್ವಜನಿಕವಾಗಿ ಯಾವತ್ತೂ ಸಿದ್ದರಾಮಯ್ಯರ ವಿರುದ್ಧವಾಗಲಿ, ಮುಖ್ಯಮಂತ್ರಿ ಆಗುತ್ತೇನೆ ಎನ್ನುವ ಬಗ್ಗೆಯಾಗಲಿ ಹೇಳಿಕೆಯನ್ನು ನೀಡಿರಲಿಲ್ಲ. ಮುಖ್ಯಮಂತ್ರಿ ಹುದ್ದೆಯ ಬಗ್ಗೆ ಸಾರ್ವಜನಿಕ ಹೇಳಿಕೆ ನೀಡಬೇಡಿ ಎಂದು ವರಿಷ್ಠರು ಎಚ್ಚರಿಸಿರುವಾಗಲೇ ವೀರಪ್ಪ ಮೊಯ್ಲಿ ಈ ಬಗ್ಗೆ ಸಾರ್ವಜನಿಕ ವೇದಿಕೆಯಲ್ಲಿ ಪ್ರಸ್ತಾಪಿಸಿದ್ದು ಎಷ್ಟು ಸರಿ? ಎನ್ನುವ ಪ್ರಶ್ನೆಯನ್ನು ರಾಜ್ಯದ ಕಾಂಗ್ರೆಸ್ ಮುಖಂಡರು ಕೇಳುತ್ತಿದ್ದಾರೆ. 'ರಾಜ್ಯದಲ್ಲಿ ಮುಖ್ಯಮಂತ್ರಿ ಯಾರಾಗಬೇಕು ಹೇಗಾಗಬೇಕು ' ಎನ್ನುವ ಮಾತುಗಳನ್ನು ಸಾರ್ವಜನಿಕವಾಗಿ ಆಡಲು ವೀರಪ್ಪ ಮೊಯ್ಲಿ ಎಷ್ಟರಮಟ್ಟಿಗೆ ನೈತಿಕ ಅರ್ಹತೆಯನ್ನು ಪಡೆದಿದ್ದಾರೆ ಎಂದು ಅವರು ಒಳಗೊಳಗೆ ಬುಸುಗುಟ್ಟುವಂತಾಗಿದೆ. ಯಾಕೆಂದರೆ, 2019ರ ಲೋಕಸಭಾ ಚುನಾವಣೆಯಲ್ಲಿ ಸೋತ ಬಳಿಕ, ರಾಜ್ಯ ರಾಜಕೀಯದಿಂದ ಮೊಯ್ಲಿ ಸಂಪೂರ್ಣ ದೂರ ಸರಿದಿದ್ದರು, ರಾಜ್ಯ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಪಕ್ಷವನ್ನು ತಳಮಟ್ಟದಲ್ಲಿ ಪುನರ್ ಸಂಘಟಿಸುವ ವಿಷಯದಲ್ಲಿ ಅವರ ಪಾತ್ರ ಸೊನ್ನೆ ಕರಾವಳಿಯನ್ನು ಹಂತ ಹಂತವಾಗಿ ಬಿಜೆಪಿಗೆ ಮತ್ತು ಸಂಘಪರಿವಾರಕ್ಕೆ ಒಪ್ಪಿಸುವಲ್ಲಿ ವೀರಪ್ಪಮೊಯ್ಲಿಯವರ ಪಾತ್ರ ಬಹುದೊಡ್ಡದಿದೆ. ಕಾಂಗ್ರೆಸ್‌ನಲ್ಲಿ ಯುವ ನಾಯಕರು ಕರಾವಳಿಯಲ್ಲಿ ಬೆಳೆಯದಂತೆ ಅವರನ್ನು ಪ್ರಾಥಮಿಕವಾಗಿ ಚಿವುಟಿ ಹಾಕಿದ ಆರೋಪಗಳು ಅವರ ಮೇಲಿವೆ. ಅಷ್ಟೇ ಅಲ್ಲ ಕರಾವಳಿ ಕಾಂಗ್ರೆಸ್‌ಗೆ ಎಳ್ಳಷ್ಟು ಕೊಡುಗೆಯನ್ನು ನೀಡದ ತನ್ನ ಪುತ್ರನನ್ನೇ ಅಭ್ಯರ್ಥಿಯಾಗಿಸಲು ಹಟ ಹಿಡಿದು ಅಳಿದುಳಿದ ಕಾಂಗ್ರೆಸನ್ನು ಮುಗಿಸಿದರು. ಅವರದೇ ಊರಾಗಿರುವ ಕಾರ್ಕಳದಲ್ಲೇ ಇಂದು ಕಾಂಗ್ರೆಸ್ ತಲೆಎತ್ತಿ ನಿಲ್ಲಲು ಹೆಣಗಾಡುತ್ತಿದೆ. ಕರಾವಳಿಯಲ್ಲಿ ಸಂಘಪರಿವಾರ ನಡೆಸುತ್ತಿರುವ ದಾಂಧಲೆಗಳು ಸೇರಿದಂತೆ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ನಡೆಸಿದ ಅವಾಂತರಗಳ ವಿರುದ್ಧ ಮಾತನಾಡಲು ಇವರಲ್ಲಿ ದ್ದನಿಯಿರಲಿಲ್ಲ. ಇತ್ತೀಚೆಗೆ ಬಿಜೆಪಿಯು ವಕ್ಫ್ ಹೆಸರಿನಲ್ಲಿ ಮುಡಾ ಹಗರಣದ ಹೆಸರಿನಲ್ಲಿ ಕಾಂಗ್ರೆಸ್ ವಿರುದ್ಧ ಬೀದಿ ಆಂದೋಲನ ಶುರು ಹಚ್ಚಿದಾಗಲೂ ವೀರಪ್ಪ ಮೊಯ್ಲಿಯವರ ಪತ್ತೆಯಿರಲಿಲ್ಲ. ಇದೀಗ ಮುಖ್ಯಮಂತ್ರಿ ಹುದ್ದೆಯ ಹಂಚಿಕೆಯ ವಿಷಯದಲ್ಲಿ ಮಾತ್ರ ಅವರು ಅತ್ಯಾಸಕ್ತಿಯನ್ನು ತೋರಿಸುತ್ತಿರುವುದು ಮತ್ತು ಒಂದು ಬಣಕ್ಕೆ ಕುಮ್ಮಕ್ಕು ನೀಡಲು ಮುಂದಾಗಿರುವುದು ಅವರ ಹಿರಿತನದ ಘನತೆಗೆ ಕುಂದು ತಂದಿದೆ.ರಾಷ್ಟ್ರಮಟ್ಟದಲ್ಲಿ ಕೇಂದ್ರ ಸರಕಾರ ಒಂದರ ಹಿಂದೆ ಒಂದರಂತೆ ಜನವಿರೋಧಿ ಕಾನೂನುಗಳನ್ನು ಜಾರಿಗೊಳಿಸುತ್ತಿದೆ. ರಾಜ್ಯದ ಮೇಲೆ ಹಿಂದಿ ಹೇರಿಕೆಗೆ ಭಾರೀ ಪ್ರಯತ್ನಗಳು ನಡೆಯುತ್ತಿವೆ. ಒಂದು ದೇಶ–ಒಂದು ಚುನಾವಣೆ, ಕ್ಷೇತ್ರ ಪುನರ್ ವಿಂಗಡಣೆ ಮೊದಲಾದ ಕ್ರಮಗಳ ಮೂಲಕ ರಾಜ್ಯದ ಅಧಿಕಾರವನ್ನು ಹಂತಹಂತವಾಗಿ ಕಿತ್ತುಕೊಳ್ಳಲು ಕೇಂದ್ರ ಸರಕಾರ ಪ್ರಯತ್ನಿಸುತ್ತಿದೆ. ಇದರ ವಿರುದ್ಧ ಒಂದು ಪತ್ರಿಕಾಗೋಷ್ಠಿ ನಡೆಸಿ ಅದನ್ನು ವಿರೋಧಿಸುವ ಧೈರ್ಯವನ್ನು ವೀರಪ್ಪಮೊಯ್ಲಿ ಈವರೆಗೆ ಪ್ರದರ್ಶಿಸಿಲ್ಲ. ಇಂದು ಆರೆಸ್ಸೆಸ್ ಮತ್ತು ಸಂಘಪರಿವಾರದ ದಾಂಧಲೆಯ ವಿರುದ್ಧ ರಾಹುಲ್ ಗಾಂಧಿ ಏಕಾಂಗಿಯಾಗಿ ಹೋರಾಡುತ್ತಿದ್ದಾರೆ. ಅವರ ಧ್ವನಿಗೆ ಧ್ವನಿಯಾಗುವ ಪ್ರಯತ್ನವನ್ನು ವೀರಪ್ಪಮೊಯ್ಲಿಯಂತಹ ಹಿರಿಯರು ಪ್ರಾಮಾಣಿಕವಾಗಿ ಮಾಡಿದ್ದಿದ್ದರೆ ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್‌ಗೆ ಇಂತಹ ಸ್ಥಿತಿ ಬರುತ್ತಿರಲಿಲ್ಲವೇನೋ. ಭೂಸುಧಾರಣೆಯ ಕಾಲದಲ್ಲಿ ಒಕ್ಕಲು ಮಸೂದೆಯ ಪ್ರಯೋಜನವನ್ನು ಜನರಿಗೆ ತಲುಪಿಸುವಲ್ಲಿ ವೀರಪ್ಪ ಮೊಯ್ಲಿಯವರ ಪಾತ್ರವನ್ನು ನಿರಾಕರಿಸುವಂತಿಲ್ಲ. ಮುಖ್ಯಮಂತ್ರಿಯಾಗಿಯೂ ಕೆಲಕಾಲ ಒಳ್ಳೆಯ ಕೆಲಸವನ್ನು ಮಾಡಿದ್ದಾರೆ. ಆದರೆ ತನಗೆ ಸಿಕ್ಕಿದ ಅಧಿಕಾರವನ್ನು ಬಳಸಿಕೊಂಡು ತಳಮಟ್ಟದಲ್ಲಿ ಕಾಂಗ್ರೆಸ್ ಕಟ್ಟುವ ಕೆಲಸದಲ್ಲಿ ಮಾತ್ರ ಇವರ ಕೊಡುಗೆ ಏನೇನೂ ಇಲ್ಲ. ಮಂಗಳೂರು ಲೋಕಸಭೆಯಲ್ಲಿ ಸರಣಿ ಸೋಲಿನ ಬಳಿಕ ಚಿಕ್ಕಬಳ್ಳಾಪುರದಲ್ಲಿ ರಾಜಕೀಯ ಪುನರ್‌ಜನ್ಮ ಪಡೆದ ಮೊಯ್ಲಿ ಇದೀಗ ಆ ಕ್ಷೇತ್ರದಿಂದಲೂ ದೂರವಾಗಿದ್ದಾರೆ.ಕಳೆದ ವಿಧಾನಸಭೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವಿನ ಹಿಂದೆ ಸಿದ್ದರಾಮಯ್ಯ ಅವರ ಪಾತ್ರ ದೊಡ್ಡದಿದೆ. ಇದೇ ಸಂದರ್ಭದಲ್ಲಿ ಡಿಕೆಶಿ ಕೂಡ ಸಿದ್ದರಾಮಯ್ಯ ಜೊತೆಗೆ ಬಲವಾಗಿ ಕೈ ಜೋಡಿಸಿದ್ದರು. ವೇದಿಕೆಯಲ್ಲಿ ಇವರು ಪ್ರದರ್ಶಿಸಿದ ಒಗ್ಗಟ್ಟು ಅಂತಿಮವಾಗಿ ಕಾಂಗ್ರೆಸ್‌ಗೆ ಭರ್ಜರಿ ಜಯವನ್ನು ತಂದುಕೊಟ್ಟಿತು. ಇದಾದನಂತರ ಅದೇನು ಒಪ್ಪಂದ ನಡೆಯಿತೋ, ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ, ಡಿ.ಕೆ. ಶಿವಕುಮಾರ್ ಉಪಮುಖ್ಯಮಂತ್ರಿಯಾದರು. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು ಎಲ್ಲೂ ವಿಫಲರಾಗಲಿಲ್ಲ. ಅವರ ಮುತ್ಸದ್ದಿತನದ ಬಲದಿಂದಲೇ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಿವೆ.

# ಮನದುಂಬಿದ ಪ್ರೇರಣಳ ಅಚ್ಚುಕಟ್ಟಾದ ನರ್ತನ

## ಮಹಿಷಾಸುರರಿಗೆ ಸಂಬಂಧಿಸಿದ ಮಹತ್ವದ ಚರ್ಚೆ



ಕಲಾ ಸಾಹಿತ್ಯ

**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು



• ಉದಯವಾಹಿನಿ, ವಿಶೇಷ

ನೃತ್ಯಕ್ಕೆ ಹೇಳಿ ಮಾಡಿಸಿದ ತೆಳ್ಳನೆಯ ಮೈಕಟ್ಟು, ಭಾವಸ್ಫುರಣ ಮೊಗ, ಲವಲವಿಕೆಯ ಆಂಗಿಕಾಭಿನಯ ಉದಯೋನ್ಮುಖ ನೃತ್ಯಕಲಾವಿದೆ ಪ್ರೇರಣಾ ಬಾಲಾಜಿಯ ಧನಾತ್ಮಕ ಅಂಶಗಳು. ಹೆಸರಾಂತ 'ನೃತ್ಯೋದಯ ಅಕಾಡೆಮಿಯ ಪ್ರಾಮಾಣಿಕ- ಉತ್ತಮ ನೃತ್ಯಗುರು ದಿವ್ಯಶ್ರೀ ವಟಿಯವರ ನೆಚ್ಚಿನ ಶಿಷ್ಯೆ ಗುರುಗಳ ಮಾರ್ಗದರ್ಶನದಂತೆ ಬಹು ಸುಂದರವಾಗಿ, ಅಚ್ಚುಕಟ್ಟಾಗಿ ನರ್ತಿಸಿ ಪ್ರೇಕ್ಷಕರ ಮೆಚ್ಚುಗೆ ಗಳಿಸಿದಳು. ಈ ಭರವಸೆಯ ಕಲಾವಿದೆ ಇತ್ತೀಚಿಗೆ ಯಲಹರ್ಂಕದ ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಕಲಾರಸಿಕರ ಸಮ್ಮುಖದಲ್ಲಿ ವಿಧ್ಯುಕ್ತವಾಗಿ ತನ್ನ ರಂಗಪ್ರವೇಶವನ್ನು ನೆರವೇರಿಸಿಕೊಂಡಳು. 'ಮಾರ್ಗಂ' ಪದ್ಧತಿಯ ರೀತ್ಯ ನೃತ್ಯಕೃತಿಗಳನ್ನು ಪ್ರಸ್ತುತಪಡಿಸಿದ ಪ್ರೇರಣ, ಮೊದಲಿನಿಂದ ಕಡೆಯವರೆಗೂ ಗೆಲುವಿನಿಂದ, ದೈವೀಕ ಆಯಾಮದ ಕೃತಿಗಳನ್ನು ಭಕ್ತಿಪೂರ್ವಕವಾಗಿ ಅರ್ಪಿಸಿದಳು.

ಶುಭಾರಂಭದಲ್ಲಿ ಪ್ರೇರಣಾ ಅತ್ಯಂತ ವಿನಯದಿಂದ ಗುರು–ಹಿರಿಯರು, ದೇವಾನುದೇವತೆಗಳು, ಸಮಸ್ತರಿಗೂ ಭಕ್ತಿ ಪೂರ್ವಕವಾಗಿ, ಮೆರುಗಿನ ನೃತ್ತಗಳ ಮೂಲಕ ವಿನೀತ ಪ್ರಾರ್ಥನೆಯನ್ನು 'ಪುಷ್ಪಾಂಜಲಿ' ಯಾಗಿ ಸಲ್ಲಿಸಿದಳು.

ಪ್ರಥಮ ಪೂಜಿತ ಶ್ರೀವಿಘ್ನರಾಜನನ್ನು ಭಜಿಸಿ 'ಪೂಜ್ಯಾಯ ರಾಘವೇಂದ್ರಾಯ' ಎಂದು ರಾಯರಿಗೆ ನಮಿಸಿ ತನ್ನ ಪ್ರಸ್ತುತಿಯನ್ನು ಆರಂಭಿಸಿದಳು. ಎಲ್ಲಾಕ್ಕಿಂತ ವಿಶೇಷ ಎನಿಸಿದ್ದು ಅವಳ 'ಅಲರಿಪು'ವಿನ ವಿಭಿನ್ನ ಶೋಭೆ. ನೃತ್ತಗಳಲ್ಲಿ ಆಕರ್ಷಕ ಭಂಗಿಗಳನ್ನು ತೋರುತ್ತ, ಮುದವಾದ ಆಂಗಿಕಾಭಿನಯದಲ್ಲಿ ಮಿನುಗಿದ ಸೊಗಸು ಗಮನಾರ್ಹವಾಗಿತ್ತು. ಗುರು ದಿವ್ಯರ ಲಯಾತ್ಮಕ ನಟುವಾಂಗದ ಸ್ಫುಟವಾದ ಜತಿಗಳ ವಾಚಿಕದ ಸ್ಫೂರ್ತಿ ಪಡೆದ ನರ್ತಕಿಯ ಲೀಲಾಜಾಲ ನೃತ್ಯ ಮನಸೆಳೆಯಿತು. ಮುಂದೆ- ಪ್ರಸಿದ್ಧ ಸಂಗೀತ ನಿರ್ದೇಶಕರಾದ ಪದ್ಮಚರಣ ವಿರಚಿತ ಶೃಂಗಪುರಾಧೀಶ್ವರಿ ಶಾರದೆಯನ್ನು ಕಲಾವಿದೆ ತನ್ನ ಭಾವಪೂರ್ಣ ಅಭಿನಯದಿಂದ ಸಾಕ್ಷಾತ್ಕರಿಸಿದಳು. ಪ್ರಶಾಂತ್ ರುದ್ರಪಟ್ಟಣ ಅವರ ಹೃದಯಸ್ಪರ್ಶಿ ವೀಣಾನಿನಾದ, ನರಸಿಂಹಮೂರ್ತಿ ಅವರ ಮುರಳೀಗಾನದ ಅಲೆಯಲೆಯಲ್ಲಿ ಒಡಮೂಡಿದ, ದೀಪ್ತಿ ಶೀನಾಥರ ಭಾವಬಂಧುರದ ಗಾಯನದಲ್ಲಿ ಅರಳಿದ ಪ್ರೇರಣಳ ಸಾತ್ವಿಕ ನರ್ತನದ ಪ್ರಭೆ ನಯನ ಮನೋಹರವಾಗಿ ಸಕಲಕಲಾ ಶಾರದೆಯ ಸುಂದರ ಚಿತ್ರಣವನ್ನು ಅನಾವರಣಗೊಳಿಸಿತು. ದೇವಿಯ ಸೌಂದರ್ಯ ಮತ್ತು ಮಹಿಮೆಯ ದೈವೀಕತೆ ನರ್ತಕಿಯ ವಿವಿಧ ನಾಟ್ಯ ಭಂಗಿಗಳಿಂದ– ವರ್ಚಸ್ವೀ ಅಭಿನಯದಿಂದ ಕಮನೀಯವಾಗಿ ಅಭಿವ್ಯಕ್ತವಾಯಿತು. ಪ್ರಸ್ತುತಿಯ ಪ್ರಮುಖಭಾಗ– 'ವರ್ಣ'. ನೃತ್ತ ಮತ್ತು ಅಭಿನಯ ಎರಡರಲ್ಲೂ ಕಲಾವಿದರು ಸಮಾನ ಪರಿಣತಿಯನ್ನು ಹೊಂದಿರಬೇಕಾಗುತ್ತದೆ. ಜೊತೆಗೆ ತಾಳ ಮತ್ತು ಲಯಜ್ಞಾನ ಕೂಡ. ಅಗಾಧ ನೆನಪಿನಶಕ್ತಿ ಅತ್ಯಗತ್ಯ. ಈ ನಿಟ್ಟಿನಲ್ಲಿ ಪ್ರೇರಣ ಸಶಕ್ತಳಾಗಿದ್ದಳು. 'ಬಾ ಬಾರಯ್ಯ ರಘುವಂಶ ಚಂದ್ರನೇ' –ರಾಮಾಯಣದ ಕಥಾಸಾರವನ್ನು ಒಳಗೊಂಡ ಆಪ್ಯಾಯಮಾನವಾದ ಕಣ್ಮನಗಳಿಗೆ ತಂಪೆರೆದ ಕನ್ನಡದ 'ಪದವರ್ಣ'– (ರಾಮಪ್ರಿಯ ರಾಗ ಮತ್ತು ಆದಿತಾಳ) ವನ್ನು ಸಾತ್ವಿಕಾಭಿನಯದಿಂದ ಅಚ್ಚುಕಟ್ಟಾಗಿ ಒಪ್ಪಿಸಿದಳು ಪ್ರೇರಣ. ನಡುನಡುವೆ ಶೋಭಿಸುತ್ತಿದ್ದ ನೃತ್ತಾವಳಿ ಮನಮೋಹಕವಾಗಿದ್ದರೆ, ಗುರು ದಿವ್ಯ ಅವರ ಸ್ಪಷ್ಟ– ನಿಖರ ನಟುವಾಂಗದ ಬನಿ ಸುವ್ಯಕ್ತವಾಗಿತ್ತು. ದಶರಥನ ಪುತ್ರಕಾಮೇಷ್ಟಿ ಯಾಗ, ಪಾಯಸ ಪ್ರಾಪ್ತಿ, ವಿಶ್ವಾಮಿತ್ರನೊಡನೆ ರಾಮ–ಲಕ್ಷ್ಮಣರು ಯಾಗರಕ್ಷಣೆಗೆ ತೆರಳುವುದು ಮತ್ತು ಸೀತಾಸ್ವಯಂವರ, ಶೂರ್ಪನಖಿ ಪ್ರಸಂಗ, ಮಾಯಾಜಿಂಕೆ– ಜಟಾಯು ಪ್ರಕರಣ, ಸೀತಾಪಹರಣ –ಅಶೋಕವನದಲ್ಲಿ ಸೀತೆಯ ದರ್ಶನ ಮುಂತಾದ ಪ್ರಮುಖ ಘಟನೆಗಳ ಸಂಚಾರಿ ಕಥಾನಕ ನಾಟಕೀಯ ಆಯಾಮದಲ್ಲಿ ಸಂಕ್ಷಿಪ್ತವಾಗಿ ಅಷ್ಟೇ ಹದವಾಗಿ ಮೂಡಿಬಂತು. ಕಲಾವಿದೆಯ ನೃತ್ಯದ ಪರಿಣಾಮವನ್ನು ಹೆಚ್ಚಿಸಿದ ವಯೊಲಿನ್ ( ಮತ್ತೂರು ಶ್ರೀನಿಧಿ), ಮೃದಂಗದ ಸಬಲ ಸಾತತ್ಯ ( ಜಿ.ಎಸ್. ನಾಗರಾಜ್) ಮತ್ತು ಕಾರ್ತೀಕ್ ದಾತಾರರ ರಿದಂ ಪ್ಯಾಡ್ ನ ವಿವಿಧ ಪರಿಣಾಮಕಾರಿ ಧ್ವನಿಗಳು ಔನ್ನತ್ಯಕ್ಕೇರಿಸಿದ್ದವು.


**ಮುಂದಿನ ಕಂಡೆ ನಾ ನಟರಾಜ ಕರುಣಾಕರ ಶಿವನ' ಎಂಬ ಸ್ತುತಿಯ ನಟೇಶ ಕೌತ್ವಂ –ಅತ್ಯಂತ ಸಂವೇದನಾಪೂರ್ಣವಾಗಿತ್ತು. ನಾಟ್ಯಾಧಿಪತಿ ನಟರಾಜನ ವಿವಿಧ ಯೋಗದ ಭಂಗಿಗಳು–ಸುಂದರ ಆಂಗಿಕಾಭಿನಯ ಚೈತನ್ಯಪೂರ್ಣವಾಗಿತ್ತು. ನಟುವಾಂಗದ ಝೇಂಕಾರ ನೃತ್ಯಕ್ಕೆ ಪೂರಕವಾಗಿತ್ತು. ಅನಾಯಾಸವಾಗಿ ನರ್ತಿಸಿದ ಪ್ರೇರಣಳ ಮಂಡಿ ಅಡವು, ಆಕಾಶಚಾರಿಗಳಿಂದ ಕೂಡಿದ್ದ ಕವಿತ್ವಂ ರಮಣೀಯ ನೋಟ ನೀಡಿತ್ತು.**


ಅನಂತರ– ಪುರಂದರದಾಸರು ರಚಿಸಿದ ಪೂರ್ವೀಕಲ್ಯಾಣಿ ರಾಗ– ಆದಿತಾಳದ 'ಹನುಮಂತ ದೇವ ನಮೋ' ವೀರಾಂಜನೇಯನ ಬಲ–ಸಾಮರ್ಥ್ಯಗಳಿಗೆ ಕನ್ನಡಿ ಹಿಡಿದ ಸುಮನೋಹರ ಕೃತಿಯಲ್ಲಿ ಕಲಾವಿದೆ ಹನುಮನ ಸಮುದ್ರ ಲಂಘನ– ಚೂಡಾಮಣಿ ದರ್ಶನ, ಲಂಕಾದಹನ ಮುಂತಾದ ದೃಶ್ಯಗಳನ್ನು ಕಣ್ಣಿಗೆ ಕಟ್ಟುವಂತೆ ಅಭಿನಯಿಸಿದಳು. ರಂಗಾಕ್ರಮಣದಲ್ಲಿ ತೋರಿದ ಮಂಡಿ ಅಡವು ಮತ್ತು ಕಡೆಯಲ್ಲಿ ಹನುಮ ತನ್ನ ಎದೆಯನ್ನು ಬಗೆದು ಪ್ರದರ್ಶಿಸಿದ ಹೃದ್ಯ ದೃಶ್ಯ ವಿಶೇಷವಾಗಿ ಸೆಳೆಯಿತು. ಅಂತ್ಯದ ವಲಚಿ ರಾಗದ ದ್ವಾರಕಿ ಕೃಷ್ಣಸ್ವಾಮಿ ರಚನೆಯ 'ತಿಲ್ಲಾನ'ದಲ್ಲಿ ಮಿಂಚಿನ ಸಂಚಾರದ ನೃತ್ತಗಳೊಂದಿಗೆ, ಕಲಾವಿದೆ, ಮೃದಂಗದ ಮೋಹಕ ಜತಿ( ಜಿ.ಎಸ್.ನಾಗರಾಜ್) ಗಳಿಗೆ ನಟುವಾಂಗದ ಕುಣಿಸುವಂತಿದ್ದ ಕೊನ್ನಕೊಲುಗಳಿಗೆ ತಕ್ಕ ಹಾಗೆ ಹೆಜ್ಜೆ ಹಾಕಿದ ಶಕ್ತಿಶಾಲಿ 'ಗೆತ್ತುಗಳ' ಲಯಾತ್ಮಕ ಝೇಂಕಾರ ಕಲಾವಿದೆಯ ಗೆಲುವನ್ನು ಸಾಬೀತುಪಡಿಸಿತ್ತು.

# ದೇವರು ಕಾಣೆಯಾದನು



**ವಿಶ್ವಾಸ್.ಡಿ.ಗೌಡ**
• ಉದಯವಾಹಿನಿ, ವಿಶೇಷ



ಇಂದಿನ ಮೊಬೈಲ್ ಯುಗದಲ್ಲಿ ಪುಸ್ತಕದ ಬೇಡಿಕೆ ನಿಂತಿಲ್ಲ.. ಅದೆಷ್ಟು ತಂತ್ರಜ್ಞಾನ ಮುಂದುವರೆದರೂ ಓದುಗರಿಗೆ ಪುಸ್ತಕ ಶಾಶ್ವತವಾಗಿ ಉಳಿದು ಬಿಡುತ್ತದೆ.. ಮುಂದಿನ ತಲೆಮಾರುಗಳಿಗೆ ಸಾಹಿತ್ಯ ಪಸರಿಸುವ ಕಾರ್ಯ ಮಾಡಬೇಕಿದೆ..

ಅಂತಹ ಕಾರ್ಯ ಮಾಡುವಲ್ಲಿ ಶ್ರೀ ಶಂಕರಾನಂದ ರವರು ಯಶಸ್ವಿಯಾಗಿದ್ದಾರೆ..

ಈಗಾಗಲೇ ಆರು ಕೃತಿಗಳನ್ನು ರಚಿಸಿ ಸಾಹಿತ್ಯ ಕ್ಷೇತ್ರದಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿರುವ ಅಪ್ಪಟ ಗ್ರಾಮೀಣ ಪ್ರತಿಭೆ.. ತಮ್ಮ ಏಳನೇ ಕೃತಿಯಾದ ದೇವರು ಕಾಣೆಯಾದನು ಎಂಬ ಕೃತಿಯಲ್ಲಿ ಸುಮಾರು 82 ಕವನಗಳನ್ನು ಒಳಗೊಂಡ ಸಂಕಲನವಾಗಿದೆ..

ಪುಸ್ತಕದ ಶಿರೋನಾಮೆಯೇ ಅದ್ಭುತವಾಗಿದೆ.. ಮನುಷ್ಯರು ಕಾಣೆಯಾಗುವುದನ್ನು ಕೇಳಿದ್ದೇವೆ ಆದರೆ ದೇವರೇ ಕೈಗೆ ಸಿಗದೆ ಎಲ್ಲೋ ಮರೆಯಾಗಿರುವ ಶೀರ್ಷಿಕೆ ಎಲ್ಲರ ಮನಸ್ಸು ಸೆಳೆಯುವಲ್ಲಿ ಗೆದ್ದಿದೇ.. ತಾಯಿಯ ಕರುಣೆ, ಅಪ್ಪನ ತ್ಯಾಗ, ಸೈನಿಕರ ಸೇವೆ, ನಿಸರ್ಗದ ನಿನಾದ, ದೇಶಭಕ್ತಿಯ ಅಳವಡಿಕೆ, ಕರುನಾಡು ಮಣ್ಣಿನ ಶೇಷ್ಠತೆ, ಮಹಿಳೆಯ ಅಳಲು, ಮಗಳ ಮಮತೆ, ಗುರುಗಳ ದರ್ಶನ, ಮೊಬೈಲ್ ತಂದ ಆವಾಂತರ ಹೀಗೆ ಒಂದಲ್ಲ ಎರಡಲ್ಲ ಜೀವನದ ಎಲ್ಲಾ ವಿಷಯಗಳ ಕುರಿತು ಬರೆದಿರುವ ಈ ಕವನಗಳೆಲ್ಲವು ಪ್ರಸ್ತುತವಾಗಿದೆ..

ಪ್ರಸಕ್ತ ಶತಮಾನದ ಪೂರಕವಾದ ಕೃತಿ ಇದಾಗಿದೆ. ಶಂಕರಾನಂದ ರವರು ಬಳಸಿರುವ ಪದಪುಂಜಗಳು, ಭಾಷಾ ಶೈಲಿ, ಸಮಯೋಚಿತ ಜೋಡಣೆ, ಅರ್ಥಪೂರ್ಣ ಮೌಲ್ಯಗಳನ್ನು ಒಳಗೊಂಡ ಕೃತಿಯು ಗಟ್ಟಿತನವನ್ನು ಹೊಂದಿದೆ. ತಾವು ಹೇಳಹೊರಟಿರುವ ಸಂದೇಶವನ್ನು ಶ್ರೀ ಸಾಮಾನ್ಯರಿಗೂ ಅರ್ಥವಾಗುಂತೆ, ಮನಮುಟ್ಟುವಂತೆ ತಮ್ಮ ಪದ ಜೋಡಣೆಯಲ್ಲಿ ಸೆಳೆದಿದ್ದಾರೆ..ಈ ರೀತಿಯ ಕೃತಿಗಳು ಮತ್ತಷ್ಟು ಬರಲಿ ಎಂಬ ಆಶಯದೊಂದಿಗೆ ಶಂಕರಾನಂದ ರವರಿಗೆ ಶುಭ ಹಾರೈಕೆಗಳು....

# ಫ್ಯಾಟಿ ಲಿವರ್ ಸಮಸ್ಯೆ ಇರುವವರು ಗ್ರೀನ್ ಟೀ ಕುಡಿಯಬಾರದಾ?

• ಉದಯವಾಹಿನಿ, ಬೆಂಗಳೂರು



ಬೆಳಗಿನ ಜಾವ ಗ್ರೀನ್ ಟೀ ಕುಡಿಯುವುದರಿಂದ, ದೇಹದ ತೂಕ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೃದಯದ ಆರೋಗ್ಯಕ್ಕೂ ಕೂಡ ಒಳ್ಳೆಯ ಪರಿಣಾಮ ಬೀರುತ್ತದೆ. ಆದರೆ ಇಷ್ಟೆಲ್ಲಾ ಆರೋಗ್ಯ ಗುಣಗಳಿರುವ ಈ ಪಾನೀಯವನ್ನು ಈಗಾಗಲೇ ಫ್ಯಾಟಿ ಲಿವರ್ ಸಮಸ್ಯೆ ಇರುವ ರೋಗಿಗಳು ಕುಡಿಯಬಾರದೆಂದು ಇತ್ತೀಚೆಗೆ ಒಂದು ಇನ್ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ವೈರಲ್ ಆಗಿತ್ತು

ಬೆಳಗ್ಗೆ ಎದ್ದು ಕುಡಿಯುವ ಕಾಫಿ–ಚಹಾಗೆ ಹೋಲಿಸಿದರೆ ಒಂದು ಕಪ್ ಗ್ರೀನ್ ಟೀ ಸಾವಿರ ಪಟ್ಟು ಮೇಲು ಎಂಬ ಮಾತಿದೆ. ಇದಕ್ಕೆ ಕಾರಣ ಈ ಪಾನೀಯದಲ್ಲಿ ಅತ್ಯುತ್ತಮ ಆರೋಗ್ಯ ಲಾಭಗಳನ್ನು ನಾವು ಇದರಿಂದ ನಿರೀಕ್ಷೆ ಮಾಡಬಹುದು. ಇನ್ನು ಈ ಪಾನೀಯದ ಬಗ್ಗೆ ಆಯುರ್ವೇದ ತಜ್ಞರು ಕೂಡ ಹೇಳುವ ಹಾಗೆ, ಬೆಳಗಿನ ಜಾವ ಗ್ರೀನ್ ಟೀ ಕುಡಿಯುವುದರಿಂದ, ದೇಹದ ತೂಕ ನಿಯಂತ್ರಣಕ್ಕೆ ಬರುವುದರ ಜೊತೆಗೆ ಹೃದಯದ ಆರೋಗ್ಯಕ್ಕೂ ಕೂಡ ಒಳ್ಳೆಯ ಪರಿಣಾಮ ಬೀರುತ್ತದೆ. ಆದರೆ ಇಷ್ಟೆಲ್ಲಾ ಆರೋಗ್ಯ ಗುಣಗಳಿರುವ ಈ ಪಾನೀಯವನ್ನು ಈಗಾಗಲೇ ಫ್ಯಾಟಿ ಲಿವರ್ ಸಮಸ್ಯೆ ಇರುವ ರೋಗಿಗಳು ಕುಡಿಯಬಾರದೆಂದು ಇತ್ತೀಚೆಗೆ ಒಂದು ಇನ್ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ವೈರಲ್ ಆಗಿತ್ತು ಆದರೆ ವೈದ್ಯರು ಮಾತ್ರ ಈ ಮಾತನ್ನ ತಳ್ಳಿ ಹಾಕಿದ್ದಾರೆ ಯಾಕೆಂದ್ರೆ, ನಿಯಮಿತವಾಗಿ ಗ್ರೀನ್ ಟೀ ಕುಡಿಯುವುದರಿಂದ ಲಿವರ್ ಭಾಗ ದಲ್ಲಿ ಮೊದಲೇ ಇರುವಂತಹ ಕೊಬ್ಬಿನಾಂಶ ಸಾಕಷ್ಟು ಕಡಿಮೆಯಾಗುತ್ತದೆ ಹಾಗೂ ಮುಂದಿನ ದಿನಗಳಲ್ಲಿ ಫ್ಯಾಟಿ ಲಿವರ್ ಸಮಸ್ಯೆ ಇರುವುದಿಲ್ಲ ಎಂದು ವೈದ್ಯರು ಕೂಡ ಹಲವಾರು ಬಾರಿ ಸಲಹೆ ನೀಡಿದ್ದಾರೆ. ಆದರೆ ಈ ಪಾನೀಯದ ವಿಚಾರದಲ್ಲಿ ಸ್ವಲ್ಪ ಜಾಗರೂಕತೆಯಾಗಿರಲು ಕೂಡ ಸಲಹೆ ನೀಡಿದ್ದಾರೆ! ಹಾಗಾದ್ರೆ, ವೈದ್ಯರು ಹೇಳಿರುವ ಪ್ರಕಾರ ಏನೆಲ್ಲಾ ಎಚ್ಚರಿಕೆಯನ್ನು ವಹಿಸಬೇಕು ಹಾಗೂ ನಿಯಮಿತವಾಗಿ ಗ್ರೀನ್ ಟೀ ಕುಡಿಯು ವುದರಿಂದ ಲಿವರ್ ಆರೋಗ್ಯಕ್ಕೆ ಏನೆಲ್ಲಾ ಪ್ರಯೋಜನಗಳಿವೆ, ಎನ್ನುವುದನ್ನು ನಮ್ಮ ಸಜಗ್ ಫ್ಯಾಕ್ಟ್ ಚೆಕ್ ತಂಡದ ತನಿಖೆಯಲ್ಲಿ ನೋಡೋಣ ಬನ್ನಿ...



**ಇನ್ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ಏನಿದೆ:** ಇನ್ಸ್ಟಾಗ್ರಾಮ್ ಪೋಸ್ಟ್‌ನಲ್ಲಿ ಹೇಳಿರುವ ಪ್ರಕಾರ, ಈಗಾಗಲೇ ಫ್ಯಾಟಿ ಲಿವರ್ ಸಮಸ್ಯೆಯಿಂದ ಬಳಲುತ್ತಿದ್ದರೆ, ಗ್ರೀನ್ ಟೀಯಿಂದ ದೂರವಿರಬೇಕು ಎಂದು ಸಲಹೆ ನೀಡಲಾಗಿದೆ. ಈ ಪೋಸ್ಟ್‌ನಲ್ಲಿ ಉಲ್ಲೇಖಿಸಲಾದ ಸಂಪೂರ್ಣ ವಿವರಗಳನ್ನು ಸಹ ನೀವು ತಿಳಿಯಬಹುದು.

**ಈ ಬಗ್ಗೆ ಸಂಶೋಧನೆಗಳು ಏನು ಹೇಳುತ್ತವೆ:** ಮುಂಬೈನ ನಾನಾವತಿ ಮ್ಯಾಕ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಹೆಪಟಾಲಜಿಯ ಪ್ರಧಾನ ಸಲಹೆಗಾರ ಡಾ. ಉದಯ್ ಸಂಗ್ಲೋಡ್ಕರ್ ಅವರು ಕೆಲವು ವಿಶೇಷ ಸಂಶೋಧನೆಗಳನ್ನು ಉಲ್ಲೇಖಿಸಿದ್ದಾರೆ. ಅಲ್ಲದೆ ಈ ಸಂಶೋಧನೆಗಳಲ್ಲಿ ನೀಡಿರುವ ಮಾಹಿತಿಯ ಪ್ರಕಾರ ಫ್ಯಾಟಿ ಲಿವರ್ ನಲ್ಲಿಯೂ ಕೂಡ ಎರಡು ವಿಧವಿದ್ದು, ಒಂದು ಆಲ್ಕೋಹಾಲಿಕ್ ಫ್ಯಾಟಿ ಲಿವರ್ (ಎಎಫ್‌ಎಲ್‌ಡಿ), ಮತ್ತೊಂದು ನಾನ್ ಆಲ್ಕೋಹಾಲಿಕ್ ಫ್ಯಾಟಿ ಲಿವರ್ ಕಾಯಿಲೆ (ಎನ್‌ಎಎಫ್‌ಎಲ್‌ಡಿ). ಈ ಬಗ್ಗೆ ತಜ್ಞರು ಹೇಳುವ ಪ್ರಕಾರ ಈಗಾಗಲೇ ನಾನ್ ಆಲ್ಕೋಹಾಲಿಕ್ ಫ್ಯಾಟಿ ಲಿವರ್ ಕಾಯಿಲೆ ಇರುವವರಿಗೆ, ಗ್ರೀನ್ ಟೀಯಲ್ಲಿರುವ ಪೌಷ್ಟಿಕಸತ್ವಗಳ ಸಾರವು ಪ್ರಯೋಜನಕಾರಿಯಾಗಿವೆ, ಅಲ್ಲದೆ ಈ ಟೀಯಲ್ಲಿ ಸಿಗುವ ಈ ಸಾರವು ಯಕೃತ್ತಿನ ಕಿಣ್ವದ ಮಟ್ಟವನ್ನು ಕಡಿಮೆ ಮಾಡುವುದರ ಜೊತೆಗೆ ALT ಮತ್ತು AST ಎಂಬ ಲಿವರ್‌ಗೆ ಹಾನಿ ಉಂಟು ಮಾಡುವ ಕಿಣ್ವಗಳನ್ನು ಕೂಡ ಕಡಿಮೆ ಮಾಡುತ್ತದೆ ಹಾಗೂ ದೇಹದ ಲಿವರ್ ಆರೋಗ್ಯವನ್ನು ಕಾಪಾಡುತ್ತದೆ ಎನ್ನುತ್ತಾರೆ ವೈದ್ಯರು.

### ಕೊನೆ ಮಾತು

**ಮಿತವಾಗಿ ಗ್ರೀನ್ ಟೀ ಕುಡಿಯುವುದು ಒಳ್ಳೆಯದೇ ಇದರ ಜೊತೆಗೆ ಸರಿಯಾದ ಜೀವನ ಶೈಲಿ ಅನುಸರಿಸಬೇಕು. ಮುಖ್ಯವಾಗಿ ಲಿವರ್‌ಗೆ ಸಮಸ್ಯೆ ಉಂಟು ಮಾಡುವ ಜಂಕ್ ಫುಡ್‌ಗಳಿಂದ ದೂರವಿದ್ದು, ಕಟ್ಟುನಿಟ್ಟಿನ ಆಹಾರ ಪದ್ಧತಿ ಯನ್ನು ಅನುಸರಿಸಬೇಕು. ಆರೋಗ್ಯಕಾರಿ ಆಹಾರ ಪದಾರ್ಥಗಳಾದ, ಹಸಿರೆಲೆ ಸೊಪ್ಪು–ತರಕಾರಿಗಳನ್ನು ತಾಜಾ ಹಣ್ಣುಗಳನ್ನು ಆಹಾರಪದ್ಧತಿಯಲ್ಲಿ ಸೇರಿಸಿಕೊಳ್ಳುವುದರ ಜೊತೆಗೆ ಪ್ರತಿದಿನ ವಾಕಿಂಗ್, ವ್ಯಾಯಾಮ, ಇಲ್ಲಾಂದ್ರೆ ಯೋಗಾಸನಗಳನ್ನು ಅನುಸರಿಸುವುದರಿಂದ ಮಾತ್ರ ಆರೋಗ್ಯಕಾರಿ ಜೀವನ ನಡೆಸಲು ಸಾಧ್ಯ. ಇನ್ನು ನಮ್ಮ ಸಜಾಗ್ ಫ್ಯಾಕ್ಟ್ ಚೆಕ್ ತಂಡವು ತನ್ನ ತನಿಖೆಯಲ್ಲಿ ಕೊಬ್ಬಿನ ಫ್ಯಾಟಿ ಲಿವರ್ ಮೇಲೆ ನಕಾರಾತ್ಮಕ ಪರಿಣಾಮ ಬೀರುವ ಗ್ರೀನ್ ಟೀ ಬಗ್ಗೆ ಇರುವ ಹೇಳಿಕೆಯು ಸುಳ್ಳು ಎಂದು ಕಂಡುಹಿಡಿದಿದೆ**

# ಆ ಪದ ಬಳಕೆ ಕಲಾವಿದರು ಮಾತ್ರವಲ್ಲ ಯಾರಿಗಾದ್ರೂ ನೋವಾಗುತ್ತೆ

• ಉದಯವಾಹಿನಿ, ಬೆಂಗಳೂರು




ಚಿತ್ರರಂಗದವರ ನಟ್ಟು, ಬೋಲ್ಟ್ ಟೈಟ್ ಮಾಡಬೇಕು. ಎಂಬ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿಕೆ ಭಾರಿ ಚರ್ಚೆಗೆ ಕಾರಣವಾಗಿದೆ. ಇದೀಗ ಡಿ.ಕೆ. ಶಿವಕುಮಾರ್ ಪದ ಬಳಕೆ ಬಗ್ಗೆ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಕೂಡ ಬೇಸರ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮಧು ಬಂಗಾರಪ್ಪ,ಡಿ. ಕೆ.ಶಿವಕುಮಾರ್ ನಟ್ಟು, ಬೋಲು ಎಂಬ ಆ ಪದ ಬಳಸಬಾರದಿತ್ತು. ನಾನೊಬ್ಬ ಸಿನಿಮಾ ಇಂಡಸ್ಟ್ರಿಯವನಾಗಿ ಇದನ್ನು ಒಪ್ಪಲ್ಲ ಎಂದು ಹೇಳಿದ್ದಾರೆ. ಸಿನಿಮಾ ಇಂಡಸ್ಟ್ರಿ ಎಂದರೆ ಎಲ್ಲರೂ ಇರ್ತಾರೆ. ಶಿವಣ್ಣ ಕೂಡ ಇರುತ್ತಾರೆ. ಆ ಪದ ಕಲಾವಿದರೂ ಮಾತ್ರವಲ್ಲ ಯಾರಿಗೇ ಆದರೂ ನೋವಾಗುತ್ತೆ. ಹೋರಾಟಕ್ಕೆ ಬಂದಿಲ್ಲ ಎನ್ನುವುದನ್ನು ಒಪ್ಪಿಕೊಳ್ಳೋಣ.

ಆದರೆ ಆ ಪದ ಬಳಕೆ ಮನಸ್ಸಿಗೆ ನೋವಾಗುವಂತದ್ದು ಡಿ.ಕೆ.ಶಿವಕುಮಾರ್ ಹೇಳಿದ ಅರ್ಥ ಸರಿಯಿದೆ. ಆದರೆ ಪದ ಬಳಕೆ ಸರಿಯಿಲ್ಲ ಬೇರೆ ರೀತಿಯಲ್ಲಿಯೂ ಹೇಳಬಹುದಿತ್ತು ಎಂದು ಹೇಳಿದರು.

# ರಾಮಾಯಣ

## ಶ್ರೀರಾಮನು ಮೆರವಣಿಗೆಯಲ್ಲಿ ದಶರಥರಾಜನ ಅರಮನೆಗೆ ಹೋದದ್ದು




• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಶರೀರದಲ್ಲಿ ಅಲಸ್ಯವೂ ಇಲ್ಲ ಆದರೆ ಮನಸ್ಸಿನಲ್ಲಿ ಒಂದು ಕಾರ್ಯವನ್ನು ಯೋಚಿಸಿ ನಿನ್ನ ಸಂಗಡ ಹೇಳುವುದಕ್ಕೆ ಅಂಜಿಕೊಂಡಿದ್ದಾನೆ. ಆ ಕಾರ್ಯವು ನಿನಗೆ ವ್ಯಥೆಯನ್ನುಂಟು ಮಾಡುವಂಥದು. ಆದ್ದರಿಂದ ಈತನಿಗೆ ಮಾತು ಹೊರಡಲಿಲ್ಲ. ಆ ಕಾರ್ಯವನ್ನು ನಾನು ಬಲ್ಲೆನು. ಪೂರ್ವದಲ್ಲಿ ದೇವತೆಗಳಿಗೂ ರಾಕ್ಷಸರಿಗೂ ಯುದ್ಧವಾದಾಗ ಈ ರಾಯನು ದೇವತೆಗಳ ಸಹಾಯಕ್ಕೆ ಹೋಗಿ ಪರಬಲದಿಂದ ಘಾಯಪಟ್ಟು ಮುರಿದು ಮೂರ್ಛೆಯನ್ನೈದಿದನು. ಆ ಸಮಯದಲ್ಲಿ ನಾನು ಈತನನ್ನು ಸ್ಥಳಾಂತರವನ್ನೈದಿಸಿ ರಕ್ಷಿಸಿದನು. ಆಗ ನನಗೆ ಎರಡು ವರಗಳನ್ನು ಕೊಟ್ಟನು. ಈಗ ನೀರು ಹೋದಮೇಲೆ ಕಟ್ಟೆಯನ್ನು ಕಟ್ಟುವಂತೆ ಕೊಟ್ಟ ವರಗಳಿಗೆ ಪ್ರತೀಕಾರವನ್ನು ಚಿಂತಿಸು ತ್ತಿದ್ದಾನೆ. ಲೋಕದಲ್ಲಿ ಸತ್ಯಸಂಧರಾದವರು ಆಡಿದ ಮಾತಿಗೆ ತಪ್ಪರು, ಅಂಥ ಸತ್ಯವನ್ನು ತಪ್ಪಬಾರದೆಂದು ಕಾರ್ಯಾಂತರವನ್ನು ಆಲೋಚಿಸುತ್ತಿದ್ದಾನೆ. ನೀನು ಹಿತವಾದರೂ ಅಹಿತವಾದರೂ ಮನಸ್ಸಿನಲ್ಲಿ ವ್ಯಥೆಪಡುವುದಿಲ್ಲವೆಂದು ನುಡಿದರೆ ಆ ಕಾರ್ಯವನ್ನು ಹೇಳುತ್ತೇನೆ. ದಶರಥರಾಯನು ನಿನ್ನ ಮನೆಗೆ ಕೋಪವುಂಟಾಗುವುದೆಂದು ಹೇಳಲಂಜಿಕೊಂಡಿದ್ದಾನೆ ಎಂದು ನುಡಿದಳು. ಆ ಮಾತನ್ನು ಕೇಳಿ ಶ್ರೀ ರಾಮನು ತನ್ನ ತಂದೆಯಾದ ದಶರಥರಾಯನ ಸಂಮುಖದಲ್ಲಿ ಕೈಕೇಯಿ?ದೇವಿಯನ್ನು ಕುರಿತು **ಹೀಗೆ ನುಡಿದನು:** ಅಮ್ಮ, ನೀನೂ ನನ್ನನ್ನು ತಂದೆಯ ಮಾತಿಗೆ ಪ್ರತಿಮತನವನ್ನು ನುಡಿಯುವವನೆಂದು ಹೇಳಬಹುದೆ ಹಾಗಾದರೆ ನನ್ನ ಜನ್ಮಕ್ಕೆ ಧಿಕ್ಕಾರ. ಇದು ನಿನಗೆ ಉಚಿತವಲ್ಲ. ಈತನು ಉರಿಯುವ ಕೆಚ್ಚಿನಲ್ಲಿ ಬೀಳಹೇಳಿದರೂ ನಾನು ಬೀಳುವೆನು. ವಿಷಭಕ್ಷಣವನ್ನು ಮಾಡಹೇಳಿದರೂ ಮಾಡುವೆನು. ಸಮುದ್ರದಲ್ಲಿ ಬೀಳಹೇಳಿದರೂ ಬೀಳುವೆನು. ನಾನು ತಂದೆಯ ಮಾತನ್ನು ಮೀರುವವನಲ್ಲ. ನಿನಗೆ ಸಂಕೋಚವು ಬೇಡ. ಮಹಾರಾಜನ ಮನಸ್ಸಿನಲ್ಲಿರುವ ಕಾರ್ಯವನ್ನು ಹೇಳು. ನಾನು ಆಡಿದ ಮಾತನ್ನು ತಪ್ಪುವವನಲ್ಲವೆಂಬುದನ್ನು ನೀನು ಬಲ್ಲೆ ಎಂದು ವಿನಯದಿಂದ ನುಡಿದನು. ಕೈಕೇಯಾದೇವಿಯು ಅತ್ಯಂತ ಭಯಂಕರವಾಗಿ ಕರ್ಣಕಠೋರವಾಗಿ ಆತನನ್ನು ಕುರಿತು ಹಾಗಾದರೆ ಕೇಳು : ಶ್ರೀರಾಮ, ಮಹಾರಾಜನು ಮೆಚ್ಚಿ ನನಗೆ ಕೊಟ್ಟ ಎರಡು ವರಗಳಲ್ಲಿ ಈಗ ಭರತನಿಗೆ ಪಟ್ಟಾಭಿಷೇಕವನ್ನು ಮಾಡಬೇಕೆಂದೂ ನೀನು ಜಡೆಗಳನ್ನು ಧರಿಸಿ ನಾರುಡಿಗೆಯನ್ನುಟ್ಟು ಕೊಂಡು ಹದಿ ನಾಲ್ಕು ವರುಷಗಳು ವನವಾಸಕ್ಕೆ ಹೋಗುವ ಹಾಗೆ ಮಾಡಬೇಕೆಂದೂ ಬೇಡಿಕೊಂಡನು. ನೀನು ನಿನ್ನ ತಂದೆಯ ಪ್ರತಿಜ್ಞೆಯನ್ನು ಸಲ್ಲಿಸಲೆಣಿಸುವ ಪಕ್ಷದಲ್ಲಿ ಸತ್ಯಸಂಧನಾದ ನಿನ್ನ ತಂದೆಯ ಮಾತು ಸತ್ಯವಾಗುವ ಹಾಗೆ ಹದಿನಾಲ್ಕು ವರುಷಗಳು ವನವಾಸಕ್ಕೆ ತೆರಳು, ದಶರಥರಾಯನು ನಿನಗೆ ಪಟ್ಟಾಭಿಷೇಕವನ್ನು ಮಾಡುವುದಕ್ಕಾಗಿ ಸಂಪಾದಿಸಿದ ವಸ್ತುಗಳಿಂದ ಭರತನಿಗೆ ಪಟ್ಟಾಭಿಷೇಕವನ್ನು ಮಾಡಲಿ. ಭರತನು ನಾನಾ ಪ್ರಕಾರವಾದ ಅಶ್ವ ರಥ ಗಜ ರತ್ನ ಮೊದಲಾದ ವಸ್ತುಗಳಿಂದ ಪರಿವೃತವಾದ ಈ ದೇಶವನ್ನು ಪರಿಪಾಲಿಸಿ ಕೊಂಡು ಸುಖದಿಂದಿರಲಿ.

ಮುಂದುವರಿಯುವುದು...

# ಪಾರಿಜಾತ ಹೂಗಳು ನಿಮ್ಮ ಕೂದಲಿನ ಬೆಳವಣಿಗೆಗೆ ಅತ್ಯುತ್ತಮವಂತೆ!

• ಉದಯವಾಹಿನಿ, ಬೆಂಗಳೂರು





ಪಾರಿಜಾತ ಹೂವಿನ ಬಗ್ಗೆ ಪುರಾಣಗಳಲ್ಲಿ ಉಲ್ಲೇಖವಿದ್ದು,, ಈ ಹೂವು ಆಯುರ್ವೇದದಲ್ಲಿ ಹೆಚ್ಚಿನ ಮಹತ್ವವನ್ನು ಪಡೆದಿದೆ. ಈ ಮರದ ಚೆಕ್ಕೆ, ಎಲೆಗಳು ಮತ್ತು ಹೂಗಳು ದೇಹದ ಹಲವಾರು ಸಮಸ್ಯೆಗಳಿಗೆ ಪರಿಹಾರವನ್ನು ನೀಡುವಲ್ಲಿ ಪ್ರಸಿದ್ಧಿಯನ್ನು ಪಡೆದಿದೆ . ಅದರಂತೆ ಈ ಹೂವು ಕೂದಲಿನ ಆರೈಕೆ ಮಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಕೂದಲಿನ ಬೆಳವಣಿಗೆಯಲ್ಲಿ ಪಾರಿಜಾತ ಹೂವು ಹೇಗೆ ಕಾರ್ಯ ನಿರ್ವಹಿಸುತ್ತದೆ ನೋಡೋಣ. ಪಾರಿಜಾತವು ಒಂದು ಬಗೆಯ ಹೂವಾಗಿದ್ದು, ಪುರಾಣಗಳಲ್ಲಿ ಇದರ ಉಲ್ಲೇಖವಿದೆ . ಭೂಮಿಯ ಮೇಲೆ ಬೆಳೆಯುವ ಪಾರಿಜಾತ ಹೂವೇ ಪುರಾಣದಲ್ಲಿ ಬರುವ ಪಾರಿಜಾತ ಎನ್ನುವುದರ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ . ಆದರೆ ಈ ಹೂವು ಅತ್ಯುತ್ತಮ ಸುವಾಸನೆಯನ್ನು ಹೊಂದಿದೆ. ಸಣ್ಣ ಮರವಾಗಿ ಬೆಳೆಯುವ ಈ ಹೂವಿನ ಗಿಡವು ಹಲವಾರು ಶಾಖೆಗಳನ್ನು ಹೊಂದುತ್ತವೆ ಮತ್ತು ಶಾಖೆಗಳ ತುದಿಯಲ್ಲಿ ಹೂವುಗಳನ್ನು ಗೊಂಚಲಾಗಿ ಬಿಡುತ್ತದೆ. ಇದರ ಹೂವು ಬಿಳಿಯಾಗಿದ್ದು ಹೂವಿನ ತೊಟ್ಟು ಕೆಂಪು ಬಣ್ಣದಿಂದ ಕೂಡಿರುತ್ತದೆ. ಈ ಹೂಗಳು ಸಾಮಾನ್ಯವಾಗಿ ಸಂಜೆ ಅಥವಾ ರಾತ್ರಿಯ ಸಮಯದಲ್ಲಿ ಅರಳುತ್ತವೆ. ಈ ಹೂವಿನ ಎಲೆ ಮತ್ತು ಮರದ ಚೆಕ್ಕೆಯ ಪುಡಿಯನ್ನು ವೀಳ್ಯದೆಲೆಯ ರಸದೊಂದಿಗೆ ಸೇವನೆ ಮಾಡಿದಲ್ಲಿ ಕೆಮ್ಮು ನಿವಾರಣೆ ಆಗುತ್ತದೆ ಎನ್ನಲಾಗುತ್ತದೆ. ಅಲ್ಲದೆ ಇದರ ಎಲೆ ಮತ್ತು ಮರದ ಚೆಕ್ಕೆಯನ್ನು ಚರ್ಮ ರೋಗಕ್ಕೂ ಲೇಪದ ರೂಪದಲ್ಲಿ ಬಳಸಲಾಗುತ್ತದೆ. ಪಾರಿಜಾತದ ಎಲೆಯ ಸೇವನೆಯಿಮ್ದ ಅಜೀರ್ಣ, ಪಿತ್ತಕೋಶದ ತೊಂದರೆ, ಮೂಲವ್ಯಾಧಿಯಂತಹ ಸಮಸ್ಯೆಗಳಿಗೆ ಪರಿಹಾರ ನೀಡುತ್ತದೆ ಎಲೆಯ ಕಷಾಯವನ್ನು ಸೇವಿಸುವುದರಿಂದ ಜ್ವರವನ್ನು ಕಡಿಮೆ ಮಾಡಬಹುದು ಅಲ್ಲದೆ ಇದರ ಬೀಜಗಳ ಪುಡಿಯನ್ನು ತಲೆಗೆ ಅನ್ವಯಿಸಿದಲ್ಲಿ ತಲೆಯಲ್ಲಿ ಉಂಟಾಗುವ ಕಜ್ಜಿಗಳು, ಕೂದಲುದುರುವಿಕೆಯಂತಹ ಸಮಸ್ಯೆಗಳಿಗೆ ಇದು ಪರಿಹಾರವಾಗ ಬಲ್ಲದು ಎಂದು ಆಯುರ್ವೇದದಲ್ಲಿ ಹೇಳಲಾಗುತ್ತದೆ. ಆಯುರ್ವೇದದಲ್ಲಿ ಈ ಗಿಡದ ಚೆಕ್ಕೆ, ಬೀಜ ಎಲೆ ಹೂವುಗಳಿಗೆ ಹೆಚ್ಚಿನ ಪ್ರಾಮುಖ್ಯತೆ ಇದ್ದು ಇದು ನಾನಾ ಸಮಸ್ಯೆಗಳಿಗೆ ಪರಿಹಾರವಾಗಿದೆ.

**ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ:** ರಾತ್ರಿ ಮಲ್ಲಿಗೆ ಅಥವಾ ಪಾರಿಜಾತವೆಂದು ಕರೆಯಲ್ಪಡುವ ಈ ಹೂವು ಉತ್ಕರ್ಷಣ ನಿರೋಧಕಗಳು ಮತ್ತು ವಿಟಮಿನ್‌ಗಳಿಂದ ತುಂಬಿರುತ್ತದೆ . ಅದರಲ್ಲೂ ವಿಶೇಷವಾಗಿ ವಿಟಮಿನ್ ಸಿ ಮತ್ತು ಇ ಯನ್ನು ಹೊಂದಿದೆ. ಇದು ಆಕ್ಸಿಡೇಟಿವ್ ಒತ್ತಡವನ್ನು ಕಡಿಮೆ ಮಾಡಲು ಮತ್ತು ಆರೋಗ್ಯಕರ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸಲು ಸಹಾಯ ಮಾಡುತ್ತದೆ. ಇದರ ಉರಿಯೂತದ ಗುಣಲಕ್ಷಣಗಳು ನೆತ್ತಿಯನ್ನು ಶಮನಗೊಳಿಸುತ್ತದೆ, ಕೂದಲು ಬೆಳೆಯಲು ಉತ್ತಮ ವಾತಾವರಣವನ್ನು ನೀಡುತ್ತದೆ.

**ನೆತ್ತಿಯ ರಕ್ತ ಪರಿಚಲನೆಯನ್ನು ಉತ್ತೇಜಿಸುತ್ತದೆ**

ಹರ್ಸಿಂಗಾರ್ ಅಥವಾ ಪಾರಿಜಾತವೆಂದು ಕರೆಯಲ್ಪಡುವ ಈ ಹೂವು ನೆತ್ತಿಯ ರಕ್ತ ಪರಿಚಲನೆಯನ್ನು ಸುಧಾರಿಸುತ್ತದೆ. ಕೂದಲಿನ ಕಿರುಚೀಲಗಳು ಹೆಚ್ಚು ಆಮ್ಲಜನಕ ಮತ್ತು ಪೋಷಕಾಂಶಗಳನ್ನು ಪಡೆಯುವಂತೆ ಮಾಡುತ್ತದೆ.

ಕಿರುಚೀಲಗಳ ಪೋಷಣೆಯನ್ನು ಬೆಂಬಲಿಸುವ ಮೂಲಕ ಕೂದಲು ದಟ್ಟವಾಗಿ ಆರೋಗ್ಯಕರವಾಗಿ ಬೆಳೆಯುವಂತೆ ಮಾಡುತ್ತದೆ.

# ಪಿಎಂ ಇಂಟರ್ನ್‌ಶಿಪ್: ಯುವ ಜನತೆಯ ಕೌಶಲ್ಯಾಭಿವೃದ್ಧಿಗೆ ಒತ್ತು

## ಭಾರತ ಸರ್ಕಾರದ ಹೊಸ ಯೋಜನೆಯಾಗಿದ್ದು ಯುವ ಜನತೆಯ ಕೌಶಲ್ಯಾಭಿವೃದ್ಧಿ ಹೆಚ್ಚಿಸಿಕೊಳ್ಳಲು ಸಹಾಯಕ

• ಉದಯವಾಹಿನಿ, ಚಿತ್ರದುರ್ಗ

ಪಿಎಂ ಇಂಟರ್ನ್‌ಶಿಪ್ ಭಾರತ ಸರ್ಕಾರದ ಹೊಸ ಯೋಜನೆಯಾಗಿದ್ದು, ಯುವ ಜನತೆಯ ಕೌಶಲ್ಯಾಭಿವೃದ್ಧಿ ಹೆಚ್ಚಿಸಿಕೊಳ್ಳಲು ಸಹಾಯಕವಾಗಿದೆ ಎಂದು ಬೆಂಗಳೂರಿನ ಆರ್‌ಡಿಎಸ್‌ಡಿಇ ತರಬೇತಿ ಅಧಿಕಾರಿ ಆರ್.ಮಾಲತಿ ಹೇಳಿದರು.

ನಗರದ ಸ್ಟೇಡಿಯಂ ಸಮೀಪದ ಸರ್ಕಾರಿ ಕೈಗಾರಿಕಾ ತರ ಬೇತಿ ಸಂಸ್ಥೆಯಲ್ಲಿ ಕೈಗಾರಿಕಾ ತರಬೇತಿ, ಉದ್ಯೋಗ ಇಲಾಖೆಯಿಂದ ಜಿಲ್ಲೆಯ ತರಬೇತುದಾರರು, ಉದ್ದಿಮೆದಾರರಿಗೆ ಅಪ್ರೆಂಟಿಶಿಪ್ ಮತ್ತು ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

**ಭವಿಷ್ಯದಲ್ಲಿ ಉತ್ತಮ ಜೀವನ**

ಚಿತ್ರದುರ್ಗದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಪ್ರಾಂಶುಪಾಲ ಬಿ.ಸುರೇಶ್ ಮಾತನಾಡಿ, ಜಿಲ್ಲೆಯ ಎಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿನ ತರಬೇತುದಾರರು, ಉದ್ದಿಮೆ ದಾರರಿಗೆ ಪ್ರಧಾನ ಮಂತ್ರಿ ಇಂಟರ್ನ್‌ಶಿಪ್ ಬಗ್ಗೆ ಅರಿವು ಮೂಡಿಸಲು ಈ ಕಾರ್ಯಕ್ರಮ ಆಯೋಜಿಸಿದ್ದು, ಜಿಲ್ಲೆಯಲ್ಲಿ ಒಟ್ಟು 54 ಸರ್ಕಾರಿ, ಅನುದಾನಿತ, ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿದ್ದು, ಇದರಲ್ಲಿ 200 ತರಬೇತುದಾರರು ಭಾಗ ವಹಿಸಿದ್ದಾರೆ. ತರಬೇತುದಾರರು ಹೆಚ್ಚಿನ ಕೌಶಲ್ಯ ಹೊಂದಿ ಭವಿಷ್ಯದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಲು ಈ ಕಾರ್ಯಕ್ರಮ ಹೆಚ್ಚು ಸಹಕಾರಿಯಾಗಿದೆ ಎಂದು ತಿಳಿಸಿದರು.

ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲ ಜರೀಫ್‌ಉಲ್ಲಾ ಮಾತನಾಡಿ, ಐಟಿಐ ತರಬೇತಿ ನಂತರ ಅಪ್ರೆಂಟಿಶಿಪ್ ಮತ್ತು ಪ್ರಧಾನಮಂತ್ರಿ ಇಂಟರ್ನ್ ಶಿಪ್ ಬಗ್ಗೆ ಪೋರ್ಟಲ್‌ನಲ್ಲಿ ಯಾವ ರೀತಿ ನೋಂದಣಿ ಮಾಡಿಕೊಳ್ಳಬೇಕು ಎಂಬ ಬಗ್ಗೆ ಪವರ್‌ಪಾಯಿಂಟ್ ಮೂಲಕ ಮಕ್ಕಳಿಗೆ ತಿಳಿಸಿಕೊಡಲಾಗಿದೆ.

ಇದರಿಂದ ಏನೇನು ಅನುಕೂಲಗಳಿವೆ ಎಂಬ ಬಗ್ಗೆ ಮಾಹಿತಿ ಒದಗಿಸಲಾಗಿದೆ. ದ್ವಿತೀಯ ವರ್ಷ ಐಟಿಐ ತರಬೇತಿ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ಅಪ್ರೆಂಟಿಶಿಪ್ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಲಾಗಿದೆ.



> ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಎಂಬ ಹೊಸ ತರಬೇತಿ ಕಾರ್ಯಕ್ರಮವನ್ನು ಕಳೆದ ವರ್ಷದಿಂದ ಜಾರಿಗೊಳಿಸಿದೆ. ಒಂದು ವರ್ಷದ ತರಬೇತಿ ಕಾರ್ಯಕ್ರಮ ಇದಾಗಿದ್ದು, ತರಬೇತಿ ಅವಧಿಯಲ್ಲಿ 5 ಸಾವಿರ ಶಿಷ್ಯ ವೇತನ ನೀಡಲಾಗುತ್ತದೆ. ನೋಂದಣಿ ಮಾಡಿಕೊಳ್ಳಲು ಪ್ರತ್ಯೇಕ ಪೋರ್ಟಲ್ ಇದ್ದು, ನೋಂದಣಿ ಮಾಡಿಕೊಂಡ ಆರಂಭದಲ್ಲೇ ಅಗತ್ಯತೆಗಳಿಗಾಗಿ ಆರು ಸಾವಿರ ನೀಡಲಾಗುತ್ತದೆ. ತರಬೇತಿ ಪಡೆದು ನಾನಾ ಕಂಪನಿಗಳಲ್ಲಿ ಉದ್ಯೋಗ ಪಡೆದುಕೊಳ್ಳಬಹುದು ಅಥವಾ ಸ್ವಂತ ಉದ್ಯೋಗ ಮಾಡಬಹುದು, ಇದಕ್ಕಾಗಿ ಬ್ಯಾಂಕುಗಳಿಂದ ಸಾಲ ಸೌಲಭ್ಯ ಕೂಡ ಸಿಗಲಿದೆ
>
> – ಆರ್.ಮಾಲತಿ, ಆರ್‌ಡಿಎಸ್‌ಡಿಇ ತರಬೇತಿ ಅಧಿಕಾರಿ

1 ಸಾವಿರಕ್ಕೂ ಹೆಚ್ಚು ಉದ್ದಿಮೆದಾರರು ಕೂಡ ನೋಂದಣಿ ಮಾಡಿಕೊಂಡಿದ್ದಾರೆ. ಅಪ್ರೆಂಟಿಶಿಪ್ ಮತ್ತು ಪ್ರಧಾನಮಂತ್ರಿ ಇಂಟರ್ನ್‌ಶಿಪ್ ಪೋರ್ಟಲ್ ತರಬೇತುದಾರರು ಮತ್ತು ಉದ್ದಿಮೆದಾರರ ನಡುವೆ ಸೇತುವೆಯಾಗಿ ಕೆಲಸ ಮಾಡಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಆರ್‌ಡಿಎಸ್‌ಡಿಇ ಕಚೇರಿಯ ಶಾಂತಿ, ಬೆಂಗಳೂರು ಎನ್‌ಎಸ್‌ಡಿಸಿ ದುಂಡೇಶ್ ಬಡಿಗೇರ್, ಚಿತ್ರದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿ ಎಸ್.ಲೀಲಾವತಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಗಾರಂಪಳ್ಳಿ ಗ್ರಾ.ಪಂ.ಎದುರು ವಿವಿಧ ಬೇಡಿಕೆಗಳು ಈಡೇರಿಸಲು: ಕೆಪಿಆರ್ ಎಸ್ ಪ್ರತಿಭಟನೆ

• ಉದಯವಾಹಿನಿ,ಚಿಂಚೋಳಿ

ಗಾರಂಪಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಬಡವರಿಗೆ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೆಲಸ ನೀಡಬೇಕು ಬಡ ಕೂಲಿಕಾರ್ಮಿಕರಿಗೆ ಕೆಲಸ ಮಾಡಲು ಜಾಬ್ ಕಾರ್ಡಗಳು ನೀಡಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪಾ ಮಮಶೆಟ್ಟಿ ಆಗ್ರಹಿಸಿದರು.

ತಾಲ್ಲೂಕಿನ ಗಾರಂಪಳ್ಳಿ ಗ್ರಾಮ ಪಂಚಾಯಿತಿ ಎದುರುಗಡೆ ಕರ್ನಾಟಕ ಪ್ರಾಂತ ರೈತ ಸಂಘದ ವತಿಯಿಂದ ನರೇಗಾ ಕಾಮಗಾರಿ ಮತ್ತು ಬಡ ಕೂಲಿಕಾರ್ಮಿಕರಿಗೆ ಕೆಲಸ ಮತ್ತು ಜಾಬ್ ಕಾರ್ಡ್ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ ನರೇಗಾ ಎಡಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು,ಬಜೆಟ್ ಅಧಿವೇಶನದಲ್ಲಿ ಒಣಗಿ ಹೋದ ತೊಗರಿಗೆ ಪರಿಹಾರ ಘೋಷಿಸಬೇಕು, ಅರಣ್ಯ ಭೂಮಿ ಅನೇಕ ವರ್ಷಗಳಿಂದ ಸಾಗುವಳಿದಾರರ ಬದುಕು ಕಟ್ಟಿಕೊಂಡಿದ್ದು ಅದೇ ಭೂಮಿ ಸಾಗುವಳಿ


ಉದಯವಾಹಿನಿ ಚಿತ್ರ

ಹಕ್ಕುಪತ್ರ ನೀಡಬೇಕು, ಗ್ರಾಪಂ ಪಿಡಿಓ ಕೂಲಿ ಕಾರ್ಮಿಕರಿಗೆ ಜಾಬ್ ಕಾರ್ಡ್ ನೀಡಬೇಕು ವಲಸಿ ಹೋಗುವವರಿಗೆ ಉದ್ಯೋಗ ಖಾತ್ರಿ ಯೋಜನೆ ಕೆಲಸ ನೀಡಬೇಕು,ಕಲಬುರ್ಗಿ ಜಿಲ್ಲೆಗೆ ವಿಶೇಷ ಪ್ಯಾಕೇಜ್ ಘೋಷಿಸಿ ಪ್ರತಿ ಏಕರೆಗೆ 25ಸಾವಿರ ರೂಪಾಯಿ ಪರಿಹಾರ ನೀಡಬೇಕು.

ಕೇರಳದ ಮಾದರಿಯಲ್ಲಿ ಕೂಲಿ ಕಾರ್ಮಿಕರಿಗೆ ಕೂಲಿ ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜಾಫರ್ ಖಾನ್ ಮಿರಿಯಾಣ, ಪ್ರಭು ಪ್ಯಾರಾಬದ್ಧಿ, ಸಿದ್ದಲಿಂಗಯ್ಯ ಸ್ವಾಮಿಯಂಪಳ್ಳಿ, ಗೋಪಾಲ ಪೂಜಾರಿ, ಹಣಮಂತ ಭೋವಿ ಸೇರಿದಂತೆ ಅನೇಕರಿದ್ದರು.

# ಸಿದ್ದುರವರು ಕಾಂಗ್ರೇಸ್ ಪಕ್ಷದ ಕೊನೆ ಸಿಎಂ: ಕಾರಜೋಳ ವ್ಯಂಗ್ಯ

• ಉದಯವಾಹಿನಿ, ಬೀದರ್

ಕಾಂಗ್ರೇಸ್ ಪಕ್ಷದಿಂದ ರಾಜ್ಯದಲ್ಲಿ ಸಿದ್ದರಾಮಯ್ಯನವರೇ ಕೊನೆ ಮುಖ್ಯಮಂತ್ರಿ ಎಂದು ಚಿತ್ರದುರ್ಗದ ಸಂಸದರು ಹಾಗೂ ಮಾಜಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ವ್ಯಂಗ್ಯವಾಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ವಿಜಯನಗರ ಸಾಮ್ರಾಜ್ಯದ ಕೊನೆಯ ಅರಸ ಅಳಿಯ ರಾಮರಾಯ ಆಗಿದ್ದರು. ಅದೇ ತರಹ ಸಿದ್ದರಾಮಯ್ಯನವರೇ ಕಡೆಯ ಕಾಂಗ್ರೆಸ್ಸಿನ ಸಿಎಂ ಎಂದು ಕುಟುಕಿದರು.

ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ ಅವರು ಮುಖ್ಯಮಂತ್ರಿ ಕುರ್ಚಿಗಾಗಿ ನಡೆಸುತ್ತಿರುವ ಕಾದಾಟದಲ್ಲಿ ರಾಜ್ಯದಲ್ಲಿ ಆಡಳಿತ ಸಂಪೂರ್ಣ ಕುಸಿದಿದೆ. ಮುಖ್ಯಮಂತ್ರಿ ಆಗಲು ಡಿ.ಕೆ. ಶಿವಕುಮಾರ ಅವರು ಎರಡು ವರ್ಷಗಳಿಂದ ಪ್ರಯತ್ನಿಸುತ್ತಿದ್ದಾರೆ. ಅವರು ಸಿಎಂ ಆಗಬಾರದು ಎಂದು ಸಿದ್ದರಾಮಯ್ಯನವರ ಬೆಂಬಲಿಗರು ನಿರಂತರ ಹೋರಾಟ ಮಾಡುತ್ತಿದ್ದಾರೆ. ಇವರಿಬ್ಬರ ಜಗಳದಲ್ಲಿ ಆಡಳಿತ ಕುಸಿದು ಹೋಗಿದೆ



ಉದಯವಾಹಿನಿ ಚಿತ್ರ

ಎಂದು ಆರೋಪಿಸಿದರು.

ಡಿ.ಕೆ. ಶಿವಕುಮಾರ ಅವರಿಗೆ ಜ್ಯೋತಿಷ ಕೇಳುವುದು ಹವ್ಯಾಸ ಆಗಿದೆ. ಅದನ್ನು ನಂಬಿ ನಾನು ಮುಖ್ಯಮಂತ್ರಿ ಆಗುತ್ತೇನೆ ಎಂದು ಭಾವಿಸಿದ್ದಾರೆ. ಆದರೆ, ಅವರು ತಿಪ್ಪರಲಾಗ ಹಾಕಿದರೂ ಕಾಂಗ್ರೆಸ್‌ನವರು ಶಿವಕುಮಾರ ಅವರನ್ನು ಮುಖ್ಯಮಂತ್ರಿ ಮಾಡುವುದಿಲ್ಲ ಎಂದವರು ಹೇಳಿದರು.

ರಾಜ್ಯ ಬಿಜೆಪಿ ಮುಖ್ಯ ವಕ್ತಾರ ಅಶ್ವತ್ಥನಾರಾಯಣ ಮಾತನಾಡಿ, ರಾಜ್ಯ ಸರ್ಕಾರ ಮತ್ತೆ ಈ ವರ್ಷದ ಬಜೆಟ್‌ನಲ್ಲೂ ಸಹ ಪರಿಶಿಷ್ಟರ ಪಾಲಿನ ಎಸ್.ಈ.ಪಿ, ಟಿ.ಎಸ್.ಪಿ ಹಣ ಬಳಿಕೆ ಮಾಡಿದೆ. ಇದು ದುರದೃಷ್ಟಕರ. ಹಾಗಾಗಿ ಬಿಜೆಪಿ ವಿದನ ಸೌಧದ ಒಳಗೂ ಹಾಗೂ

> ರಾಜ್ಯ ಬಿಜೆಪಿಯಲ್ಲಿ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳಿವೆ. ಕೆಲವೇ ದಿನಗಳಲ್ಲಿ ಪಕ್ಷದಲ್ಲಿನ ಎಲ್ಲಾ ಸಮಸ್ಯೆ ಬಗೆಹರಿಯಲಿವೆ. ಮೂರು ರಾಜ್ಯಗಳ ಚುನಾವಣೆ ಇದ್ದದ್ದರಿಂದ ರಾಷ್ಟ್ರೀಯ ನಾಯಕರಿಗೆ ಕರ್ನಾಟಕದಲ್ಲಿನ ಗೊಂದಲ ನಿವಾರಿಸಲು ಕಾಲಾವಕಾಶ ಸಿಕ್ಕಿರಲಿಲ್ಲ. ಈಗ ಚುನಾವಣೆಗಳು ಮುಗಿದಿವೆ. ಎಲ್ಲಾ ರೀತಿಯ ಗೊಂದಲಗಳನ್ನು ನಿವಾರಿಸುತ್ತಾರೆ. ಪುನಃ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲಿದೆ
>
> – ಗೋವಿಂದ ಕಾರಜೋಳ, ಮಾಜಿ ಸಿಎಂ

ಹೊರಗೂ ಹೋರಾಟ ನಡೆಸುತ್ತಿದೆ. ಬೀದರ್‌ನಲ್ಲಿ ಸರ್ಕಾರದ ವಿರುದ್ಧ ಹೋರಾಟ ಕೈಗೊಂಡು ಯಾವುದೇ ಕಾರಣಕ್ಕೂ ಎಸ್.ಈ.ಪಿ ಹಾಗೂ ಟಿ.ಎಸ್.ಪಿ ಹಣ ಅನ್ಯ ಕಾರ್ಯಗಳಿಗೆ ಬಳಿಸದಂತೆ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮುಖೇನ ಮನವಿ ಸಲ್ಲಿಸಲಾಗಿದೆ ಎಂದರು.

# ತಾಯಿ ಮರಣ, ಶಿಶು ಮರಣ ನಿಯಂತ್ರಿಸುವತ್ತ ಕಾರ್ಯೋನ್ಮುಖರಾಗಿ

## ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಸೂಚನೆ

• ಉದಯವಾಹಿನಿ, ಚಿತ್ರದುರ್ಗ

ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ತರಬೇತಿಯ ಪ್ರಯೋಜನ ಪಡೆದು ತಾಯಿ ಮರಣ, ಶಿಶುಮರಣ ನಿಯಂತ್ರಿಸುವತ್ತ ಕಾರ್ಯೋನ್ಮುಖರಾಗಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ತಿಳಿಸಿದರು. ನಗರದ ಐಶ್ವರ್ಯ ಫೋರ್ಟ್ ಹೋಟೆಲ್ ಸಭಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಬೆಂಗಳೂರು ಕೆಎಚ್‌ಪಿಟಿ ಸಹಯೋಗದೊಂದಿಗೆ ಐಸಿಎಂ ಆರ್‌ಕಾರ್ ಪ್ರಾಜೆಕ್ಟ್ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ತರಬೇತಿ ಕಾರ್ಯಗಾರದಲ್ಲಿ ತಾಯಿ ಮರಣ,


ಉದಯವಾಹಿನಿ ಚಿತ್ರ

ಶಿಶುಮರಣ ಕುರಿತು ಸಮಗ್ರವಾಗಿ ಚರ್ಚೆಯಾಗಲಿ ಮಕ್ಕಳ ಅಪೌಷ್ಟಿಕತೆ ಸರಿದೂಗಿಸುವಿಕೆ ನಿಟ್ಟಿನಲ್ಲಿ ಕ್ಷೇತ್ರ ಮಟ್ಟದ ವೈದ್ಯಾಧಿಕಾರಿಗಳು, ಕ್ಷೇತ್ರ ಮಟ್ಟದಲ್ಲಿ ಕಾರ್ಯನಿರ್ವಹಿಸುವ ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ಆಶಾ ಕಾರ್ಯಕರ್ತೆಯರು, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ತಂಡದಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಈ ತರಬೇತಿಯ ಪ್ರಯೋಜನ ಪಡೆದು ಶಿಶು ಮರಣ ದರ, ತಾಯಿ ಮರಣ ದರ ನಿಯಂತ್ರಿಸಲು ಸೂಕ್ತ ಯೋಜನೆ ತಯಾರಿಸಿ ಎಂದರು.

> ರಾಜ್ಯಮಟ್ಟದಿಂದ ಕಟ್ಟ ಕಡೆಯ ಫಲಾನುಭವಿಯವರೆಗೂ ಎಲ್ಲಾರೂ ಈ ಯೋಜನೆಯ ಭಾಗಿದಾರರಾಗಿರುತ್ತೀರಾ. ಕಟ್ಟ ಕಡೆಯ ಫಲಾನುಭವಿಗೂ ಸೇವೆಯ ಸದುಪಯೋಗ ತಲುಪಬೇಕು. ಈ ಪೂರ್ವ ಸಿದ್ಧತಾ ತರಬೇತಿಯಲ್ಲಿ ಕ್ಷೇತ್ರ ಮಟ್ಟದಲ್ಲಿ ತಮಗೆ ಕಂಡುಬರುವ ಸಮಸ್ಯೆಗಳು, ಅನುಮಾನಗಳು, ಪ್ರಶ್ನೆಗಳನ್ನು ಚರ್ಚಿಸುವ ಮೂಲಕ ಉತ್ತರ ಕಂಡುಕೊಳ್ಳಿ. ಮಕ್ಕಳಲ್ಲಿ ಕಂಡುಬರುವ ಅಪೌಷ್ಟಿಕತೆ ತೊಲಗಿಸೋಣ ತಾಯಿ ಮರಣ, ಶಿಶು ಮರಣ ತಪ್ಪಿಸೋಣ
>
> – ಡಾ. ಡಿ.ಎಂ.ಅಭಿನವ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ

ಸೆಂಟ್ ಜಾನ್ಸ್ ಆಸ್ಪತ್ರೆಯ ಡಾ.ಆಯಿಷಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ವೈದ್ಯರಾದ ಡಾ.ಜ್ಯೋತಿ, ಡಾ.ಶಶಿಕಿರಣ್, ಚಿತ್ರದುರ್ಗ ಐಸಿಎಂಆರ್ ಪ್ರಾಜೆಕ್ಟ್‌ನ ಸಂಯೋಜಕಿ ಬಿ.ವೀಣಾ, ಪೋಷಣ್ ಅಭಿಯಾನದ ಜಿಲ್ಲಾ ವ್ಯವಸ್ಥಾಪಕ ಕರ್ಕಪ್ಪ ಮೇಟಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಬಿ.ಜಾನಕಿ, ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕರು, ಆಶಾ ಕಾರ್ಯಕರ್ತೆಯರು, ಕೆಎಚ್‌ಪಿಟಿ ಮೇಲ್ವಿಚಾರಕರು ಇದ್ದರು.

# ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ

• ಉದಯವಾಹಿನಿ, ಚಿತ್ರದುರ್ಗ

ಹೊಸದುರ್ಗ ತಾಲ್ಲೂಕು ಶ್ರೀರಾಂಪುರ ಹೋಬಳಿ ಶ್ರೀರಾಂಪುರ ಹಾಗೂ ಕುರುಬರಹಳ್ಳಿ ಕಂದಾಯ ವೃತ್ತಕ್ಕೆ ಮತ್ತು ಕಸಬಾ ಹೋಬಳಿ ಹುಣವಿನಡು ಕಂದಾಯ ವೃತ್ತಕ್ಕೆ ಹೆಚ್ಚುವರಿ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಅಭ್ಯರ್ಥಿಯು ಅರ್ಜಿ ಸಲ್ಲಿಸಲು ಕಡೆಯ ದಿನಾಂಕದಂದು 25 ವರ್ಷ ಪೂರ್ಣಗೊಂಡಿರಬೇಕು. 45ವರ್ಷ ವಯೋಮಿತಿ ಒಳಗಿರಬೇಕು ಎಸ್‌ಎಸ್‌ಎಲ್‌ಸಿ, ವರ್ಗಾವಣೆ ಪ್ರಮಾಣ ಪತ್ರ, ಶಾಲಾ ದಾಖಲಾತಿ ಪ್ರಮಾಣ ಪತ್ರದಲ್ಲಿ ದಾಖಲಿಸಿರುವ ಜನ್ಮ ದಿನಾಂಕವನ್ನು ಮಾತ್ರವೇ ಪರಿಗಣಿಸಲಾಗುವುದು. ಅಭ್ಯರ್ಥಿಯು ಕನ್ನಡ ಓದುವ, ಬರೆಯುವ ಜ್ಞಾನವುಳ್ಳ ಅಕ್ಷರಸ್ಥರಾಗಿರುವ ಬಗ್ಗೆ ಸೂಕ್ತ ದಾಖಲೆಗಳನ್ನು ಸಲ್ಲಿಸಬೇಕು. ಅರ್ಜಿಯನ್ನು ನಿಗಧಿತ ನಮೂನೆ–1ರಲ್ಲಿ ಸಲ್ಲಿಸಬೇಕು. ಗ್ರಾಮ ಸಹಾಯಕ ಹುದ್ದೆಯ ತಾತ್ಕಾಲಿಕ ಹುದ್ದೆಯಾಗಿದ್ದು, ಸರ್ಕಾರದಿಂದ ಕಾಲಕಾಲಕ್ಕೆ ನಿಗಧಿ ಆಗುವಂತಹ ಗೌರವಧನ ಪಾವತಿಸಲಾಗುವುದು.

ಗ್ರಾಮ ಸಹಾಯಕ ಹುದ್ದೆ ನೇಮಕಾತಿಗಾಗಿ ಈ ಹಿಂದೆ ಈ ಕಂದಾಯ ವೃತ್ತಕ್ಕೆ ಸೇರಿದ ಗ್ರಾಮಗಳಲ್ಲಿ ಕರ್ತವ್ಯ ನಿರ್ವಹಿಸಿದ ಕೆಳಮಟ್ಟದ ಗ್ರಾಮ ನೌಕರರ ವಂಶಸ್ಥರಿಗೆ ಆದ್ಯತೆ ನೀಡಲಾಗುವುದು.

ಕೆಳ ಮಟ್ಟದ ನೌಕರರ ವಂಶಸ್ಥರೆಂಬುವ ಬಗ್ಗೆ ಸೂಕ್ತ ದಾಖಲೆ ಲಗತ್ತಿಸುವುದು. ತಳವಾರ, ತೋಟಿಗಳು, ನೀರಗಂಟಿಗಳು, ವಾಲೀಕರ, ಮಹರ್ಸ್, ಬರ್ಕರ್ಸ್, ನೀರಾಡಿಗಳು, ಬುಲಾತಿದರ್ಸ್, ವೆಟ್ಟಿ, ಊರ ಗಾನಿಸ್, ಕುಳವಾಡಿಕೆ ಈ ಕುಟುಂಬದವರಿಗೆ




ಮೊದಲ ಆದ್ಯತೆ ನೀಡುವುದು. ಒಂದು ವೇಳೆ ಈ ವರ್ಗದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಇತರೆ ವರ್ಗದ ಅಭ್ಯರ್ಥಿಗಳಿಗೆ ಪರಿಗಣಿಸಲಾಗುವುದು.

ಗ್ರಾಮ ಸಹಾಯಕ ಹುದ್ದೆಗೆ ಆಯ್ಕೆ ಮಾಡುವ ಸಂದರ್ಭದಲ್ಲಿ ಮೊದಲಿಗೆ ಮೀಸಲಾತಿಯನ್ನು ಪರಿಗಣಿಸಲಾಗುವುದು. ನಂತರ ವಿದ್ಯಾರ್ಹತೆಯ ಮಾನದಂಡತೆಯ ಹೆಚ್ಚಿನ ವಿದ್ಯಾಭ್ಯಾಸ ಹೊಂದಿರುವ ಮತ್ತು ಹೆಚ್ಚಿನ ಅಂಕಗಳಿಸಿರುವ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು. ಗ್ರಾಮ ಸಹಾಯಕನು ಗ್ರಾಮ ಆಡಳಿತ ಅಧಿಕಾರಿಗೆ ಎಲ್ಲ ಕೆಲಸ ಕಾರ್ಯಗಳಲ್ಲಿ ಸಹಾಯಕನಾಗಿ ಕೆಲಸ ನಿರ್ವಹಿಸಬೇಕಿರುತ್ತದೆ. ಗ್ರಾಮ ಸಹಾಯಕರಿಗೆ ಕೂಡಾ ಕಂಪ್ಯೂಟರ್ ತಂತ್ರಾಂಶದ ಜ್ಞಾನ ಹೊಂದಿರುವ ಅವಶ್ಯಕತೆ ಇರುತ್ತದೆ. ಅಭ್ಯರ್ಥಿಗಳು ಅರ್ಜಿಯೊಂದಿಗೆ ಎಲ್ಲಾ ಪ್ರಮಾಣ ಪತ್ರಗಳು ಮತ್ತು ಅಂಕಪಟ್ಟಿಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ತಹಶೀಲ್ದಾರ್ ಅವರಿಂದ ನಿಗಧಿತ ಅವಧಿಯೊಳಗೆ ಪಡೆದ ಜಾತಿ ಮತ್ತು ಆದಾಯ ದೃಢೀಕರಣ ಪತ್ರ ಲಗತ್ತಿಸುವುದು. ಅಭ್ಯರ್ಥಿಯು ಕಂದಾಯ ವೃತ್ತದ ವ್ಯಾಪ್ತಿಯ ಖಾಯಂ ನಿವಾಸಿ ಆಗಿರಬೇಕು. ಸ್ಥಳೀಯ ವಾಸಿ ಎಂಬುದರ ನಿಖರತೆಗಾಗಿ ಪಡಿತರ ಚೀಟಿ ನಕಲು, ಸ್ಥಳೀಯ ಅಭ್ಯರ್ಥಿ ಎಂಬ ಬಗ್ಗೆ ದೃಢೀಕರಣ, ವಂಶವೃಕ್ಷ ಪಡೆದು ಸಲ್ಲಿಸುವುದು. ಗ್ರಾಮ ಸಹಾಯಕರು ಚುನಾಣೆ ಹಾಗೂ ಇನ್ನಿತರೆ ಕೆಲಸ ಕಾರ್ಯಗಳಲ್ಲಿ ದೈಹಿಕ ಶ್ರಮವಹಿಸಿ ಕಾರ್ಯನಿರ್ವಹಿಸಬೇಕಿರುವುದರಿಂದ ದೈಹಿಕವಾಗಿ ಸಶಕ್ತವಾಗಿರುವ ಅವಶ್ಯಕತೆ ಇರುವುದರಿಂದ ಅಭ್ಯರ್ಥಿಯು ದೈಹಿಕ ಶ್ರಮಿಕ ಕೆಲಸ ನಿರ್ವಹಿಸಲು ಸದೃಢವಾಗಿರುವ ಬಗ್ಗೆ ಸ್ಥಳೀಯ ಸರ್ಕಾರಿ ವೈದ್ಯರಿಂದ ದೈಹಿಕ ಧೃಢತೆ ವೈದ್ಯಕೀಯ ಪ್ರಮಾಣ ಪತ್ರ ಪಡೆದು ಸಲ್ಲಿಸುವುದು. ಅಭ್ಯರ್ಥಿಯು ದೈಹಿಕವಾಗಿ ಹಾಗೂ ಮಾನಸಿಕವಾಗಿ ಆರೋಗ್ಯವಂತನಾಗಿರಬೇಕು. ನೇಮಕಾತಿ ಹೊಂದುವ ಹುದ್ದೆಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನು ಉಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತನಾಗಿರಬೇಕು. ಅಭ್ಯರ್ಥಿಯು ಯಾವುದೇ ಕ್ರಿಮಿನಲ್ ಪ್ರಕರಣ ಹಿನ್ನಲೆಯುಳ್ಳವರಾಗಿರಬಾರದು. ಈ ಬಗ್ಗೆ ಸ್ಥಳೀಯ ಪೊಲೀಸ್ ಇಲಾಖೆಯಿಂದ ದೃಢೀಕರಣ ಪತ್ರ ಪಡೆದು ಲಗತ್ತಿಸುವುದು.

ಅಭ್ಯರ್ಥಿಯ ಅರ್ಹತೆಯ ಆಧಾರದ ಮೇಲೆ ಸಂದರ್ಶನ ನಡೆಸಿ ಅಂತಿಮಗೊಳಿಸಲಾಗುವುದು. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರವು ಹೊಂದಿರುತ್ತದೆ. ಹಾಗೂ ನೇಮಕಾತಿಯು ಮೇಲ್ಮನವಿ ಪ್ರಾಧಿಕಾರಗಳಾದ ಸರ್ಕಾರ ಹಾಗೂ ನ್ಯಾಯಾಲಯಗಳ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂದು ಹೊಸದುರ್ಗ ತಾಲ್ಲೂಕು ತಹಶೀಲ್ದಾರ್ ತಿಳಿಸಿದ್ದಾರೆ.

# ಮಾತೃ ಆರಾಧನೆ ಸಂಸ್ಕೃತಿಯ ಜೀವಾಳ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಸವಕಲ್ಯಾಣ

ತಾಯಿಯನ್ನು ಉಚ್ಚಸ್ತರದಲ್ಲಿಟ್ಟು ಗೌರವಿಸುವುದು, ಆರಾಧಿಸುವುದು, ಅವಳ ಸೇವೆ ಮಾಡುವುದು ನಮ್ಮ ಭಾರತೀಯ ಸಂಸ್ಕೃತಿಯ ಜೀವಾಳ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲ್ಲೂಕಿನ ಹಾರಕೂಡ ಶ್ರೀಮಠದಲ್ಲಿ ಗದಲೇಗಾಂವ ಗ್ರಾಮದ ದೇಗಾಂವ ಪರಿವಾರದ ಹೆಣ್ಣು ಮಕ್ಕಳಿಂದ ಆಯೋಜಿಸಿದ ಗುರುವಂದನೆ ಹಾಗೂ 777ನೇ ತುಲಾಭಾರ ಸೇವೆ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಭಾರತೀಯರು ಜಗತ್ತನ್ನು ತಾಯಿಯಲ್ಲಿ ಕಂಡವರು, ತಾಯಿಯನ್ನು ಜಗತ್ತಿನಲ್ಲಿ ಕಂಡವರು ಹಾಗಾಗಿ ನೀರು ನಮಗೆ ತಾಯಿಯಾದಳು, ಭೂಮಿ ನಮಗೆ ತಾಯಿಯಾದಳು, ದೇಶ ನಮಗೆ ತಾಯಿ.

ಇಡೀ ಪ್ರಕೃತಿಯೇ ಹೆತ್ತಮ್ಮನ ರೂಪದಲ್ಲಿ ಕಂಡು ಮಾತೆಯ ಸ್ವರೂಪ ಕಂಡವರು ಭಾರತೀಯರು. ಇಂತಹ ಶ್ರೇಷ್ಠ ಸಂಸ್ಕೃತಿಯ ವಾರಸುದಾರರು ನಾವು ಎನ್ನುವ ಹೆಮ್ಮೆ ನಮಗಿರಬೇಕು. ದೇವರನ್ನು ಮೀರಿದ ಸ್ಥಾನದಲ್ಲಿ ತಾಯಿಯನ್ನು ಕಂಡಂತಹ ನಮ್ಮ ಸಮಾಜ ಈ ವಿಷಯದಲ್ಲಿ ಗೌಣವಾಗುತ್ತಿರುವುದು ನಾಗರಿಕತೆಗೆ ಶೋಭೆ ತರುವಂತಹದಲ್ಲ. ತಾಯಿಯನ್ನು,

> ಗದಲೇಗಾಂವ ಬಿ. ಗ್ರಾಮದ ದೇಗಾಂವ ಪರಿವಾರದ ಹೆಣ್ಣು ಮಕ್ಕಳ ಗುರು ನಿಷ್ಠೆ ಉಲ್ಲೇಖನೀಯವಾಗಿದ್ದು ಎಲ್ಲಾರಿಗೂ ಹಾರಕೂಡದ ಚನ್ನಬಸವ ಶಿವಯೋಗಿಗಳು ಶಾಶ್ವತ ಶ್ರೀರಕ್ಷೆಯ ಕೃಪೆ ಹರಸಿ ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು.

ಸ್ತ್ರೀಯರನ್ನು ಎತ್ತರದ ಸ್ಥಾನದಲ್ಲಿಟ್ಟು ನೋಡಿದ ಭಾರತ ಯಾವತ್ತೂ ವಿಶ್ವ ಮಾತೆ ಎಂಬುದನ್ನು ನಾವ್ಯಾರು ಅಲ್ಲಗಳೆಯುವಂತಿಲ್ಲ ಎಂದರು.

ವಿಲಾಸ ಪಾಟೀಲ, ವಿಜಯಲಕ್ಷ್ಮಿ ಬಿರಾದಾರ ಮಾತನಾಡಿದರು. ಮಲ್ಲಿನಾಥ ಹಿರೇಮಠ ಹಾರಕೂಡ, ಗೋಪಾಲರಾವ ದೇಗಾಂವ, ಹೇಮಲತಾ ಹಿರೇಮಠ, ಬಾಬು ಹೊನ್ನಾ ನಾಯಕ, ಶಿವರಾಜ ಪಾಟೀಲ ಮುಂತಾದವರು ಉಪಸ್ಥಿತರಿದ್ದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ನಡೆಸಿಕೊಟ್ಟರು. ಸಿಂಧೂ ಪಾಟೀಲ ಮತ್ತು ಬಿಂದು ಹರಸೂರ ಸಂಗೀತ ಗಾಯನ ನಡೆಸಿಕೊಟ್ಟರು. ಗುರು ದೇಗಾಂವ ಗದಲೇಗಾಂವ ಬಿ. ನಿರೂಪಣೆ ಮಾಡಿದರು.

# ವಿಟ್ಲ ಮಾಡತ್ತಡ್ಕದಲ್ಲಿ ಭಾರೀ ಸ್ಫೋಟ –15ಕ್ಕೂ ಅಧಿಕ ಮನೆಗಳಿಗೆ ಹಾನಿ

## 4ಕಿ.ಮೀ. ವ್ಯಾಪ್ತಿಯ ಮನೆಗಳಿಗೆ ಹಾನಿಯಾಗಿದ್ದು, ನೂರು ಮೀಟರು ದೂರದಲ್ಲಿರುವ ಎರಡು ಮನೆಗಳ ಛಾವಣಿ, ಕಿಟಕಿ, ವಸ್ತುಗಳು ಜಖಂ

• ಉದಯವಾಹಿನಿ, ಬಂಟ್ವಾಳ

ತಾಲ್ಲೂಕಿನ ವಿಟ್ಲಮುಡ್ನೂರು ಗ್ರಾಮದ ಮಾಡತ್ತಡ್ಕದ ಕ್ವಾರಿಯಲ್ಲಿ ಕಲ್ಲು ಒಡೆಯುವುದಕ್ಕಾಗಿ ತಂದ ಸ್ಫೋಟಕಗಳು ಬಿಸಿಲಿನ ತೀವ್ರತೆಗೆ ಏಕಾಏಕಿ ಸ್ಫೋಟಗೊಂಡಿದ್ದು, ವಿಟ್ಲ ಪೇಟೆ ಸೇರಿ ಆಸುಪಾಸಿನ 5ಗ್ರಾಮಗಳ ಜನರನ್ನು ಬೆಚ್ಚಿಬೀಳಿಸಿದೆ. ಸುಮಾರು 4ಕಿ.ಮೀ. ವ್ಯಾಪ್ತಿಯ ಮನೆಗಳಿಗೆ ಹಾನಿಯಾಗಿದ್ದು, ನೂರು ಮೀಟರು ದೂರದಲ್ಲಿರುವ ಎರಡು ಮನೆಗಳ ಛಾವಣಿ, ಕಿಟಕಿ ಸೇರಿ ಹಲವು ವಸ್ತುಗಳು ಜಖಂಗೊಂಡಿದೆ.

ಮಾಡತ್ತಡ್ಕ ಎನ್.ಎಸ್. ಕ್ರೆಶರ್ ಗೇ ಸೇರಿದ ಕ್ವಾರಿಯ ಸಮೀಪದಲ್ಲೇ ಘಟನೆ ನಡೆದಿದ್ದು, ಕಲ್ಲಿನ ರಾಶಿಯ ನಡುವಿನಲ್ಲಿ ಒಂದು ಬಾಕ್ಸ್ ಡೆಟೋನೇಟರ್ಸ್, 200 ಜೆಲಿಟಿನ್ ಕಡ್ಡಿಗಳನ್ನು ಒಟ್ಟಿಗೇ ಇಡಲಾಗಿತ್ತೆನ್ನಲಾಗಿದೆ. ಸುಮಾರ್ 1.30ರ ಸುಮಾರಿಗೆ ಏಕಾಏಕಿ ಸ್ಫೋಟಗೊಂಡಿದೆ. ಸ್ಫೋಟ


ಉದಯವಾಹಿನಿ ಚಿತ್ರ

**ಮನೆಯ ಪಿಲ್ಲರ್ ಗಳು ಬಿರುಕು**

ನಡೆದ ಸ್ಥಳದಿಂದ ಸುಮಾರು ನೂರು ಮೀಟರ್ ದೂರದಲ್ಲಿದ್ದ ಈಶ್ವರ ನಾಯ್ಕ ಹಾಗೂ ಅವರ ಪುತ್ರ ವಸಂತ ಮೋಹನ್ ಅವರಿಗೆ ಸೇರಿದ ಮನೆಗಳಿಗೆ ಹಾನಿಯಾಗಿದೆ. 1ಕಿ. ಮೀ. ಆಸುಪಾಸಿನ ಸುಮಾರು 15ಕ್ಕೂ ಅಧಿಕ ಮನೆಗಳಿಗೆ ಹಾನಿಯಾಗಿದೆ. ಮನೆಗಳಲ್ಲಿನ ವಸ್ತುಗಳು ಎಲ್ಲೆಂದರಲ್ಲಿ ಬಿದ್ದು, ಹೆಂಚಿನ ಚಾವಣಿಯ ಕಟ್ಟಡಗಳಲ್ಲಿ ಹೆಂಚು ಸ್ಥಾನಪಲ್ಲಟವಾಗಿದೆ.

ಕಿಟಕಿಯ ಗಾಜು ಪುಡಿಯಾಗಿದ್ದು, ಛಾವಣಿಗೆ ಹಾಸಿದ ಸಿಮೆಂಟ್ ಶೀಟ್ ಚೆಲ್ಲಾಪಿಲ್ಲಿಯಾಗಿದೆ. ಸೀಲಿಂಗ್‌ಗೆ ಹಾಸು ತುಂಡಾಗಿ ಕೆಳಗೆ ಬಿದ್ದಿದೆ.

**ದೂರು ಪರಿಶೀಲನೆಗೆ ಸೂಚನೆ**

ವಸತಿ ಪರಿಸರದಿಂದ ಸುಮಾರು 20 ಮೀಟರ್ ನಲ್ಲಿ ಗಣಿಗಾರಿಕೆ ನಡೆಸಲಾಗುತ್ತಿದೆ. ಹಲವು ಸಲ ದೂರು ನೀಡಿದರೂ, ಅಧಿಕಾರಿಗಳು ಸಂಬಂಧವೇ ಇಲ್ಲದಂತೆ ಇದ್ದಾರೆ. ದೂರು ನೀಡಿದರೆ ನಮಗೆ ಸೇರಿದ್ದಲ್ಲ ಎಂದು ಪೊಲೀಸರು ಜಾರಿಕೊಳ್ಳುತ್ತಾರೆ ಎಂದು ಸ್ಥಳೀಯರು ಆರೋಪಿಸಿದರು. ಈ ಸಂದರ್ಭ ಪೊಲೀಸ್ ಅಧೀಕ್ಷಕ ಯತೀಶ್ ಅವರು 20 ಮೀಟರ್ ದೂರದಲ್ಲಿರುವ ಗಣಿಯ ಮಾಹಿತಿಯನ್ನು ಪಡೆದುಕೊಂಡು ವರದಿಯನ್ನು ನೀಡಿ ಎಂದು ವಿಟ್ಲ ಪೊಲೀಸ್ ನಿರೀಕ್ಷಕರಿಗೆ ಆದೇಶಿದ್ದಾರೆ. ವರದಿಯನ್ನು ಜಿಲ್ಲಾಧಿಕಾರಿಗಳಿಗೆ ಕಳುಹಿಸಿ ಅಗತ್ಯ ಕ್ರಮಕ್ಕೆ ಶಿಫಾರಸು ಮಾಡುತ್ತೇವೆ ಎಂದರು.

ಗೋಡೆಗಡಿಯಾರ ಕೆಲಸ ನಿಲ್ಲಿಸಿದೆ. ಕೆಲವು ಮನೆಯ ಟಿವಿ ಕೆಲಸ ಮಾಡುತ್ತಿಲ್ಲ. ಮನೆಗಳ ಕಿಟಕಿ ಪ್ರೇಮ್ ತುಂಡಾಗಿ ಬಿದ್ದಿದೆ. ವಿಟ್ಲ ಪೇಟೆಯ ಹಲವು ಕಡೆಯಲ್ಲಿ ವಸ್ತುಗಳು ಕಪಾಟುಗಳಿಂದ ನೆಲಕ್ಕುರುಳಿದೆ.

ಮನೆಯ ಪಿಲ್ಲರ್ ಗಳು ಬಿರುಕು ಬಿಟ್ಟಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಕೋರೆ ಸಮೀಪದ ನಿರ್ಜನ ಪ್ರದೇಶದಲ್ಲಿ ಕಲ್ಲಿನ ರಾಶಿಯಿದ್ದು, ಇದರ ತಪ್ಪಲು ಪ್ರದೇಶದಲ್ಲಿ ಯಾರಿಗೂ ಕಾಣದ ರೀತಿಯಲ್ಲಿ ದಾಸ್ತಾನು ಇರಿಸಲಾಗಿದ್ದು, ಇದರ ಸ್ಫೋಟಕ್ಕೆ ಅಕ್ಕಪಕ್ಕದ ಬಯಲು ಪ್ರದೇಶದಲ್ಲಿದ್ದ ಮುಳಿ ಹುಲ್ಲು ಬೆಂಕಿಗೆ ಆಹುತಿಯಾಗಿದೆ. ದಾಸ್ತಾನು ಇಟ್ಟ ಜಾಗದಲ್ಲಿದ್ದ ಮರಗಳ ಎಲೆಗಳು ಸ್ಫೋಟದ ತೀವ್ರತೆಗೆ ನೆಲಕ್ಕುರುಳಿದೆ.

ಘಟನಾ ಸ್ಥಳಕ್ಕೆ ಪೊಲೀಸ್ ಅಧೀಕ್ಷಕ ಯತೀಶ್ ಎನ್., ಬಂಟ್ವಾಳ ತಹಶೀಲ್ದಾರ್ ಅರ್ಚನಾ ಭಟ್, ಕಂದಾಯ ನಿರೀಕ್ಷಕ ರವಿ ಎಂ.ಎನ್., ಸಹಾಯಕ

> ಕ್ವಾರಿಯಲ್ಲಿ ಕಲ್ಲು ಸ್ಫೋಟಿಸುವುದಕ್ಕೆ ತಂದಿದ್ದ ಸ್ಫೋಟಕಗಳನ್ನು ಇಟ್ಟು ಊಟಕ್ಕೆ ತೆರಳಿದ ಸಂದರ್ಭದಲ್ಲಿ ಬಿಸಿಲಿನ ತೀವ್ರತೆಗೆ ಸ್ಫೋಟಗೊಂಡಿದೆ. ಅಕ್ಕಮಕ್ಕದ ಮನೆಗಳಿಗೆ ಹಾನಿಯಾಗಿದ್ದು, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಸ್ಫೋಟಗಳನ್ನು ತಂದು ಬೇಜವಾಬ್ದಾರಿತನದಿಂದ ಇಟ್ಟು ಹೋದವರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಕಾನೂನು ಕ್ರಮ ಜರಗಿಸುತ್ತೇವೆ
>
> –ಯತೀಶ್ ಎನ್.ದ.ಕ.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಗಿರೀಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುಜಯ ಕೆ. ಗಣಿ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದರು.

# ಮಿನಿ ನ್ಯೂಸ್

## ಬಾಗಿಲು ಇಲ್ಲದ ಅಂಗನವಾಡಿ , ಕಣ್ಣು ಇಲ್ಲದ ಅಧಿಕಾರಿಗಳು ಮಕ್ಕಳಿಗಿಲ್ಲ ಸುರಕ್ಷತೆ

• ಉದಯವಾಹಿನಿ ಕಾರಟಗಿ


ಉದಯವಾಹಿನಿ ಚಿತ್ರ

ತಾಲ್ಲೂಕಿನ ತೊಂಡಿಹಾಳ ಕ್ಯಾಂಪ್ ನ 28ನೇ ಕಾಲುವೆಯಲ್ಲಿರುವ ಅಂಗನವಾಡಿ ಕೇಂದ್ರದ ಬಾಗಿಲು ಮುರಿದು ಸುಮಾರು ತಿಂಗಳ ಕಳೆದರೂ ಯಾವೊಬ್ಬ ಅಧಿಕಾರಿ ಇತ್ತ ಗಮನ ಹರಿಸುತ್ತಿಲ್ಲ. ಜೊತೆಗೆ ವಿದ್ಯುತ್ ಸಂಪರ್ಕ ಕೂಡ ಇಲ್ಲದಿರುವುದರರಿಂದ ಸುಮಾರು ಆರು ತಿಂಗಳಿನಿಂದ ಅಂಗನವಾಡಿಯ ಬಾಗಿಲು ಮುರಿದಿದ್ದು, ವಿದ್ಯುತ್ ಸಂಪರ್ಕ ಇಲ್ಲದಿರುವುದರಿಂದ ಮೂರು ತಿಂಗಳ ಹಿಂದೆಯೇ ಅಂಗನವಾಡಿ ಕೇಂದ್ರದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿಯ ಅಧಿಕಾರಿಗಳ ಭೇಟಿ ನೀಡಿ ರಿಪೇರಿ ಮಾಡಿಸಿ ಕೊಡುವುದಾಗಿ ಭರವಸೆ ನೀಡಿದ್ದರು.

ಆದರೂ ಇಲ್ಲಿಯವರಿಗೆ ಯಾವೊಬ್ಬ ಅಧಿಕಾರಿಗಳು ಈ ರಿಪೇರಿ ಕಾರ್ಯಕ್ಕೆ ಮುಂದಾಗಿಲ್ಲ. ಮಕ್ಕಳ ಹಿತ ದೃಷ್ಟಿಕೋನವನ್ನು ಇಟ್ಟುಕೊಂಡು ಸಂಬಂಧಪಟ್ಟ ಅಧಿಕಾರಿಗಳು ಇಂತಹ ಮೂಲಭೂತ ಸೌಕರ್ಯಗಳ ವಂಚಿತವಾಗಿರುವ ಅಂಗನವಾಡಿ ಕೇಂದ್ರಗಳನ್ನು ಗುರುತಿಸಿ, ಇತ್ತ ಗಮನ ಹರಿಸಿ ಈ ರಿಪೇರಿ ಕಾರ್ಯಕ್ಕೆ ಮುಂದಾಗಬೇಕು ಎಂದು ದಲಿತ ವಿಮೋಚನ ಸೇನೆಯ ತಾಲ್ಲೂಕ ಪ್ರಧಾನ ಕಾರ್ಯದರ್ಶಿ ಶರಣಪ್ಪ ವಣಿಗೇರಿ ಈ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಪತ್ರಿಕಾ ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ.

## ಕೃಷ್ಣಾ ನದಿಗೆ ಹಾರಿ ಮೂವರು ಮಕ್ಕಳೊಂದಿಗೆ ತಾಯಿ ಆತ್ಮಹತ್ಯೆ

• ಉದಯವಾಹಿನಿ, ಬೆಳಗಾವಿ

ಕೌಟುಂಬಿಕ ಕಲಹದಿಂದ ಮನನೊಂದು ಮೂವರು ಮಕ್ಕಳೊಂದಿಗೆ ನದಿಗೆ ಹಾರಿ ತಾಯಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮುಳವಾಡ ಬಳಿ ನಡೆದಿದೆ.ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಚಿಂಚಲಿ ಗ್ರಾಮದ ಶಾರದ ಢಾಲೆ(38), ಮಕ್ಕಳಾದ ಅನುಷಾ(10), ಅಮೃತಾ(14) ಮತ್ತು ಆದರ್ಶ (8) ಮೃತಪಟ್ಟವರು. ಪತಿ ಅಶೋಕ ಕೂಲಿ ಕೆಲಸ ಮಾಡುತ್ತಿದ್ದು, ಕುಡಿತದ ಚಟ ಹೊಂದಿದ್ದನು. ಈತನ ಕಿರುಕುಳ ಹಾಗೂ ಕೌಟುಂಬಿಕ ಕಲಹದಿಂದ ಮನನೊಂದಿದ್ದ ಶಾರದಾ ಅವರು ತನ್ನ ಮೂವರು ಮಕ್ಕಳನ್ನು ಮನೆಯಿಂದ ಕರೆದುಕೊಂಡು ರಾತ್ರಿ ಮುಳವಾಡದ ಕೃಷ್ಣಾನದಿ ಬಳಿ ತೆರಳಿ ಮೂವರು ಮಕ್ಕಳೊಂದಿಗೆ ನದಿಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಇದು ಯಾರ ಗಮನಕ್ಕೂ ಬಂದಿಲ್ಲ. ಬುಧವಾರ ಬೆಳಗಿನ ಜಾವ 4ಗಂಟೆ ಸುಮಾರಿನಲ್ಲಿ ಈ ಸುದ್ದಿ ತಿಳಿಯುತ್ತಿದಂತೆ ಕುಡಚಿ ಠಾಣೆ ಪೊಲೀಸರು ಹಾಗೂ ಅಗ್ನಿಶಾಮಕ ದಳ ಸ್ಥಳಕ್ಕೆ ಆಗಮಿಸಿ ಮೃತದೇಹಗಳಿಗಾಗಿ ಶೋಧ ನಡೆಸಿ ನಾಲ್ವರ ಮೃತದೇಹಗಳನ್ನು ಹೊರ ತೆಗೆದು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಪತಿಯ ಕಿರುಕುಳದಿಂದ ಬೇಸತ್ತು ಮಕ್ಕಳೊಂದಿಗೆ ಶಾರದಾ ಅವರು ಆತ್ಮಹತ್ಯೆ ಮಾಡಿಕೊಂಡಿರಬಹುದೆಂಬ ಶಂಕಿಸಲಾಗಿದೆ.ಈ ಬಗ್ಗೆ ಕುಡಚಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಶಾರದಾ ಅವರ ಪತಿ ಅಶೋಕನನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ರಿಕ್ಷಾ ಚಾಲಕ ಆತ್ಮಹತ್ಯೆ

• ಉದಯವಾಹಿನಿ, ಪುತ್ತೂರು

ಆಟೋ ರಿಕ್ಷಾ ಚಾಲಕರೊಬ್ಬರು ಮರವೊಂದಕ್ಕೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಪುತ್ತೂರು ತಾಲ್ಲೂಕಿನ ಪೆರಿಯತ್ತೋಡಿ ಎಂಬಲ್ಲಿಂದ ವರದಿಯಾಗಿದೆ. ಪೆರಿಯತ್ತೋಡಿ ನಿವಾಸಿ ದಿ.ಹುಕ್ರಪ್ಪ ಗೌಡ ಎಂಬರ ಪುತ್ರ ಕೃಷ್ಣ(40) ಆತ್ಮಹತ್ಯೆ ಮಾಡಿಕೊಂಡವರು.

ಆಟೋ ರಿಕ್ಷಾದಲ್ಲಿ ಶಾಲಾ ಮಕ್ಕಳನ್ನು ಕರೆದೊಯ್ಯುತ್ತಿದ್ದ ಈತ ಎಂದಿನಂತೆ ಮಕ್ಕಳನ್ನು ಶಾಲೆಗೆ ಬಿಟ್ಟು ಬಂದಿದ್ದರು. ಬಳಿಕ ಮನೆಯ ಸಮೀಪದಲ್ಲಿನ ಮರವೊಂದರ ಟೊಂಗೆಗೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಲಗಾರರ ಕಿರುಕುಳದಿಂದ ಆತ್ಮಹತ್ಯೆ ಮಾಡಿಕೊಂಡಿರುವುದಾಗಿ ಶಂಕೆ ವ್ಯಕ್ತವಾಗಿದೆ. ಮೃತರು ತಾಯಿ, ಮೂವರು ಸಹೋದರರು, ಮೂವರು ಸಹೋದರಿಯರನ್ನು ಅಗಲಿದ್ದಾರೆ. ಪುತ್ತೂರು ನಗರ ಪೊಲೀಸ್ ಠಾಣೆಯಲ್ಲಿ ಕೇಸು ದಾಖಲಾಗಿದೆ.

## ವ್ಯಕ್ತಿ ನೇಣಿಗೆ ಶರಣು

• ಉದಯವಾಹಿನಿ, ಚಿಟಗುಪ್ಪ

ಹೊಟ್ಟೆ ನೋವು ತಾಳದೆ ವ್ಯಕ್ತಿಯೊಬ್ಬ ತನ್ನ ಹೊಲದಲ್ಲಿ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಚಿಟಗುಪ್ಪ ತಾಲ್ಲೂಕಿನ ಉಡಬಾಳ ಗ್ರಾಮದಲ್ಲಿ ರವಿವಾರ ಜರುಗಿದೆ. ಗೋಪಾಲ (40) ತಂದೆ ಶಂಕರ ತನ್ನ ಹೊಲದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ . ಈ ಕುರಿತು ಚಿಟಗುಪ್ಪ ಪೊಲೀಸ್ ಠಾಣೆಯಲಿ ಪಕರಣ ದಾಖಲಾಗಿದೆ.

## ಬಜೆಟ್‌ನಲ್ಲಿ ಲಿಂಗತ್ವ ಅಲ್ಪಸಂಖ್ಯಾತರಿಗೆ 200ಕೋಟಿ ನೀಡಿ

• ಉದಯವಾಹಿನಿ, ಹೊಸಪೇಟೆ

2025–2026ನೇ ಸಾಲಿನ ರಾಜ್ಯ ಸರಕಾರದ ಬಜೆಟ್ ನಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ 200 ಕೋಟಿ ರೂ. ಮೀಸಲಿಡಬೇಕು ಎಂದು ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳುವಳಿಯ ರಾಜ್ಯ ಉಪಾಧ್ಯಕ್ಷರು ವೈಶಾಲಿ ಒತ್ತಾಯಿಸಿದರು. ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆಡಳಿತದಲ್ಲಿರುವ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ತಮ್ಮ ಪ್ರಣಾಳಿಕೆಯಲ್ಲಿ ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ವಾರ್ಷಿಕ 200 ಕೋಟಿ ರೂ. ಮೀಸಲಿಡುವುದಾಗಿ ತಿಳಿಸಿದೆ. ಆದರೆ ಅದು ಇನ್ನೂ ಜಾರಿಗೆ ತಂದಿಲ್ಲ. ಲಿಂಗತ್ವ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ ಸ್ಥಾಪಿಸುವುದಾಗಿ ಹೇಳಲಾಗಿತ್ತು. ಆದರೆ ಅದು ಸಹ ಇಲ್ಲಿಯವರೆಗೆ ಸ್ಥಾಪನೆ ಮಾಡಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ವಸತಿ ಸೌಲಭ್ಯ ನೀಡಬೇಕು. ನಮ್ಮ ಸಮುದಾಯದವರಿಗೆ ವಸತಿಗಾಗಿ, ನಾವು ಉದ್ಯಮಶೀಲತೆಯಲ್ಲಿ ತೊಡಗಿಸಿಕೊಳ್ಳಲು ಯೋಜನೆ ರೂಪಿಸಬೇಕು. ಇವಕ್ಕಾಗಿ ಪ್ರತಿ ಲಿಂಗತ್ವ, ಅಲ್ಪಸಂಖ್ಯಾತ ವ್ಯಕ್ತಿಗೆ 2 ಲಕ್ಷ ರೂ. ಆರ್ಥಿಕ ನೆರವು ನೀಡಲು ಬಜೆಟ್‌ನಲ್ಲಿ ಮೀಸಲಿಡಬೇಕು. ಉಚಿತ ಲಿಂಗ ಪರಿವರ್ತನೆ ಶಸ್ತ್ರ ಚಿಕಿತ್ಸೆ, ಶಸ್ತ್ರಚಿಕಿತ್ಸೆಯ ನಂತರ 6 ತಿಂಗಳ ಆರೈಕೆಯ ಬೆಂಬಲ ನೀಡಲು ಬಜೆಟ್‌ನಲ್ಲಿ ಹಣ ಮೀಸಲಿಡಬೇಕು. ಶೇ.01ರಷ್ಟು ಮೀಸಲಾತಿಯಲ್ಲಿ ಲಿಂಗತ್ವ, ಅಲ್ಪಸಂಖ್ಯಾತರು ಉದ್ಯೋಗ ಪಡೆಯಲು ಸರ್ಕಾರ ಅವರಿಗೆ ತರಬೇತಿ, ಕೋಚಿಂಗ್ ನೀಡಲು ಮುಂದಾಗಬೇಕು ಎಂದು ಆಗ್ರಹಿಸಿದರು.

ಭಾರತದಲ್ಲಿ ಸ್ಥೂಲಕಾಯ ಸಮಸ್ಯೆ ತೀವ್ರವಾಗಿ ಹೆಚ್ಚಾಗುತ್ತಿದೆ. 2025ರ ಹೊತ್ತಿಗೆ 44 ಕೋಟಿ ಜನ ಸ್ಥೂಲಕಾಯದಿಂದ ಬಳಲಲಿದ್ದಾರೆ ಎಂದು ಲ್ಯಾನ್ಸೆಟ್ ಜರ್ನಲ್ ನಡೆಸಿದ ಅಧ್ಯಯನ ವರದಿ ಹೇಳಿದೆ. ಜಂಕ್‌ಫುಡ್ ಸೇವನೆ, ನಿಷ್ಕ್ರಿಯ ಜೀವನಶೈಲಿ ಇದಕ್ಕೆ ಪ್ರಮುಖ ಕಾರಣವಾಗಿದೆ. 2050ರ ವೇಳೆಗೆ 5-14 ವರ್ಷದ 3 ಕೋಟಿ ಮಕ್ಕಳು ಸ್ಥೂಲಕಾಯದಿಂದ ಬಳಲಲಿರುವ ಸಾಧ್ಯತೆ ಇದೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಸ್ಥೂಲಕಾಯ ವಿರೋಧಿ ಹೋರಾಟಕ್ಕೆ ಕರೆ ನೀಡಿದ್ದಾರೆ.


# ಇನ್ನು 25 ವರ್ಷದಲ್ಲಿ ಬಹುತೇಕ ಭಾರತೀಯರಿಗೆ ಬೊಜ್ಜು



**ಹೊಸದಿಲ್ಲಿ:** ಇತ್ತೀಚಿನ ವರ್ಷಗಳಲ್ಲಿ ಯುವ ಜನತೆಯಲ್ಲಿ ಜಂಕ್‌ಫುಡ್ ಸೇವನೆ ಹೆಚ್ಚುತ್ತಿದ್ದು, ಇದು ಸ್ಥೂಲಕಾಯಕ್ಕೆ ಕಾರಣವಾಗುತ್ತಿದೆ. 2025ರ ವೇಳೆ ಭಾರತದಲ್ಲಿ ಸ್ಥೂಲಕಾಯ ಸಮಸ್ಯೆಯಿಂದ ಬಳಲುತ್ತಿರುವವರ ಸಂಖ್ಯೆ 44 ಕೋಟಿ ತಲುಪಲಿದೆ ಎಂದು ಲ್ಯಾನ್ಸೆಟ್ ಜರ್ನಲ್ ನಡೆಸಿದ ಅಧ್ಯಯನ ವರದಿ ಹೇಳಿದೆ.

ಇತ್ತೀಚಿನ ವರ್ಷಗಳಲ್ಲಿ ಭಾರತದಲ್ಲಿ ಸಂಸ್ಕರಿಸಿದ ಆಹಾರ ಪದಾರ್ಥಗಳು ಹಾಗೂ ಪಾನೀಯಗಳ ಮಾರಾಟದಲ್ಲಿ ಏರಿಕೆ ಕಂಡುಬರುತ್ತಿದೆ. ಸಂಸ್ಕರಿಸಿದ ಆಹಾರಗಳ ಅತಿಯಾದ ಸೇವನೆ, ನಿಯಮಿತ ವ್ಯಾಯಾಮವಿಲ್ಲದ ಜೀವನ ಶೈಲಿಯಿಂದ ಅಧಿಕ ದೇಹ ತೂಕ ಹೊಂದಿದವರ ಸಂಖ್ಯೆ ಹೆಚ್ಚುತ್ತಿದೆ. ಪರಿಸ್ಥಿತಿ ಹೀಗೆಯೇ ಮುಂದುವರಿದಲ್ಲಿ ಸ್ಥೂಲಕಾಯದವರ ಸಂಖ್ಯೆಯಲ್ಲಿ ಏರಿಕೆ ಕಂಡುಬರಲಿದೆ ಎಂದು ವರದಿ ಹೇಳಿದೆ. 2050ರ ಹೊತ್ತಿಗೆ ಭಾರತದಲ್ಲಿ ಸ್ಥೂಲಕಾಯ ಸಮಸ್ಯೆಯಿಂದ ಬಳಲುವವರ ಪುರುಷರ ಸಂಖ್ಯೆ 21.8 ಕೋಟಿ ಹಾಗೂ ಮಹಿಳೆಯರ ಸಂಖ್ಯೆ 23.1 ಕೋಟಿಯಷ್ಟಿರಲಿದೆ. ಇದರೊಂದಿಗೆ ಆ ಹೊತ್ತಿಗೆ ವಿಶ್ವದಲ್ಲಿಯೇ ಅತಿ ಹೆಚ್ಚು ಸ್ಥೂಲಕಾಯ ವ್ಯಕ್ತಿಗಳನ್ನು ಹೊಂದಿದ ಎರಡನೇ ರಾಷ್ಟ್ರವಾಗಲಿದೆ. ಚೀನಾ ಮೊದಲ ಸ್ಥಾನದಲ್ಲಿ ಇರಲಿದೆ. ಅಮೆರಿಕ, ಬ್ರೆಜಿಲ್, ನೈಜೀರಿಯಾ ಕ್ರಮವಾಗಿ 3, 4, ಮತ್ತು 5ನೇ ಸ್ಥಾನದಲ್ಲಿರಲಿದೆ ಎಂದು ವರದಿ ಹೇಳಿದೆ.

'ಗ್ಲೋಬಲ್ ಬರ್ಡನ್ ಆಫ್ ಡಿಸೀಸ್' (ಜಿಬಿಡಿ)-2021 ಹೆಸರಿನ ಈ ಅಧ್ಯಯನ ವರದಿಯಲ್ಲಿ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ ಸಂಶೋಧಕರೂ ಪಾಲ್ಗೊಂಡಿದ್ದರು.



**3.8 ಶತಕೋಟಿ:** 2050ರ ಹೊತ್ತಿಗೆ ಜಾಗತಿಕ ಮಟ್ಟದಲ್ಲಿ 1.8 ಶತಕೋಟಿ ಪುರುಷರು ಹಾಗೂ 1.9 ಶತಕೋಟಿ ಮಹಿಳೆಯರು ಅಧಿಕ ತೂಕದಿಂದ ಬಳಲಲಿದ್ದು, ಒಟ್ಟು 3.8 ಶತಕೋಟಿ ಜನರು ಬೊಜ್ಜಿನ ಸಮಸ್ಯೆಯಿಂದ ಬಳಲಲಿದ್ದಾರೆ. ಚೀನಾ, ಭಾರತ, ಅಮೆರಿಕದಲ್ಲಿ ಬೊಜ್ಜಿನ ವ್ಯಕ್ತಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಲೇ ಇದೆ ಎಂದು ವರದಿ ಹೇಳಿದೆ.

**ಮಕ್ಕಳಲ್ಲೂ ಕಾಡಲಿದೆ:** ಭಾರತದಲ್ಲಿ 2050ರ ಹೊತ್ತಿಗೆ 5ರಿಂದ 14 ವರ್ಷದೊಳಗಿನ 3 ಕೋಟಿ ಮಕ್ಕಳು ಸ್ಥೂಲಕಾಯದಿಂದ ಸಮಸ್ಯೆಗಳನ್ನು ಎದುರಿಸಲಿದ್ದಾರೆ ಎಂದೂ ವರದಿ ತಿಳಿಸಿದೆ. 15-24 ವಯೋಮಾನದವರನ್ನೂ ಇದು ಕಾಡಲಿದ್ದು, ದೇಶಕ್ಕೆ ಇದು ಆರ್ಥಿಕವಾಗಿ ಹೊರೆಯಾಗಲಿದೆ ಎಂದು ವರದಿ ಎಚ್ಚರಿಸಿದೆ.

## ಸ್ಥೂಲಕಾಯದ ವಿರುದ್ಧ ಹೋರಾಡಲು ಮೋದಿ ಕರೆ

ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮನ್ ಕಿ ಬಾತ್ ರೇಡಿಯೊ ಭಾಷಣದಲ್ಲಿ ಸ್ಥೂಲಕಾಯದ ವಿರುದ್ಧ ಹೋರಾಡುವಂತೆ ಭಾರತೀಯರಿಗೆ ಕರೆ ನೀಡಿದ್ದರು. ಸದೃಢ ಹಾಗೂ ಆರೋಗ್ಯವಂತ ದೇಶ ನಿರ್ಮಿಸಲು ಸ್ಥೂಲಕಾಯ ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸಬೇಕು ಎಂದಿದ್ದರು. ಆಹಾರದಲ್ಲಿ ಅಡುಗೆ ಎಣ್ಣೆಯನ್ನು ಶೇ.10ರಷ್ಟು ಕಡಿಮೆ ಬಳಕೆ ಮಾಡುವಂತೆ ಸೂಚಿಸಿದ್ದರು. ಅಲ್ಲದೇ ಈ ಕುರಿತ ಅಭಿಯಾನಕ್ಕೆ ಹಲವು ಖ್ಯಾತನಾಮರನ್ನು ರಾಯಭಾರಿಗಳನ್ನಾಗಿ ನೇಮಿಸಿದ್ದರು.

## ಸ್ಥೂಲಕಾಯದಿಂದ ಏನು ಸಮಸ್ಯೆ?

- ಚಯಾಪಚಯ ಕ್ರಿಯೆಯಲ್ಲಿತೊಂದರೆ, ಹೃದಯ ಸಂಬಂಧಿ ಸಮಸ್ಯೆ ಹೆಚ್ಚಳ
- ಬಿಪಿ, ಶುಗರ್ ಸೇರಿದಂತೆ ನಾನಾ ಕಾಯಿಲೆಗಳಿಂದ ಬಳಲುವ ಸಂಭವ
- ದೈಹಿಕವಾಗಿ ಕೆಲಸ ಮಾಡುವ ಸಾಮರ್ಥ್ಯ ಕುಂಠಿತ
- ಭಾರಿ ಸಂಖ್ಯೆಯ ಯುವಜನರು ಬೊಜ್ಜಿನ ಸಮಸ್ಯೆಗೆ ತುತ್ತಾದರೆ ಒಟ್ಟಾರೆಯಾಗಿ ದೇಶದ ಉತ್ಪಾದಕತೆಗೂ ಹೊಡೆತ

ಲ್ಯಾನ್ಸೆಟ್ ವರದಿ ಎಚ್ಚರಿಕೆ

# ಪಾಕಿಸ್ತಾನದಲ್ಲಿ ಆತ್ಮಾಹುತಿ ಬಾಂಬ್ ದಾಳಿ



ಮೃತರ ಸಂಖ್ಯೆ 12ಕ್ಕೆ ಏರಿಕೆ

**ಖೈಬರ್ ಪಖ್ತುಂಖ್ವಾ:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾದಲ್ಲಿರುವ ಬನ್ನು ಸೇನಾ ನೆಲೆಯ ಬಳಿ ನಡೆದ ಆತ್ಮಾಹುತಿ ಬಾಂಬ್ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ 12ಕ್ಕೆ ಏರಿಕೆಯಾಗಿದ್ದು, 30 ಮಂದಿ ಗಾಯಗೊಂಡಿದ್ದಾರೆ.

ಎರಡು ಸ್ಫೋಟಕ ತುಂಬಿದ ವಾಹನಗಳು ಬನ್ನು ಕಂಟೋನ್ಮೆಂಟ್ ಪ್ರದೇಶದ ಗಡಿ ಗೋಡೆಗೆ ನುಗ್ಗಿದ್ದರಿಂದ ಒಂಬತ್ತು ಮಂದಿ ಸಾವನ್ನಪ್ಪಿದ್ದರು. ಅಲ್ಲಿದ್ದ ಸೇನಾ ಸಿಬ್ಬಂದಿ ಆರು ಉಗ್ರರನ್ನು ಹೊಡೆದುರುಳಿಸಿದೆ ಎಂದು ವರದಿಯಾಗಿದೆ. ಟಿಟಿಪಿಯ (ತೆಹ್ರೀಕ್-ಎ-ತಾಲಿಬಾನ್) ಜೈಶುಲ್ ಫರ್ಸಾನ್ ಉಗ್ರ ಸಂಘಟನೆ ದಾಳಿಯ ಹೊಣೆ ಹೊತ್ತಿಕೊಂಡಿದೆ. ಆತ್ಮಹತ್ಯಾ ಬಾಂಬರ್‌ಗಳು ಸೂರ್ಯಾಸ್ತದ ಸಮಯದಲ್ಲಿ ಬನ್ನು ಕಂಟೋನ್ಮೆಂಟ್‌ನ ಗೋಡೆಗೆ ಸ್ಫೋಟಕ ತುಂಬಿದ್ದ ವಾಹನಗಳನ್ನು ನುಗ್ಗಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಪೇಶಾವರದ ನೈಋತ್ಯಕ್ಕೆ 200 ಕಿಮೀ ದೂರದಲ್ಲಿ ಈ ಘಟನೆ ನಡೆದಿದೆ ಎಂದು ಪಿಟಿಐ ವರದಿ ತಿಳಿಸಿದೆ. ಜೈಶ್ ಅಲ್ ಫುರ್ಸಾನ್ ಉಗ್ರರು ಈ ದಾಳಿ ನಡೆಸಿದ್ದಾರೆ. ಈ ಗುಂಪು ಪಾಕಿಸ್ತಾನದ ತೆಹ್ರೀಕ್-ಎ-ತಾಲಿಬಾನ್ ನ ಹಲವಾರು ಬಣಗಳಲ್ಲಿ ಒಂದಾಗಿದೆ. ಪೇಶಾವರದ ನೈಋತ್ಯಕ್ಕೆ 200 ಕಿಮೀ ದೂರದಲ್ಲಿ ಈ ಘಟನೆ ನಡೆದಿದೆ ಎಂದು ಪಿಟಿಐ ವರದಿ ತಿಳಿಸಿದೆ. ಜೈಶ್ ಅಲ್ ಫುರ್ಸಾನ್ ಉಗ್ರರು ಈ ದಾಳಿ ನಡೆಸಿದ್ದಾರೆ. ಈ ಗುಂಪು ಪಾಕಿಸ್ತಾನದ ತೆಹ್ರೀಕ್-ಎ-ತಾಲಿಬಾನ್‌ನ ಹಲವಾರು ಬಣಗಳಲ್ಲಿ ಒಂದಾಗಿದೆ.

# ವಿಧಾನಸಭೆಯಿಂದ ಎಸ್‌ಪಿ ಶಾಸಕ ಅಬು ಅಜ್ಮಿ ಅಮಾನತು

**ಮುಂಬೈ:** ಔರಂಗಜೇಬನನ್ನು ಹೊಗಳಿ ತೀವ್ರ ಟೀಕೆಗೆ ಗುರಿಯಾಗಿರುವ ಸಮಾಜವಾದಿ ಪಕ್ಷದ ಶಾಸಕ ಅಬು ಅಸಿಮ್ ಅಜ್ಮಿ ಅವರನ್ನು ಮಹಾರಾಷ್ಟ್ರ ವಿಧಾನಸಭೆಯ ಬಜೆಟ್ ಅಧಿವೇಶನದಿಂದ ಬುಧವಾರ ಅಮಾನತುಗೊಳಿಸಲಾಗಿದೆ. ಪ್ರಸ್ತುತ ನಡೆಯುತ್ತಿರುವ ಬಜೆಟ್ ಅಧಿವೇಶನ ಮುಗಿಯುವವರೆಗೂ ಅಬು ಅಜ್ಮಿ ಅವರನ್ನು ಅಮಾನತು ಮಾಡಲಾಗಿದೆ. ವಿಧಾನ ಸಭೆಯ ಬಜೆಟ್ ಅಧಿವೇಶನ ಮಾರ್ಚ್ 26ರ ವರೆಗೆ ನಡೆಯಲಿದೆ.

ಅಲ್ಲಿಯವರೆಗೂ ಅಬು ಅಜ್ಮಿ ಅಮಾನತಿನಲ್ಲಿ ಇರಲಿದ್ದಾರೆ. ಸಚಿವ ಚಂದ್ರಕಾಂತ್ ಪಾಟೀಲ್ ಅವರು ಬುಧವಾರ ಸದನದಲ್ಲಿ ಅಬು ಅಜ್ಮಿ ಅವರನ್ನು ಸದನದಿಂದ ಅಮಾನತು ಮಾಡುವ ಪ್ರಸ್ತಾವನೆ ಮಂಡಿಸಿದರು.

ಧ್ವನಿ ಮತದ ಮೂಲಕ ನಿರ್ಣಯವನ್ನು ಅಂಗೀಕರಿಸಲಾಯಿತು. ಬಳಿಕ ಎಸ್‌ಪಿ ಶಾಸಕ ಸದನದಿಂದ ಅಮಾನತಾಗಿದ್ದಾಗಿ ಸ್ಪೀಕರ್ ತಿಳಿಸಿದರು. ಹಿಂದುಗಳ ವಿರೋಧಿ, ಕ್ರೂರ ಆಡಳಿತಗಾರ ಔರಂಗಜೇಬನನ್ನು ಎಸ್‌ಪಿ ಶಾಸಕ ಹೊಗಳುವ ಮೂಲಕ ಛತ್ರಪತಿ ಶಿವಾಜಿ ಮಹಾರಾಜ್, ಅವರ ಪುತ್ರ ಛತ್ರಪತಿ ಸಂಭಾಜಿ ಮಹಾರಾಜ್ ಅವರನ್ನು ಅವಮಾನಿಸಲಾಗಿದೆ ಎಂದು ಆಡಳಿತ ಪಕ್ಷದ ಸದಸ್ಯರು ಸದನದಲ್ಲಿ ಟೀಕಾಪ್ರಹಾರ ನಡೆಸಿದರು. ಔರಂಗಜೇಬನ ಆಳ್ವಿಕೆಯಲ್ಲಿ ಭಾರತದ ಗಡಿ ಅಫ್ಘಾನಿಸ್ತಾನ ಮತ್ತು ಬರ್ಮಾ ವರೆಗೂ(ಮ್ಯಾನ್ಮಾರ್) ವ್ಯಾಪಿಸಿತ್ತು. ವಿಶ್ವದ ಜಿಡಿಪಿಯಲ್ಲಿ ದೇಶದ ಜಿಡಿಪಿಯು ಶೇಕಡಾ 24 ರಷ್ಟಿತ್ತು. ಭಾರತವನ್ನು ಆತನ ಆಡಳಿತದಲ್ಲಿ ಚಿನ್ನದ ಗುಬ್ಬಚ್ಚಿ ಎಂದು ಕರೆಯಲಾಗುತ್ತಿತ್ತು ಎಂದು ಅಬು ಅಜ್ಮಿ ಹೇಳಿದ್ದರು.

> ನನ್ನ ಮಾತುಗಳನ್ನು ತಿರುಚಲಾಗಿದೆ. ಇತಿಹಾಸ ಕಾರರು, ಬರಹಗಾರರು ಹೇಳಿದ್ದನ್ನು ನಾನು ಹೇಳಿದ್ದೇನೆ. ನಾನು ಛತ್ರಪತಿ ಶಿವಾಜಿ ಮಹಾರಾಜ್, ಸಂಭಾಜಿ ಮಹಾರಾಜ್ ಅಥವಾ ಇತರ ಯಾವುದೇ ಮಹಾನ್ ವ್ಯಕ್ತಿಗಳ ಬಗ್ಗೆ ಯಾವುದೇ ಅವಹೇಳನಕಾರಿ ಹೇಳಿಕೆ ನೀಡಿಲ್ಲ - ಆದರೆ ನನ್ನ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ, ನಾನು ನನ್ನ ಮಾತುಗಳನ್ನು, ನನ್ನ ಹೇಳಿಕೆಯನ್ನು ಹಿಂಪಡೆಯುತ್ತೇನೆ. ಈ ವಿಷಯವನ್ನು ರಾಜಕೀಯ ವಿಷಯವನ್ನಾಗಿ ಮಾಡಲಾಗುತ್ತಿದೆ
>
> -ಅಬು ಅಜ್ಮಿ, ಸಮಾಜವಾದಿ ಪಕ್ಷದ ಶಾಸಕ



# ಭಾರತೀಯರು ಕೆಟ್ಟವರು: ಭಾರತ ಮೂಲದ ನರ್ಸ್ ಮೇಲೆ ಅಮೆರಿಕ ವ್ಯಕ್ತಿಯಿಂದ ಹಲ್ಲೆ

**ವಾಷಿಂಗ್ಟನ್:** ಭಾರತೀಯರು ಕೆಟ್ಟವರು ಎಂದು ಹೇಳಿ ಅಮೆರಿಕ ವ್ಯಕ್ತಿಯೊಬ್ಬ ಭಾರತ ಮೂಲದ ನರ್ಸ್ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಪಾಮ್ ಬೀಚ್ ಕೌಂಟಿ ಆಸ್ಪತ್ರೆಯಲ್ಲಿ ನಡೆದಿದೆ.

ಹೆಚ್‌ಸಿಎ ಫ್ಲೋರಿಡಾ ಪಾಮ್ಸ್ ವೆಸ್ಟ್ ಆಸ್ಪತ್ರೆಯಲ್ಲಿ ಮನೋ ರೋಗಿಯಾಗಿದ್ದ ಸ್ಟ್ಯಾಂಟಲ್‌ಬರಿ ಲೀಲಮ್ಮ ಮೇಲೆ ಹಲ್ಲೆ ನಡೆಸಿದ್ದ. ಹಲ್ಲೆಗೊಳಗಾದ ಲೀಲಮ್ಮ ಮುಖದ ಭಾಗಕ್ಕೆ ಗಂಭೀರ ಗಾಯಗಳಾಗಿವೆ.

ಭುಜದ ಮೂಳೆಗಳು ಮುರಿದಿದ್ದು, ಮೆದುಳಿನಲ್ಲಿ ರಕ್ತಸ್ರಾವವಾಗಿದೆ. 2 ನಿಮಿಷಗಳವರೆಗೆ ನಡೆದ



ಹಲ್ಲೆಯ ದೃಶ್ಯ ಆಸ್ಪತ್ರೆಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಪರಿಶೀಲನೆ ಮಾಡುತ್ತಿದ್ದೇವೆ.

ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಹಲ್ಲೆಯ ಬಗ್ಗೆ ಲೀಲಮ್ಮ ಅವರ ಮಗಳು ಸಿಂಡಿ ಜೋಸೆಫ್ ಪ್ರತಿಕ್ರಿಯಿಸಿ. ಹಲ್ಲೆ ತೀವ್ರತೆಗೆ ಅಮ್ಮನ ಮೆದುಳಿನಲ್ಲಿ ರಕ್ತಸ್ರಾವವಾಗಿದೆ. ಆಕೆಯ ಮುಖದ ಬಲಭಾಗಕ್ಕೆ ಗಂಭೀರ ಗಾಯಗಳಾಗಿವೆ. ಕಣ್ಣಿನ ಭಾಗಕ್ಕೂ ಬಲವಾಗಿ ಪೆಟ್ಟು ಬಿದ್ದಿದ್ದು, ಕಣ್ಣುಗಳು ಊದಿಕೊಂಡಿದೆ. ಮೊದಲು ನನಗೆ ಆಕೆಯನ್ನು ಗುರುತಿಸಲು ಸಾಧ್ಯವಾಗಲಿಲ್ಲ ಎಂದು ಕಣ್ಣೀರು ಹಾಕಿದರು.

ಹಲ್ಲೆಯ ಬಳಿಕ ಆರೋಪಿ ಸ್ಟ್ಯಾಂಟಲ್ ಬರಿ ಭಾರತೀಯರು ಕೆಟ್ಟವರು', 'ನಾನು ಭಾರತೀಯ ವೈದ್ಯರ ಬಗ್ಗೆ ವಿವರವಾಗಿ ಹೇಳಿದ್ದೇನೆ ಎಂದು ಹೇಳಿಕೆ ನೀಡಿದ್ದಾನೆ.

ದಕ್ಷಿಣ ಫ್ಲೋರಿಡಾದ ಭಾರತೀಯ ದಾದಿಯರ ಸಂಘದ ಸಲಹಾ ಮಂಡಳಿಯ ಅಧ್ಯಕ್ಷೆ ಡಾ. ಮಂಜು ಸ್ಯಾಮ್ಯುಯೆಲ್, ಘಟನೆಯ ಬಗ್ಗೆ ಅಧಿಕಾರಿಗಳು ಕ್ರಮ ಕೈಗೊಂಡು, ಆರೋಗ್ಯ ಸಿಬ್ಬಂದಿಯನ್ನು ರಕ್ಷಿಸಲು ಯಾವುದೇ ನಿರ್ದಿಷ್ಟ ಕಾನೂನುಗಳಿಲ್ಲ.

ಈ ಸಮಸ್ಯೆಯನ್ನು ಬಗೆಹರಿಸಬೇಕು ಎಂದು ಒತ್ತಾಯಿಸಿದರು. ಲೀಲಮ್ಮ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ವೈದ್ಯರೊಬ್ಬರು ಸಾಕ್ಷಿ

ಈ ಹೇಳಿಕೆ ಕುರಿತು ಆಸ್ಪತ್ರೆಯ ವೈದ್ಯರೊಬ್ಬರು ಪೊಲೀಸರಿಗೆ ಸಾಕ್ಷಿಯನ್ನು ನೀಡಿದ್ದಾರೆ. ಸ್ಟ್ಯಾಂಟಲ್ ಬರಿ ಮಾನಸಿಕವಾಗಿ ಅಸ್ವಸ್ಥರಾಗಿದ್ದಾರೆ. ಅವರನ್ನು ಮಾನಸಿಕ ಆರೋಗ್ಯ ಚಿಕಿತ್ಸೆಗಾಗಿ ವರ್ಗಾಯಿಸುವಂತೆ ಕೋರಿ ಸ್ಟ್ಯಾಂಟಲ್ ಬರಿ ಪತ್ನಿ ಸಲ್ಲಿಸಿರುವ ಅರ್ಜಿಯನ್ನು ನ್ಯಾಯಾಧೀಶರು ನಿರಾಕರಿಸಿದರು.

# ಭಾರತದಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ



**ಢಾಕಾ:** ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಹಸ್ತಾಂತರಿಸುವಂತೆ ಕೋರಿ ಕಳುಹಿಸಲಾಗಿರುವ ಪತ್ರಕ್ಕೆ ಭಾರತದಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ ಎಂದು ಬಾಂಗ್ಲಾದೇಶ ಹಂಗಾಮಿ ಸರ್ಕಾರದ ಮುಖ್ಯ ಸಲಹೆಗಾರ ಮೊಹಮ್ಮದ್ ಯೂನುಸ್ ಹೇಳಿದ್ದಾರೆ. ಮಾನವೀಯತೆಯ ವಿರುದ್ಧದ ಅಪರಾಧಗಳಿಗಾಗಿ ಹಸೀನಾ ಅವರನ್ನು ವಿಚಾರಣೆಗೊಳಪಡಿಸಲಾಗುವುದು ಎಂದು ಯುಕೆ ಮೂಲದ ಸ್ಕೈ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ, ಯೂನಸ್ ಹೇಳಿರುವುದಾಗಿ ಸರ್ಕಾರದ ಬಿಎಸ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. 77 ವರ್ಷದ ಹಸೀನಾ ಕಳೆದ ವರ್ಷ ಆಗಸ್ಟ್ 5 ರಿಂದ ಭಾರತದಲ್ಲಿ ವಾಸಿಸುತ್ತಿದ್ದಾರೆ. ವಿದ್ಯಾರ್ಥಿಗಳ ಬೃಹತ್ ಪ್ರತಿಭಟನೆ ನಂತರ ಅವಾಮಿ ಲೀಗ್‌ನ 16 ವರ್ಷಗಳ ಆಡಳಿತ ಪತನಗೊಂಡ ನಂತರ ಅವರು ಬಾಂಗ್ಲಾದೇಶದಿಂದ ಭಾರತಕ್ಕೆ ಪಲಾಯನ ಮಾಡಿದ್ದರು. ಮಾನವೀಯತೆ ವಿರುದ್ಧದ ಅಪರಾಧ ಮತ್ತು ನರಮೇಧಕ್ಕಾಗಿ ಹಸೀನಾ ಮತ್ತು ಹಲವಾರು ಮಾಜಿ ಕ್ಯಾಬಿನೆಟ್ ಮಂತ್ರಿಗಳು, ಸಲಹೆಗಾರರು, ಮಿಲಿಟರಿ- ನಾಗರಿಕ ಅಧಿಕಾರಿಗಳಿಗೆ ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿ ಬಂಧನ ವಾರಂಟ್‌ಗಳನ್ನು ಹೊರಡಿಸಿದೆ.

ವಿಚಾರಣೆ ನಡೆಯಲಿದೆ. ಹಸೀನಾ ಮಾತ್ರವಲ್ಲ, ಆಕೆಯ ಕುಟುಂಬ ಸದಸ್ಯರು, ಸಹಚರರು ವಿರುದ್ಧ ವಿಚಾರಣೆ ನಡೆಯಲಿದೆ. ಬಾಂಗ್ಲಾದೇಶವು ಆಕೆಗೆ ಎರಡು ಬಂಧನ ವಾರಂಟ್‌ಗಳನ್ನು ಹೊರಡಿಸಿದೆ. ಔಪಚಾರಿಕ ಪತ್ರಗಳನ್ನು ಕಳುಹಿಸಿದ್ದೇವೆ ಆದರೆ ಭಾರತದಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಇಲ್ಲ ಎಂದು ಯೂನಸ್ ಹೇಳಿದರು.

ಕಳೆದ ವರ್ಷ ನವದೆಹಲಿರುವ ಬಾಂಗ್ಲಾದೇಶ ಹೈ ಕಮೀಷನ್ ನಿಂದ ಪತ್ರ ಸ್ವೀಕರಿಸಿರುವುದಾಗಿ ಭಾರತ ಖಚಿಪಡಿಸಿತ್ತು. ಆದರೆ ಅದರ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಹಸೀನಾ ಅವರು ಭೌತಿಕವಾಗಿ ಅಥವಾ ಗೈರುಹಾಜರಾಗಿದ್ದರೂ ನ್ಯಾಯಾಲಯದಲ್ಲಿ ವಿಚಾರಣೆ ಎದುರಿಸಬೇಕಾಗುತ್ತದೆ. ನೂರಾರು ಕಾರ್ಯಕರ್ತರ ಅಪಹರಣ, ಚಿತ್ರಹಿಂಸೆ ಮತ್ತು ಹತ್ಯೆಯ ಮೇಲ್ವಿಚಾರಣೆಗೆ ತನ್ನ ಭದ್ರತಾ ಪಡೆಗಳು ಮತ್ತು ಪೊಲೀಸರನ್ನು ಬಳಸಿಕೊಂಡ ಆರೋಪ ಹಸೀನಾ ಮೇಲಿದೆ ಎಂದು ಯೂನಸ್ ಹೇಳಿದ್ದಾರೆ. ಆದರೆ ಈ ಆರೋಪಗಳನ್ನು ಹಸೀನಾ ನಿರಾಕರಿಸಿದ್ದು, ತಾನು ರಾಜಕೀಯವಾಗಿ ಕಿರುಕುಳ ಅನುಭವಿಸಿರುವುದಾಗಿ ತಿಳಿಸಿದ್ದಾರೆ.

## ಬಂಧನ ವಾರಂಟ್

ಮಾನವೀಯತೆ ವಿರುದ್ಧದ ಅಪರಾಧ ಮತ್ತು ನರಮೇಧಕ್ಕಾಗಿ ಹಸೀನಾ ಮತ್ತು ಹಲವಾರು ಮಾಜಿ ಕ್ಯಾಬಿನೆಟ್ ಮಂತ್ರಿಗಳು, ಸಲಹೆಗಾರರು ಮತ್ತು ಮಿಲಿಟರಿ- ನಾಗರಿಕ ಅಧಿಕಾರಿಗಳಿಗೆ ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧಗಳ ನ್ಯಾಯಮಂಡಳಿ ಬಂಧನ ವಾರಂಟ್‌ಗಳನ್ನು ಹೊರಡಿಸಿದೆ.

# ಮಣಿಪುರದಲ್ಲಿ 5.7 ತೀವ್ರತೆಯ ಪ್ರಬಲ ಭೂಕಂಪ

**ಇಂಫಾಲ:** ಮಣಿಪುರದಲ್ಲಿ ಬುಧವಾರ 5.7 ತೀವ್ರತೆಯ ಪ್ರಬಲ ಭೂಕಂಪನ ಸೇರಿದಂತೆ ಸತತ ಎರಡು ಬಾರಿ ಭೂಮಿ ಕಂಪಿಸಿದೆ. ಮಣಿಪುರದ ಈಶಾನ್ಯ ಭಾಗದಲ್ಲಿ ಈ ಕಂಪನಗಳು ಸಂಭವಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಳಗ್ಗೆ 11.06ಕ್ಕೆ ರಾಜ್ಯದಲ್ಲಿ 5.7 ತೀವ್ರತೆಯ ಭೂಕಂಪ ಸಂಭವಿಸಿದೆ. ಈ ಭೂಕಂಪನದ ಕೇಂದ್ರಬಿಂದು ಇಂಫಾಲ್ ಪೂರ್ವ ಜಿಲ್ಲೆಯ ಯೈರಿಪೋಕ್‌ನಿಂದ ಪೂರ್ವಕ್ಕೆ 44 ಕಿಮೀ ಮತ್ತು 110 ಕಿಮೀ ಆಳದಲ್ಲಿ ಪತ್ತೆಯಾಗಿದೆ ಎಂದು ಶಿಲ್ಲಾಂಗ್‌ನ ಪ್ರಾದೇಶಿಕ ಭೂಕಂಪನ ಕೇಂದ್ರದ ಅಧಿಕಾರಿಗಳು ತಿಳಿಸಿದ್ದಾರೆ. ಅಸ್ಸಾಂ, ಮೇಘಾಲಯ, ಈ ಪ್ರದೇಶದ ಇತರ ಭಾಗಗಳಲ್ಲಿ ಭೂಮಿ ಕಂಪಿಸಿದ ಅನುಭವ ಉಂಟಾಗಿದೆ ಎಂದು ಹೇಳಿದರು. ಮಣಿಪುರದಲ್ಲಿ ಮಧ್ಯಾಹ್ನ 12.20ಕ್ಕೆ 4.1 ತೀವ್ರತೆಯ ಎರಡನೇ ಭೂಕಂಪ ಸಂಭವಿಸಿದೆ. ಭೂಕಂಪದ ಕೇಂದ್ರ ಬಿಂದುವು ರಾಜ್ಯದ ಕಾಮ್‌ಜಾಂಗ್ ಜಿಲ್ಲೆಯಲ್ಲಿ 66 ಕಿಮೀ ಆಳದಲ್ಲಿ ಪತ್ತೆಯಾಗಿದೆ ಎಂದು ಹೇಳಿದರು.

# ಚಳಿ ಗಾಳಿಗೆ ನಡುಗಿದ ರಾಜಧಾನಿ ಜನರು



ತಾಪ ಮಾನದಲ್ಲಿ ಭಾರಿ ವ್ಯತ್ಯಾಸ

**ನವದೆಹಲಿ:** ದೆಹಲಿಯಲ್ಲಿ ವಿಚಿತ್ರ ಹವಾಮಾನ ಕಂಡು ಬರುತ್ತಿದೆ. ಒಂದೇ ವಾರದ ಅವಧಿಯಲ್ಲಿ ತಾಪ ಮಾನದಲ್ಲಿ ಭಾರಿ ವ್ಯತ್ಯಾಸವಾಗುತ್ತಿದ್ದು, ಜನರು ಚಳಿಗಾಲದ ಮನಸ್ಥಿತಿಯಲ್ಲಿ ಬದುಕಬೇಕೋ ಅಥವಾ ಬೇಸಿಗೆಯ ವಾತಾವರಣಕ್ಕೆ ಸಜ್ಜಾಗಬೇಕೋ ಎನ್ನುವ ಗೊಂದಲದಲ್ಲಿದ್ದಾರೆ.

ಕಳೆದ ಗುರುವಾರ ಅಂದರೆ ಫೆಬ್ರವರಿ 27 ರಂದು ದೆಹಲಿಯ ಕನಿಷ್ಠ ತಾಪಮಾನವು 20 ಡಿಗ್ರಿಗಳನ್ನು ಮುಟ್ಟುವ ಹಂತದಲ್ಲಿತ್ತು. ಆದರೆ ಬುಧವಾರ ಅದು ಮತ್ತೆ ಕುಸಿದಿದೆ. ಪಾಲಂನಂತಹ ಕೆಲವು ನಿಲ್ದಾಣಗಳಲ್ಲಿ 10 ಡಿಗ್ರಿ ಸೆಲ್ಸಿಯಸ್‌ಗಿಂತ ಕಡಿಮೆ ತಾಪಮಾನ ವರದಿಯಾಗಿದೆ. ತಾಪಮಾನ ಕುಸಿತಕ್ಕೆ ಕಾರಣ ಪಶ್ಚಿಮದಿಂದ ಬೀಸುತ್ತಿರುವ ಬಲವಾದ ಶೀತ ಮಾರುತಗಳು. ಸುಮಾರು 40 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುತ್ತಿದ್ದು, ಇದು ಹಿಮಾಲಯದಿಂದ ಶೀತವನ್ನು ಹೊತ್ತು ತರುತ್ತಿದೆ. ಇತ್ತೀಚೆಗೆ, ಫೆಬ್ರವರಿ ಕೊನೆಯ ದಿನಗಳಲ್ಲಿ, ಪರ್ವತಗಳಲ್ಲಿ ಭಾರಿ ಹಿಮಪಾತವಾಯಿತು. ಅಂದಿನಿಂದ ಈ ತಂಪಾದ ಗಾಳಿಯು ದೆಹಲಿಯ ಜನರನ್ನು ನಡುಗಿಸುತ್ತಿದೆ. ಈ ಗಾಳಿ ನಾಳೆಯವರೆಗೆ ಅಂದರೆ ಮಾರ್ಚ್ 6 ರವರೆಗೆ ಬೀಸಲಿದೆ. ಹವಾಮಾನ ಇಲಾಖೆಯು ಮಾರ್ಚ್ ತಿಂಗಳನ್ನು ಬೇಸಿಗೆಯ ಆರಂಭವೆಂದು ಪರಿಗಣಿಸುತ್ತದೆ.

ಈ ಬಾರಿ ಮಾರ್ಚ್ ತಿಂಗಳಲ್ಲಿ ತಾಪಮಾನವು ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಮುನ್ಸೂಚನೆ ನೀಡಲಾಗಿದೆ. ಮಾರ್ಚ್ ಆರಂಭದ ದಿನಗಳಲ್ಲಿ ಹವಾಮಾನದಲ್ಲಿನ ಏರಿಳಿತಗಳಿಂದಾಗಿ, ಚಳಿಗಾಲ ಇನ್ನೂ ಸಂಪೂರ್ಣವಾಗಿ ಹೋಗಿಲ್ಲ. ಆದರೆ ದಿನಾಂಕ ಮುಂದುವರೆದಂತೆ, ತಾಪಮಾನವು ಹೆಚ್ಚಾಗುವ ನಿರೀಕ್ಷೆಯಿದೆ. ಮಾರ್ಚ್ 10 ರ ವೇಳೆಗೆ ಗರಿಷ್ಠ ತಾಪಮಾನವು 33 ಡಿಗ್ರಿ ಸೆಲ್ಸಿಯಸ್ ತಲುಪುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕನಿಷ್ಠ ತಾಪಮಾನವು 18 ಡಿಗ್ರಿ ಸೆಲ್ಸಿಯಸ್ ವರೆಗೆ ಇರುತ್ತದೆ. ಅಂದರೆ ಹೋಳಿ ಬರುವ ಹೊತ್ತಿಗೆ ದೆಹಲಿಯಲ್ಲಿ ಶಾಖವು ಅದರ ನಿಜವಾದ ರೂಪದಲ್ಲಿ ಕಾಣಿಸಿಕೊಳ್ಳಲು ಪ್ರಾರಂಭಿಸಲಿದೆ.

# ಜನಸಂಖ್ಯೆಯ ಆಧಾರದ ಮೇಲೆ ಸಂಸದೀಯ ಕ್ಷೇತ್ರಗಳ ಪುನರ್‌ವಿಂಗಡಣೆ

## ಕ್ಷೇತ್ರ ಪುನರ್‌ವಿಂಗಡಣೆ; ತಮಿಳುನಾಡಿನಲ್ಲಿ ಸರ್ವಪಕ್ಷ ಸಭೆ

**ಚೆನ್ನೈ:** ಕ್ಷೇತ್ರ ಪುನರ್‌ವಿಂಗಡಣೆ ವಿಷಯವನ್ನು ಚರ್ಚಿಸಲು ನಡೆದ ಸರ್ವಪಕ್ಷ ಸಭೆಯಲ್ಲಿ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ಜನಸಂಖ್ಯೆಯ ಆಧಾರದ ಮೇಲೆ ಸಂಸದೀಯ ಕ್ಷೇತ್ರಗಳನ್ನು ಪುನರ್‌ವಿಂಗಡಿಸುವ ಪ್ರಸ್ತಾವಿತ ಕ್ರಮವನ್ನು ಸಾಮೂಹಿಕವಾಗಿ ವಿರೋಧಿಸಲು ದಕ್ಷಿಣ ರಾಜ್ಯಗಳ ಸಂಸದರು, ಪಕ್ಷದ ಪ್ರತಿನಿಧಿಗಳ ಜಂಟಿ ಕ್ರಿಯಾ ಸಮಿತಿಯನ್ನು ರಚಿಸುವಂತೆ ಸೂಚಿಸಿದ್ದಾರೆ.

ಎಂ.ಕೆ ಸ್ಟಾಲಿನ್ ಅಧ್ಯಕ್ಷತೆಯಲ್ಲಿ ಚೆನ್ನೈನಲ್ಲಿ ನಡೆದ ಸಭೆಯಲ್ಲಿ ಪ್ರಮುಖ ವಿರೋಧ ಪಕ್ಷ ಎಐಎಡಿಎಂಕೆ, ಕಾಂಗ್ರೆಸ್, ಎಡ ಪಕ್ಷಗಳು, ನಟ-ರಾಜಕಾರಣಿ ಕಮಲ್ ಹಾಸನ್ ಮತ್ತು ವಿಜಯ್ ಅವರ ಟಿವಿಕೆ ಸೇರಿದಂತೆ ಇತರರು ಭಾಗವಹಿಸಿದ್ದರು. ತಮಿಳುನಾಡು ಬಿಜೆಪಿ ಸಭೆಗೆ ಗೈರಾಗಿದ್ದು, ರಾಜ್ಯಾಧ್ಯಕ್ಷ ಅಣ್ಣಾಮಲೈ ಇದನ್ನು ಅತ್ಯಂತ ತಮಾಷೆ ಎಂದು ಬಣ್ಣಿಸಿದ್ದಾರೆ. ಕ್ಷೇತ್ರ ಪುನರ್‌ವಿಂಗಡಣೆ ದಕ್ಷಿಣ ರಾಜ್ಯಗಳಿಗೆ ಅನಾನುಕೂಲಕರವಾಗುವ ಭಯ ಕಾಲ್ಪನಿಕ ಎಂದು ಹೇಳಿದ್ದಾರೆ.



ತಮಿಳು ರಾಷ್ಟ್ರೀಯವಾದಿ ನಾಮ್ ತಮಿಳರ್ ಕಚ್ಚಿ, ಮಾಜಿ ಕೇಂದ್ರ ಸಚಿವ ಜಿಕೆ ವಾಸನ್ ಅವರ ತಮಿಳು ಮಾನಿಲ ಕಾಂಗ್ರೆಸ್, ಕೂಡ ಸಭೆಗೆ ಗೈರಾಗಿದ್ದವು.

ಸಭೆಯಲ್ಲಿ ಮಾತನಾಡಿದ ಸಿಎಂ ಎಂ.ಕೆ.ಸ್ಟಾಲಿನ್, ಸಂಸದೀಯ ಸ್ಥಾನ ಗಳ ಸಂಖ್ಯೆಯನ್ನು ಹೆಚ್ಚಿಸಿದರೆ ನಮಗೆ 22 ಹೆಚ್ಚುವರಿ ಸ್ಥಾನಗಳು ಸಿಗಬೇಕು. ಆದರೆ, ಪ್ರಸ್ತುತ ಜನಸಂಖ್ಯೆಯ ಪ್ರಕಾರ ನಮಗೆ ಕೇವಲ 10 ಹೆಚ್ಚುವರಿ ಸ್ಥಾನಗಳು ಸಿಗುತ್ತವೆ. ಅಂದರೆ ನಾವು 12 ಸ್ಥಾನಗಳನ್ನು ಕಳೆದು ಕೊಳ್ಳುತ್ತೇವೆ. ಇದು ಭಾರತೀಯ



ಜನ ಜಾಗೃತಿ ಮೂಡಿಸ ಬೇಕು

ಪ್ರಜಾಪ್ರಭುತ್ವದಲ್ಲಿ ತಮಿಳುನಾಡಿನ ರಾಜಕೀಯ ಪ್ರಾತಿನಿಧ್ಯದ ಮೇಲಿನ ನೇರ ದಾಳಿಯಾಗಿದೆ. ತಮಿಳುನಾಡಿನ ಧ್ವನಿಯನ್ನು ಹತ್ತಿಕ್ಕಲಾಗುತ್ತಿದೆ. ತನ್ನ ಜನರ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ

ನಮ್ಮ ರಾಜ್ಯದ ಬಲವನ್ನು ಕಡಿಮೆ ಮಾಡಲಾಗುತ್ತಿದೆ. ನಾವು ಕ್ಷೇತ್ರ ಪುನರ್ ವಿಂಗಡಣೆಯನ್ನು ವಿರೋಧಿಸುವುದಿಲ್ಲ. ಆದರೆ, ಕಳೆದ 50 ವರ್ಷಗಳಲ್ಲಿ ಸಾಮಾಜಿಕ ಮತ್ತು ಆರ್ಥಿಕ ಕಲ್ಯಾಣ ಯೋಜನೆಗಳನ್ನು ಪರಿಣಾಮಕಾರಿ ಯಾಗಿ ಜಾರಿಗೆ ತಂದಿದ್ದಕ್ಕಾಗಿ ಇದು ಶಿಕ್ಷೆಯಾಗಬಾರದು ಎಂದು ತಿಳಿಸಿದ್ದಾರೆ. ಈ ಸರ್ವಪಕ್ಷ ಸಭೆಯು 2026ರ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್‌ವಿಂಗಡಣೆ ಪ್ರಕ್ರಿಯೆಯನ್ನು ಕೈಗೊಳ್ಳಬಾರದು ಎಂದು ಒತ್ತಾಯಿಸುತ್ತದೆ. 2026ರ ನಂತರ, ಮುಂದಿನ 30 ವರ್ಷಗಳವರೆಗೆ 1971ರ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್‌ವಿಂಗಡಣೆ ಪ್ರಕ್ರಿಯೆಯನ್ನು ಮಾಡಲಾಗುವುದು ಎಂದು ಪ್ರಧಾನಿ ಭರವಸೆ ನೀಡಬೇಕೆಂದು

ನಾವು ಒತ್ತಾಯಿಸುತ್ತೇವೆ. ಕೇಂದ್ರ ಸರ್ಕಾರವು ನಿರಂಕುಶವಾಗಿ ಸಂಸದೀಯ ಕ್ಷೇತ್ರಗಳ ವಿಂಗಡಣೆ ಪ್ರಕ್ರಿಯೆಯನ್ನು ಆರಂಭಿಸಿದರೆ ದಕ್ಷಿಣ ರಾಜ್ಯಗಳ ರಾಜಕೀಯ ಮಹತ್ವವನ್ನು ಸಂಪೂರ್ಣವಾಗಿ ನಾಶ ಮಾಡುವ ಪ್ರಯತ್ನವೆಂದು ಪರಿಗಣಿಸಲಾಗುತ್ತದೆ. ಇದನ್ನು ಯಾವುದೇ ರೀತಿಯಲ್ಲಿಯೂ ಒಪ್ಪಿಕೊಳ್ಳಲು ಸಾಧ್ಯವಿಲ್ಲ. ಕ್ಷೇತ್ರ ಪುನರ್ ವಿಂಗಡಣೆಯ ವಿರುದ್ಧ ಹೋರಾಡಲು ತಮಿಳಗ ವೆಟ್ರಿ ಕಳಗಂ ಎಲ್ಲಾ ಪಕ್ಷಗಳೊಂದಿಗೆ ನಿಲ್ಲುತ್ತದೆ. ಈ ಕೆಟ್ಟ ಪರಿಸ್ಥಿತಿಯಲ್ಲಿ ತಮಿಳುನಾಡು ಕಲ್ಯಾಣವನ್ನು ಯಾರು ವಿರೋಧಿಸುತ್ತಾರೆ ಎಂಬುದನ್ನು ಬಹಿರಂಗಪಡಿಸಲಾಗುತ್ತದೆ. ತಮಿಳುನಾಡು ಕಲ್ಯಾಣಕ್ಕಾಗಿ ಯಾರು ನಿಲ್ಲುತ್ತಾರೆ ಎಂಬುದನ್ನು ಸಹ ತಿಳಿಯುತ್ತದೆ ಎಂದು ನಟ, ತಮಿಳಗ ವೆಟ್ರಿ ಕಳಗಂ ಮುಖ್ಯಸ್ಥ ವಿಜಯ್ ಟ್ವೀಟ್ ಮಾಡಿದ್ದಾರೆ.

> ಸಂಸದೀಯ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸಬೇಕು, ಅಗತ್ಯ ಸಾಂವಿಧಾನಿಕ ತಿದ್ದುಪಡಿಗಳನ್ನು ಮಾಡಬೇಕು. ಈ ಸರ್ವಪಕ್ಷ ಸಭೆಯು ಈ ಬೇಡಿಕೆಗಳನ್ನು ತಮಿಳುನಾಡಿನ ಕನಿಷ್ಠ ನಿರೀಕ್ಷೆಗಳಾಗಿ ಇರಿಸುತ್ತದೆ. ನಾವು ಈ ವಿಷಯವನ್ನು ಜನರ ಬಳಿಗೆ ತೆಗೆದುಕೊಂಡು ಹೋಗಿ ಅದರ ಬಗ್ಗೆ ಜಾಗೃತಿ ಮೂಡಿಸುತ್ತೇವೆ. ಈ ವಿಷಯವನ್ನು ಮುಂದಕ್ಕೆ ಕೊಂಡೊಯ್ಯಲು ದಕ್ಷಿಣ ಭಾರತದ ಸಂಸದರಿಗಾಗಿ ಜಂಟಿ ಕ್ರಿಯಾ ಸಮಿತಿಯನ್ನು ಸಹ ರಚಿಸುತ್ತೇವೆ
>
> -ಎಂ.ಕೆ.ಸ್ಟಾಲಿನ್, ಮುಖ್ಯಮಂತ್ರಿ

# ಮಿನಿ ನ್ಯೂಸ್

## ಡಿಕೆಶಿ ಕುಂಭಮೇಳದ ಆಯೋಜನೆಯನ್ನು ಹೊಗಳಿದ್ದನ್ನು ಪ್ರಸ್ತಾಪಿಸಿದ ಯೋಗಿ

**ಲಕ್ನೋ:** ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮಹಾಕುಂಭ ಆಯೋಜನೆಯನ್ನು ಪ್ರಶಂಸಿರುವುದನ್ನು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಲ್ಲಿನ ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ್ದಾರೆ. ಮಹಾಕುಂಭ ಆಯೋಜನೆಯ ಕುರಿತು ಸಮಾಜವಾದಿ ಪಕ್ಷದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿ ಮಾತನಾಡಿದ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ಕರ್ನಾಟಕದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆಯನ್ನು ಉಲ್ಲೇಖಿಸಿ ಅಖಿಲೇಶ್ ಯಾದವ್ ಅವರನ್ನು ತೀವ್ರ ತರಾಟೆಗೆ ತಗೆದುಕೊಂಡಿದ್ದಾರೆ.

ಡಿ.ಕೆ. ಶಿವಕುಮಾರ್ ಅವರಂತಹ ಅನೇಕ ನಾಯಕರು ಮಹಾಕುಂಭ ಮೇಳದಲ್ಲಿ ಭಾಗವಹಿಸಿ ಪುಣ್ಯ ಸ್ನಾನ ಮಾಡಿ, ಅದರ ಆಯೋಜನೆಯ ಕುರಿತು ಶ್ಲಾಘಿಸಿ ಮಾತನಾಡಿದ್ದಾರೆ. ಆದರೆ, ನೀವೂ ಅಖಿಲೇಶ್ ಯಾದವ್ ಸಹ ಅಲ್ಲಿಗೆ ಹೋಗಿದ್ದೀರಿ. ಅದು ನಿಮ್ಮ ನಂಬಿಕೆ. ಆದರೆ ನಿಮ್ಮ ಚಿಕ್ಕಪ್ಪ ಹೋಗಲು ಸಾಧ್ಯವಾಗಲಿಲ್ಲ. ಆದ್ದರಿಂದ ನೀವು ನಿಮ್ಮ ಚಿಕ್ಕಪ್ಪ ಶಿವಪಾಲ್ ಸಿಂಗ್ ಯಾದವ್ ಅವರನ್ನು ಮೆಚ್ಚಿಸಲು ಈ ರೀತಿ ಯ ಹೇಳಿಕೆ ನೀಡಿದ್ದೀರಾ ಎಂದು ಕಿಚಾಯಿಸಿದ್ದಾರೆ. 45 ದಿನದಲ್ಲಿ 66.30 ಕೋಟಿ ಭಕ್ತರು ತ್ರಿವೇಣಿ ಸಂಗಮದಲ್ಲಿ ಮಿಂದೆದಿದ್ದಾರೆ. ಮಹಾಕುಂಭಮೇಳದಲ್ಲಿ ಮೂರೂವರೆ ಲಕ್ಷ ಕೋಟಿ ರೂಪಾಯಿಯ ವಹಿವಾಟು ನಡೆದಿದೆ. 130 ದೋಣಿಗಳ ನಾವಿಕರು 30 ಕೋಟಿ ರೂಪಾಯಿ ಆದಾಯ ಗಳಿಸಿದ್ದಾರೆ. ಕುಂಭಮೇಳದ ಅಚ್ಚುಕಟ್ಟು ವ್ಯವಸ್ಥೆ ಬಗ್ಗೆ ಕರ್ನಾಟಕ ಡಿಸಿಎಂ ಡಿಕೆ ಶಿವಕುಮಾರ್ ನನಗೆ ಕರೆ ಮಾಡಿ ಶ್ಲಾಘಿಸಿದ್ದಾರೆ ಎಂದು ಸದನಕ್ಕೆ ಸಿಎಂ ಯೋಗಿ ಮಾಹಿತಿ ನೀಡಿದ್ದಾರೆ.

## ಕತ್ತು ಸೀಳಿ ವೈದ್ಯನನ್ನು ಕೊಂದ ಪತ್ನಿ, ಮಗ


**ಹೈದರಾಬಾದ್:** ಪತ್ನಿ, ಮಗ ಸೇರಿಕೊಂಡು ವೈದ್ಯರೊಬ್ಬರನ್ನು ಕೊಲೆ ಮಾಡಿರುವ ಘಟನೆ ಹೈದರಾಬಾದ್‌ನ ಬಂಡ್ಲಗುಡದಲ್ಲಿ ನಡೆದಿದೆ. ಮೃತ ವೈದ್ಯರನ್ನು ಡಾ. ಮಸಿಯುದ್ದೀನ್ ಎಂದು ಗುರುತಿಸಲಾಗಿದೆ. ಅವರು ಇಲ್ಲಿನ ಕ್ರಿಸ್ಟಕ್ ಕಾಲೊನಿಯಲ್ಲಿ ಪತ್ನಿ ಶಬಾನಾ, ಮಗ ಸಮೀರ್ ಜತೆ ವಾಸಿಸುತ್ತಿದ್ದರು. ಶಬಾನಾ ಹಾಗೂ ಸಮೀರ್ ಮಸಿಯುದ್ದೀನ್ ಅವರ ಕೈ-ಕಾಲುಗಳನ್ನು ಕಟ್ಟಿಹಾಕಿ ಕತ್ತು ಸೀಳುವ ಮೂಲಕ ಕೊಲೆ ಮಾಡಿದ್ದಾರೆ.

ಕೊಲೆಯ ಬಗ್ಗೆ ಮಾಹಿತಿ ಪಡೆದ ಬಂಡ್ಲಗುಡ ಪೊಲೀಸರು ಸ್ಥಳಕ್ಕೆ ಧಾವಿಸಿ ತನಿಖೆ ಆರಂಭಿಸಿದ್ದಾರೆ. ಅಧಿಕಾರಿಗಳು ಪ್ರಕರಣವನ್ನು ಎಲ್ಲಾ ಸಂಭಾವ್ಯ ಕೋನಗಳಿಂದ ತನಿಖೆ ನಡೆಸುತ್ತಿದ್ದಾರೆ. ಪ್ರಸ್ತುತ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ. ಪತಿ ಪತ್ನಿಯರ ನಡುವೆ ಪದೇ ಪದೇ ಜಗಳ ನಡೆಯುತ್ತಿತ್ತು ಎನ್ನಲಾಗಿದೆ ಆದರೆ ಮಗ ಹಾಗೂ ಪತ್ನಿ ಕೊಲೆ ಮಾಡುವ ಹಂತಕ್ಕೆ ಹೋಗಿದ್ದಾರೆ ಎಂದರೆ ಇದರ ಹಿಂದೆ ಬೇರೆ ಉದ್ದೇಶ ಇರಬೇಕು ಎಂದು ಶಂಕಿಸಿರುವ ಪೊಲೀಸರು ತನಿಖೆ ತೀವ್ರಗೊಳಿಸಿದ್ದಾರೆ.

## ಶಾಂತಿ ಸ್ಥಾಪನೆ। ಉಕ್ರೇನ್‌ನಿಂದ ಸಕಾರಾತ್ಮಕ ಹೆಜ್ಜೆ: ರಷ್ಯಾ

**ಮಾಸ್ಕೊ:** ಮೂರು ವರ್ಷಗಳಿಂದ ನಡೆಯುತ್ತಿರುವ ಯುದ್ಧಕ್ಕೆ ಅಂತ್ಯ ಹಾಡುವುದಕ್ಕಾಗಿ ಮಾತುಕತೆ ನಡೆಸಲು ಸಿದ್ಧ ಎಂಬುದಾಗಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಹೇಳಿರುವುದು ಈ ನಿಟ್ಟಿನಲ್ಲಿನ ಸಕಾರಾತ್ಮಕ ಹೆಜ್ಜೆ ಎಂದು ರಷ್ಯಾ ಬುಧವಾರ ಹೇಳಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಕ್ರೆಮಿನ್ ವಕ್ತಾರ ಡಿಮಿಟ್ರಿ ಪೆಸ್ಕೋವ್.ಸಾಮಾನ್ಯವಾಗಿ, ಶಾಂತಿ ಸ್ಥಾಪನೆ ಉದ್ದೇಶಕ್ಕೆ ಇಂತಹ ವಿಧಾನದ ಮೊರೆ ಹೋಗಲಾಗುತ್ತದೆ. ಇದು ಸಕಾರಾತ್ಮಕವಾದ ಹೆಜ್ಜೆ ಎಂದಿದ್ದಾರೆ.

> ನಮ್ಮ ಜನರಿಗೆ ಸುರಕ್ಷಿತವಾದ ಭವಿಷ್ಯ ಬೇಕಾಗಿದೆ. ತಾತ್ಕಾಲಿಕ ಕದನವಿರಾಮ ಅಗತ್ಯವಿಲ್ಲ. ಶಾಶ್ವತವಾಗಿ ಯುದ್ಧಕ್ಕೆ ಅಂತ್ಯ ಹಾಡಬೇಕಾಗಿದೆ. ಅಮೆರಿಕದ ನೇತೃತ್ವ ಮತ್ತು ನಮ್ಮ ಸತತ ಪ್ರಯತ್ನಗಳಿಂದ ಇದು ಸಾಧ್ಯವಾಗಲಿದೆ
>
> -ವೊಲೊಡಿಮಿರ್ ಝುಲೆನ್‌ಸ್ಕಿ, ಉಕ್ರೇನ್ ಅಧ್ಯಕ್ಷ



ಆದರೆ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಜೊತೆ ನೇರ ಮಾತುಕತೆ ಸಾಧ್ಯವಿಲ್ಲ ಎಂಬುದಾಗಿ, ಝುಲೆನ್‌ಸ್ಕಿ ಅವರು ಹೊರಡಿಸಿರುವ ಆದೇಶವೊಂದರಲ್ಲಿ ಹೇಳಲಾಗಿದೆ ಎಂದೂ ಪೆಸ್ಕೋವ್ ಹೇಳಿದ್ದಾರೆ. ಶಾಶ್ವತ ಶಾಂತಿ ಸ್ಥಾಪನೆಗಾಗಿ ಮಾತುಕತೆ ನಡೆಸುವುದಕ್ಕೆ ಸಿದ್ಧ ಎಂದು ಝುಲೆನ್‌ಸ್ಕಿ ಹೇಳಿದ್ದರು. ಇದಕ್ಕೆ ರಷ್ಯಾ ಕೂಡ ಈಗ ಪ್ರತಿಕ್ರಿಯಿಸಿರುವುದು ಗಮನಾರ್ಹ.

## ಮಾದಕ ವಸ್ತು ಸಾಗಣೆ ಮೂವರು ಭಾರತೀಯರ ಸೆರೆ

**ಕಂಠ್ಮಡು:** ಮಾದಕ ವಸ್ತುಗಳನ್ನು ಕಳ್ಳಸಾಗಣೆ ಮಾಡಿದ ಆರೋಪದ ಮೇಲೆ ದಕ್ಷಿಣ ನೇಪಾಳದಲ್ಲಿ ಮೂವರು ಭಾರತೀಯರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಹಾರ ಮೂಲದ ಗೌತಮ್ ಕುಶ್ವಾಹ(35), ರಂಜನ್ ಕುಮಾರ್ ಸಿಂಗ್ (30) ಮತ್ತು ಸಂಜೀವ್ ಕುಮಾರ್ ರಾಮ್(40) ಬಂಧಿತರು. ಜಿಟ್ಪುರ್ ಸಿಮಾರಾ ಪಾಲಿಕೆ ಪ್ರದೇಶದ ಹೋಟೆಲ್‌ವೊಂದರ ಮೇಲೆ ದಾಳಿ ಮಾಡಿದಾಗ 170 ಗ್ರಾಂ ಬ್ರೌನ್ ಶುಗರ್ ಸಮೇತ ಸಿಕ್ಕಿಬಿದ್ದಿದ್ದಾರೆ. ಮೂವರನ್ನೂ ವಶಕ್ಕೆ ಪಡೆದು ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಅಮೆರಿಕ ವಿರುದ್ಧ ಡಬ್ಲ್ಯುಟಿಒನಲ್ಲಿ ದೂರು ದಾಖಲಿಸಿದ ಕೆನಡಾ

**ಜಿನೀವಾ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ದಿಢೀರ್ ಸುಂಕ ಹೆಚ್ಚಳದ ನಿರ್ಧಾರ ಖಂಡಿಸಿ ಅಮೆರಿಕ ವಿರುದ್ಧ ಕೆನಡಾ, ವಿಶ್ವ ವ್ಯಾಪಾರ ಸಂಸ್ಥೆಗೆ ದೂರು ದಾಖಲಿಸಿದೆ ಎಂದು ಡಬ್ಲ್ಯುಟಿಒ ದೃಢಪಡಿಸಿದೆ. ಡಬ್ಲ್ಯುಟಿಒನಲ್ಲಿನ ಕೆನಡಾದ ರಾಯಭಾರಿ ನಾಡಿಯಾ ಥಿಯೋಡರ್ ಈ ಬಗ್ಗೆ ಲಿಂಕ್ಸ್ ಇನ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದು, ಅಮೆರಿಕ ನಿರ್ಧಾರದ ವಿರುದ್ಧ ನಮಗೆ ಬೇರೆ ಯಾವುದೇ ಆಯ್ಕೆಯಿಲ್ಲ ಎಂದು ಬರೆದುಕೊಂಡಿದ್ದಾರೆ. ಕೆನಡಾ ಮೇಲಿನ ನ್ಯಾಯಸಮ್ಮತವಲ್ಲದ ಸುಂಕಗಳಿಗೆ ಸಂಬಂಧಿಸಿದಂತೆ ಅಮೆರಿಕ ಸರ್ಕಾರದೊಂದಿಗೆ ಡಬ್ಲ್ಯುಡಿಒ ಸಮಾಲೋಚನೆ ನಡೆಸಬೇಕೆಂದು ಕೋರಿರುವುದಾಗಿ ಅವರು ಹೇಳಿದ್ದಾರೆ.

ಚೀನಾದ ಸರಕುಗಳ ಮೇಲೆ ಅಮೆರಿಕದ ಹೊಸ ಸುಂಕಗಳ ಕುರಿತು ಚೀನಾ ಸಲ್ಲಿಸಿದ ಇದೇ ರೀತಿಯ ದೂರಿನ ನಂತರ, ಕೆನಡಾ ಹೆಚ್ಚುವರಿ ಸುಂಕಗಳ ಕುರಿತು ಡಬ್ಲ್ಯುಟಿಒನಲ್ಲಿ ಅಮೆರಿಕ ವಿರುದ್ಧ ದೂರು ದಾಖಲಿಸಿದೆ. ಜನವರಿ 20ರಂದು ಅಧಿಕಾರಕ್ಕೆ ಮರಳಿದ್ದ ಡೊನಾಲ್ಡ್ ಟ್ರಂಪ್, ಪ್ರಮುಖ ವ್ಯಾಪಾರ ಪಾಲುದಾರರಾದ ಕೆನಡಾ, ಮೆಕ್ಸಿಕೊದಿಂದ ಆಮದುಗಳ ಮೇಲೆ ಶೇ 25ರಷ್ಟು ಸುಂಕಗಳನ್ನು ಘೋಷಿಸಿ, ಬಳಿಕ, ತಾತ್ಕಾಲಿಕವಾಗಿ ತಡೆಹಿಡಿದಿದ್ದರು. ಹೊಸ ಸುಂಕಗಳು ಜಾರಿಗೆ ಬಂದಿವೆ.

